ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೪

**ಪಟ್ಟಿ – ೩೦**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೇ ಅಧಿವೇಶನ

## (ಮುಂದುವರೆದ ಉಪವೇಶನ)

**ಮಂಗಳವಾರ, ದಿನಾಂಕ: ೨೧ನೇ ನವೆಂಬರ್, ೨೦೧೭**

---

## ಸಮೂಹ – II

೧. ಇಂಧನ ಸಚಿವರು.

೨. ಕೃಷಿ ಸಚಿವರು.

೩. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೪. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.

೫. ಸಹಕಾರ ಸಚಿವರು.

೬. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.

೭. ಜವಳಿ ಹಾಗೂ ಮುಜರಾಯಿ ಸಚಿವರು.

---

## ಹೈನುಗಾರಿಕೆ ಮಹಾವಿದ್ಯಾಲಯ ಕಾಮಗಾರಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೩೮೩೮ (೪೫೦೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ತಾಲ್ಲೂಕಿನ ಮಹಾಗಾಂವದಲ್ಲಿ ಹೈನುಗಾರಿಕೆ ಮಹಾವಿದ್ಯಾಲಯ ಭಾರತೀಯ ಕೃಷಿ ಅನುಸಂಧಾನ ಪರಿಷತ್ ಮಾರ್ಗಸೂಚಿಗಳ ಪ್ರಕಾರ ಈ ಯೋಜನೆಯ ಕಾಮಗಾರಿಯನ್ನು ಸಂಪೂರ್ಣಗೊಳಿಸಲಾಗಿದೆಯೇ; ಇದಕ್ಕೆ ನಿಗದಿಪಡಿಸಿರುವ ಅಂದಾಜು ಮೊತ್ತಕ್ಕಿಂತ ಹೆಚ್ಚುವರಿ ಹಣ ವೆಚ್ಚ ಮಾಡಲಾಗಿದೆಯೇ; (ವಿವರ ನೀಡುವುದು)

(ಆ) ಸದರಿ ಮಹಾವಿದ್ಯಾಲಯಕ್ಕಾಗಿ ಸರ್ಕಾರದಿಂದ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನ ಎಷ್ಟು; (ಮಾಹಿತಿ ನೀಡುವುದು)

(ಇ) ಈ ಮಹಾವಿದ್ಯಾಲಯದಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಹಾಗೂ ವಿದ್ಯಾರ್ಥಿಗಳಿಗೆ ಇರುವ ಸೌಲಭ್ಯಗಳಾವುವು; (ಮಾಹಿತಿ ನೀಡುವುದು)

(ಈ) ಸದರಿ ಮಹಾವಿದ್ಯಾಲಯದಲ್ಲಿ ಸರ್ಕಾರದಿಂದ ಮಂಜೂರಾಗಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಬೋಧಕರ ಸಂಖ್ಯೆ ಎಷ್ಟು? (ಸಂಪೂರ್ಣ ಮಾಹಿತಿ ನೀಡುವುದು)

## “ಪಶುಭಾಗ್ಯ” ಯೋಜನೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೩೮೩೯ (೪೫೦೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್– ಕರ್ನಾಟಕ ಪ್ರದೇಶದ ೬ ಜಿಲ್ಲೆಗಳ ಹಾಗೂ ಹರಪ್ಪನಹಳ್ಳಿಯಲ್ಲಿ ಕಳೆದ ೨ ವರ್ಷಗಳಿಂದ ಪಶುಭಾಗ್ಯ ಯೋಜನೆಯಡಿಯಲ್ಲಿ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; (ಜಿಲ್ಲಾವಾರು ವರ್ಷಾವಾರು ಮಾಹಿತಿ ನೀಡುವುದು)

(ಆ) ಸದರಿ ಭಾಗದಲ್ಲಿ ಪಶುಭಾಗ್ಯ ಯೋಜನೆಯಡಿ ಬಿಡುಗಡೆ ಮಾಡಿರುವ ಅನುದಾನದಲ್ಲಿ ರೈತರು ಮತ್ತು ಅತಿ ಸಣ್ಣ ರೈತರಿಗೆ ಹಾಗೂ ಭೂರಹಿತ ಫಲಾನುಭವಿಗಳಿಗೆ ಇತರೆ ಯಾವ ಯೋಜನೆಗಳನ್ನು ಕಲ್ಪಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕ ಭಾಗದವರಿಗೆ ಡಾ॥ ನಂಜುಂಡಪ್ಪ ವರದಿಯಂತೆ ಹಾಗೂ ಅಮೃತ ಯೋಜನೆಯಡಿಯಲ್ಲಿ ರೂಪಿಸಲಾಗಿರುವ ಅನುದಾನ ಎಷ್ಟು ಹಾಗೂ ಎಷ್ಟು ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸೋಲಾರ್ ವಿದ್ಯುತ್ ಉತ್ಪಾದನೆ ಯೋಜನೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೩೮೪೦ (೪೫೦೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆ ಎಂದಿನಿಂದ ಜಾರಿಗೆ ಬಂದಿದೆ; (ಮಾಹಿತಿ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಹಾಗೂ ಹರಪ್ಪನಹಳ್ಳಿಯಲ್ಲಿ ಸದರಿ ಯೋಜನೆಯಡಿ ಎಷ್ಟು ಜನ ರೈತರ ಕೃಷಿ ಜಮೀನಿನಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡಲು ಇಲ್ಲಿಯವರೆಗೆ ಬಂದಿರುವ ಅರ್ಜಿಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಎಷ್ಟು ರೈತರಿಂದ ಸೋಲಾರ್ ವಿದ್ಯುತ್ ಖರೀದಿಸಲು ಒಪ್ಪಂದ (Power Purchase Agreement) ಗಳನ್ನು ಮಾಡಿಕೊಳ್ಳಲಾಗಿದೆ; ಹಾಗಿದ್ದಲ್ಲಿ, ಕೃಷಿ ಜಮೀನಿನಲ್ಲಿ ಉತ್ಪಾದನೆ ಸಂಬಂಧದಲ್ಲಿ ರೈತರಿಗೆ ಸರ್ಕಾರವು ನೀಡುತ್ತಿರುವ ರಿಯಾಯಿತಿ ಹಾಗೂ ವಿಶೇಷ ಸೌಲಭ್ಯಗಳಾವುವು; (ತಾಲ್ಲೂಕುವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

ಈ) ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಸೋಲಾರ್ ವಿದ್ಯುತ್ ಯೋಜನೆಗಳು ಹಾಗೂ ಕಾಮಗಾರಿಗಳಾವುವು; ಈ ಯೋಜನೆಯಡಿಯಲ್ಲಿ ಇದುವರೆಗೂ ಎಷ್ಟು ಮೆಗಾವ್ಯಾಟ್ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡಲಾಗಿದೆ? (ತಾಲ್ಲೂಕುವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದ ಸಹಕಾರ ಬ್ಯಾಂಕ್‌ಗಳಲ್ಲಿನ ನೇಮಕಾತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೪೧ (೪೩೯೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಸಹಕಾರ ಬ್ಯಾಂಕ್‌ಗಳಲ್ಲಿ ನೇಮಕಾತಿ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಹುದ್ದೆವಾರು, ಜಿಲ್ಲಾವಾರು, ವಿವರ ನೀಡುವುದು;

(ಆ) ಮಂಡ್ಯ ಜಿಲ್ಲೆಯ ಸಹಕಾರಿ ಬ್ಯಾಂಕ್‌ಗಳಲ್ಲಿ ನೇಮಕಾತಿ ಮಾಡುವಾಗ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತಪ್ಪಿತಸ್ಥರ ವಿರುದ್ಧ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿಯ ಸಹಕಾರಿ ಬ್ಯಾಂಕ್‌ಗಳಲ್ಲಿ ಇದುವರೆಗೆ ತುಂಬಲಾಗಿರುವ ಹುದ್ದೆಗಳೆಷ್ಟು; ಹಾಲಿ ಖಾಲಿಯಿರುವ ಹುದ್ದೆಗಳೆಷ್ಟು;

(ಈ) ಹುದ್ದೆಗಳು ಖಾಲಿ ಇದ್ದಲ್ಲಿ ಯಾವಾಗ ಭರ್ತಿ ಮಾಡಲಾಗುವುದು? (ವಿವರ ನೀಡುವುದು)

## ಕೃಷಿ ಕ್ಷೇತ್ರಕ್ಕೆ ಯುವಕರನ್ನು ಆಕರ್ಷಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೪೨ (೪೩೯೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿನ ರೈತರಿಗೆ ಕಳೆದ ನಾಲ್ಕು ವರ್ಷಗಳಲ್ಲಿ ಕೃಷಿಗಾಗಿ ಸರ್ಕಾರದಿಂದ ನೀಡಲಾಗಿರುವ ಸೌಲಭ್ಯಗಳೇನು: (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ರೈತರ ಬೆಳೆಹಾನಿಗೆ ಸಂಬಂಧಪಟ್ಟಂತೆ ವಿತರಿಸಲಾಗಿರುವ ಅನುದಾನವೆಷ್ಟು; (ತಾಲ್ಲೂಕುವಾರು ಫಲಾನುಭವಿಗಳ ವಿಳಾಸ, ಹೆಸರುಗಳೊಂದಿಗೆ ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿನ ಯುವಕರುಗಳನ್ನು ಕೃಷಿ ಕ್ಷೇತ್ರಕ್ಕೆ ಆಕರ್ಷಿಸಲು ಸರ್ಕಾರ ಕಾರ್ಯಕ್ರಮಗಳೇನಾದರೂ ಹಾಕಿಕೊಂಡಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಈ) ಕಳೆದ ೪ ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿನ ರೈತರ ಬೆಳೆ ಹಾನಿ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಬೆಂಗಳೂರು ಮತ್ತು ಮೈಸೂರು ಹೆದ್ದಾರಿಯ ಅಗಲೀಕರಣ ಕಾಮಗಾರಿ ಸ್ಥಗಿತಗೊಂಡಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೪೩ (೪೩೯೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮತ್ತು ಮೈಸೂರು ಹೆದ್ದಾರಿಯ ಅಗಲೀಕರಣ ಕಾಮಗಾರಿ ಕೆಲಸ ಸ್ಥಗಿತಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ಸ್ಥಗಿತಗೊಳ್ಳಲು ಕಾರಣಗಳೇನು;

(ಆ) ರಾಜ್ಯ ಸರ್ಕಾರದಿಂದ ಈವರೆವಿಗೂ ಭೂಸ್ವಾಧೀನ ಕೆಲಸ ಆಗಿಲ್ಲದಿರುವುದು ನಿಜವೇ; ಕಾರಣವೇನು; ವಿವರ ನೀಡುವುದು?

## ಮುಜರಾಯಿ ಇಲಾಖೆಯಡಿಯಲ್ಲಿ ಬರುವ ದೇವಸ್ಥಾನಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೪೪ (೪೩೯೪) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯಡಿಯಲ್ಲಿ ಬರುವ ದೇವಸ್ಥಾನಗಳು ಎಷ್ಟು;

(ಆ) ರಾಜ್ಯದ ಎಲ್ಲಾ ದೇವಸ್ಥಾನಗಳಿಂದ ಬರುವ ಆದಾಯ ಎಷ್ಟು; (ದೇವಸ್ಥಾನವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಅತೀ ಹೆಚ್ಚು ಆದಾಯ ಹೊಂದಿರುವ ಮತ್ತು ಅತೀ ಕಡಿಮೆ ಆದಾಯ ಹೊಂದಿರುವ ದೇವಸ್ಥಾನಗಳು ಯಾವುವು? (ವಿವರ ನೀಡುವುದು)

## ರೈತರ ಹೊಲದಲ್ಲಿನ ಟ್ರಾನ್ಸ್‌ಫಾರಂಗಳು ಸುಟ್ಟಾಗ ಪುನಃ ಅಳವಡಿಸಲು ವಿಳಂಬ ಮಾಡುತ್ತಿರುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೮೪೫ (೪೩೭೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ಹೊಲದಲ್ಲಿನ ಟ್ರಾನ್ಸಫಾರಂಗಳು ಸುಟ್ಟಾಗ ಅವುಗಳನ್ನು ಪುನಃ ಅಳವಡಿಸಲು ಇರುವ ನಿಯಮಗಳೇನು;

(ಆ) ಟ್ರಾನ್ಸ್‌ಫಾರಂ ಸುಟ್ಟ ಬಗ್ಗೆ ಇಲಾಖೆಗೆ ರೈತರು ಅರ್ಜಿ ಸಲ್ಲಿಸಿದ ತಕ್ಷಣ ಯಾವ ಕ್ರಮ ಕೈಗೊಳ್ಳಬೇಕೆಂಬ ಬಗ್ಗೆ ಮಾರ್ಗದರ್ಶಿ ಸೂತ್ರಗಳನ್ನು ರೂಪಿಸಲಾಗಿದೆ;

(ಇ) ರೂಪಿಸಿದ್ದಲ್ಲಿ, ಅಧಿಕಾರಿಗಳು ಹಾಗೂ ಪವರ್‌ಮ್ಯಾನಗಳು ಎಷ್ಟು ದಿನಗಳೊಳಗಾಗಿ ರೈತರ ಹೊಲಗಳಿಗೆ ಭೇಟಿ ನೀಡಬೇಕೆಂದು ಕಾಲಮಿತಿ ನಿಗಧಿಪಡಿಸಲಾಗಿದೆ;

(ಈ) ಕಾಲಮಿತಿ ನಿಗದಿಪಡಿಸಿದ್ದಲ್ಲಿ ಅದನ್ನು ಅಧಿಕಾರಿಗಳು ಹಾಗೂ ಪವರ್‌ಮ್ಯಾನ್‌ಗಳು ಪಾಲಿಸದಿರುವುದು ನಿಜವೆ;

(ಉ) ಟ್ರಾನ್ಸ್‌ಫಾರಂಗಳು ಸುಟ್ಟ ಬಗ್ಗೆ ಇಲಾಖೆಗೆ ಅರ್ಜಿ ಬಂದ ಎಷ್ಟು ದಿನಗಳ ನಂತರ ಅವುಗಳನ್ನು ಬದಲಾಯಿಸಲಾಗುವುದು;

(ಊ) ಉದ್ದೇಶ ಪೂರ್ವಕವಾಗಿ ಅಧಿಕಾರಿಗಳು ಹಾಗೂ ಪವರ್‌ಮ್ಯಾನ್‌ಗಳು ರೈತರ ಹೊಲಗಳಿಗೆ ಭೇಟಿ ನೀಡದಿರುವುದು ಗಮನಕ್ಕೆ ಬಂದಿದೆಯೇ;

(ಋ) ಬಂದಿದ್ದಲ್ಲಿ, ಈ ಸಮಸ್ಯೆಯು ಪರಿಹಾರಕ್ಕೆ ಯಾವ ಪರಿಹಾರೋಪಾಯಗಳನ್ನು ರೂಪಿಸಲಾಗಿದೆ?

## ರೈತರ ಪಂಪ್‌ಸೆಟ್‌ಗಳಿಗೆ ಟ್ರಾನ್ಸ್‌ಫಾರಂಗಳನ್ನು ಅಳವಡಿಸಲು ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೮೪೬ (೪೩೮೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆಸ್ಕಾಂ ವ್ಯಾಪ್ತಿಯ ಜಿಲ್ಲೆಗಳ ರೈತರ ಪಂಪಸೆಟ್‌ಗಳಿಗೆ ಟ್ರಾನ್ಸ್‌ಫಾರಂಗಳನ್ನು ಅಳವಡಿಸಲು ಇಲ್ಲಿಯವರೆಗೆ ಅರ್ಜಿ ಸಲ್ಲಿಸಿದ ರೈತರ ಸಂಖ್ಯೆ ಎಷ್ಟು;

(ಆ) ರೈತರ ಪಂಪ್‌ಸೆಟ್‌ಗಳಿಗೆ ಟ್ರಾನ್ಸ್‌ಫಾರಂಗಳನ್ನು ಅಳವಡಿಸಲು ವಿಳಂಬವಾಗಿರುವುದು ನಿಜವೆ; ಎಷ್ಟು ದಿನಗಳಿಂದ ರೈತರ ಅರ್ಜಿಗಳು ಬಾಕಿ ಇವೆ;

(ಇ) ರೈತರ ಪಂಪ್‌ಸೆಟ್ಟುಗಳಿಗೆ ಟ್ರಾನ್ಸ್‌ಫಾರಂಗಳನ್ನು ಅಳವಡಿಸಲು ಉದ್ದೇಶ ಪೂರ್ವಕವಾಗಿ ವಿಳಂಬ ಮಾಡುತ್ತಿರುವುದು ನಿಜವೆ;

(ಈ) ಹಾಗಿದ್ದಲ್ಲಿ, ಟ್ರಾನ್ಸ್‌ಫಾರಂಗಳನ್ನು ಅಳವಡಿಸಲು ನಿಗದಿತ ವೇಳಾಪಟ್ಟಿಯನ್ನು ಹೆಸ್ಕಾಂ ನಿಗದಿಪಡಿಸದಿರಲು ಕಾರಣಗಳೇನು;

(ಉ) ರೈತರ ಈ ಸಮಸ್ಯೆಯನ್ನು ಸಂಪೂರ್ಣವಾಗಿ ಬಗೆಹರಿಸಲು ಈಗಲಾದರೂ ಕಾಲ ನಿಗದಿಪಡಿಸಿ ಆದೇಶ ಹೊರಡಿಸಲು ನಿರ್ಧರಿಸಲಾಗಿದೆಯೇ?

## ರೈತರ ಸಾಲಮನ್ನಾ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೮೪೭ (೪೫೨೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ಬ್ಯಾಂಕು ಮತ್ತು ಇನ್ನಿತರ ಹಣಕಾಸು ಸಂಸ್ಥೆಗಳ ಮೂಲಕ ಸಾಲ ಪಡೆದಂತಹ ರೈತರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸಾಲ ಮನ್ನಾ ಮಾಡಲಾಗಿರುವ ರೈತರ ಸಂಖ್ಯೆ ಎಷ್ಟು; ಉಳಿದ ಸಾಲವನ್ನು ಒಂದೇ ಬಾರಿ ಮನ್ನಾ ಮಾಡಲು ಸರಕಾರ ಕ್ರಮ ಕೈಗೊಳ್ಳುವುದೇ;

(ಇ) ರಾಜ್ಯ ಮತ್ತು ಕೇಂದ್ರ ಸರಕಾರ ಸಂಸ್ಥೆಗಳಲ್ಲಿ ಇರುವ ಸಾಲವೆಷ್ಟು; ರಾಜ್ಯ ಸರಕಾರ ಅಡಿಯಲ್ಲಿರುವ ಸಾಲವೆಷ್ಟು?

## ಟೋಲ್ ನಿರ್ವಹಣಾ ಸಂಸ್ಥೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

**ಮತ್ತು**

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು)**

೩೮೪೮ (೪೫೨೩+೪೫೨೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಗಳ ಸಂಖ್ಯೆ ಎಷ್ಟು; ಅವು ಯಾವುವು; ಇವುಗಳ ಉದ್ದ ಎಷ್ಟು;

(ಆ) ಸದರಿ ಹೆದ್ದಾರಿಗಳಲ್ಲಿ ನಿರ್ಮಿಸಿರುವ ಟೋಲ್‌ಗಳು ಎಷ್ಟು; ಅವು ಯಾವುವು; ನಿರ್ವಹಿಸುತ್ತಿರುವ ಸಂಸ್ಥೆಗಳು ಯಾವುವು; (ವಿವರವಾದ ಮಾಹಿತಿ ನೀಡುವುದು)

(ಇ) ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ಟೋಲ್ ನಿರ್ವಹಣಾ ಸಂಸ್ಥೆಗಳೊಂದಿಗೆ ಮಾಡಿಕೊಂಡಿರುವ ಒಪ್ಪಂದಗಳೇನು; (ವಿವರವಾದ ಮಾಹಿತಿ ನೀಡುವುದು)

(ಈ) ಈ ಒಪ್ಪಂದದಲ್ಲಿ ಯಾವ ಯಾವ ವಾಹನಗಳಿಗೆ ವಿನಾಯಿತಿ ನೀಡಲಾಗಿದೆ; ಇದಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ದ್ವಾರ ನಿರ್ಮಿಸಿದ್ದಾರೆಯೇ;

(ಉ) ನಿರ್ಮಿಸಿದ್ದರೆ, ಟೋಲ್‌ವಾರು ವಿವರವಾದ ಮಾಹಿತಿ ನೀಡುವುದು; ನಿರ್ಮಿಸದಿದ್ದರೆ ಸರ್ಕಾರ ಈ ಸಂಬಂಧ ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಂಡು ನಿರ್ಮಿಸಲಾಗುವುದು?

## ಹಾಪ್‌ಕಾಮ್ಸ್‌ಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೪೯ (೪೨೮೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಹಾಪ್‌ಕಾಮ್ಸ್‌ಗಳಿಗೆ ಹಣ್ಣು ಮತ್ತು ತರಕಾರಿ ಮಾರುಕಟ್ಟೆಯನ್ನು ವ್ಯವಸ್ಥಿತವಾಗಿ ಕಲ್ಪಿಸಲು ಕೆ.ಎಂ.ಎಫ್ ಮತ್ತು ಕೆ.ಓ.ಎಫ್ ಮಾದರಿಯಲ್ಲಿ ಕರ್ನಾಟಕ ಸರ್ಕಾರದ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಕಾಯಿದೆ ೨೦೦೦ ೪(ಜಿ) ವಿನಾಯಿತಿ ನೀಡಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಆ) ರಾಜ್ಯದಲ್ಲಿರುವ ಹಾಪ್‌ಕಾವ್ಸ್‌ಗಳಿಗೆ ಪಾರದರ್ಶಕ ಕಾಯ್ದೆ–೨೦೦೦ರ ೪(ಜಿ) ವಿನಾಯಿತಿ ನೀಡಿದರೆ ಎಷ್ಟು ತರಕಾರಿ ಮತ್ತು ಹಣ್ಣುಗಳ ವಹಿವಾಟು ಹೆಚ್ಚಿಗೆ ಆಗುವುದು ಮತ್ತು ಈಗ ಮಾರಾಟ ಮಾಡುತ್ತಿರುವ ಹಣ್ಣು ಮತ್ತು ತರಕಾರಿ ವಹಿವಾಟುಗಳು ಎಷ್ಟು; (ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಹಾಪ್ ಕಾಮ್ಸ್‌ಗಳಿಗೆ ಕರ್ನಾಟಕ ಸರ್ಕಾರದ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಕಾಯ್ದೆ–೨೦೦೦ರ ೪(ಜಿ) ವಿನಾಯಿತಿ ನೀಡುವ ಪ್ರಸ್ತಾವನೆ ಸರಕಾರದ ಮುಂದೆ ಇದೆಯೇ; ಇದ್ದರೆ ಯಾವ ಕಾರಣದಿಂದ ಇದುವರೆಗೆ ಕಾರ್ಯಾದೇಶ ಆಗಿರುವುದಿಲ್ಲ; ಇಲ್ಲದಿದ್ದರೆ, ಇದಕ್ಕೆ ಕಾರಣಗಳೇನು; ಯಾವಾಗ ಕಾರ್ಯಾದೇಶ ನೀಡಲಾಗುತ್ತದೆ?

# ಸುವರ್ಣ ವಿಧಾನ ಸೌಧದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೫೦ (೪೨೮೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಸುವರ್ಣ ವಿಧಾನಸೌಧ ನಿರ್ಮಾಣಕ್ಕೆ ಖರ್ಚಾದ ಹಣ ಎಷ್ಟು; ಉದ್ಘಾಟನೆಯಾಗಿ ಎಷ್ಟು ವರ್ಷವಾಯಿತು; ಸುವರ್ಣ ವಿಧಾನಸೌಧದ ವಾರ್ಷಿಕ ನಿರ್ವಹಣಾ ವೆಚ್ಚವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಉತ್ತರ ಕರ್ನಾಟಕದ ಬೆಳಗಾವಿ ಸುವರ್ಣ ವಿಧಾನಸೌಧವನ್ನು ಕೇವಲ ಪ್ರವಾಸಿ ತಾಣಕ್ಕಾಗಿ ನಿರ್ಮಾಣ ಮಾಡಲಾಗಿದೆಯೇ; ಸುವರ್ಣ ವಿಧಾನಸೌಧ ನಿರ್ಮಾಣವಾದ ನಂತರ ಎಷ್ಟು ಸಾರ್ವಜನಿಕರಿಗೆ ಇದರ ಉಪಯೋಗ ಲಭಿಸಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಉತ್ತರ ಕರ್ನಾಟಕ ಜನರು ತಮ್ಮ ಸಮಸ್ಯೆಗಳನ್ನು, ಅಹವಾಲನ್ನು ತೋಡಿಕೊಳ್ಳಲು, ಜನಪ್ರತಿನಿಧಿಗಳು ತಮ್ಮ ಅಭಿವೃದ್ಧಿ ಪರ ಬೇಡಿಕೆಗಳನ್ನು ಹೇಳಲು ಬೆಂಗಳೂರಿಗೆ ಬಂದು ಅಧಿಕಾರಿಗಳು/ ಸಚಿವರನ್ನು ಭೇಟಿಗಾಗಿ ಸಾವಿರಾರು ರೂಪಾಯಿ ಹಣ ಖರ್ಚು ಮಾಡಿಕೊಂಡು ಬರುತ್ತಿರುವುದು ಸರಕಾರದ ಗಮನಕ್ಕೆ ಬಂದಿಲ್ಲವೇ;

(ಈ) ಬೆಳಗಾವಿಯಲ್ಲಿ ಆಡಳಿತ ಯಂತ್ರದ ಅಂಗವನ್ನು ಸ್ಥಾಪಿಸಲು ಬಹುದಿನದ ಬೇಡಿಕೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಯಾವ ಕ್ರಮಕೈಗೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು)

## ಮುಜರಾಯಿ ಇಲಾಖೆಯ ದೇವಸ್ಥಾನಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೮೫೧ (೪೫೩೩) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಮುಜರಾಯಿ ಇಲಾಖೆಯ ದೇವಸ್ಥಾನಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಮುಜರಾಯಿ ಇಲಾಖೆಯ ದೇವಸ್ಥಾನಗಳಲ್ಲಿ ಅರ್ಚಕರಾಗಿ ಕಾರ್ಯನಿರ್ವಹಿಸುತ್ತಿರುವ ಅರ್ಚಕರುಗಳಿಗೆ ಸರ್ಕಾರದಿಂದ ನೀಡುವ ಸೌಲಭ್ಯಗಳೇನು? (ವಿವರ ನೀಡುವುದು)

## ಹಾಲು ಉತ್ಪಾದಕರಿಗೆ ನೀಡುತ್ತಿರುವ ಪ್ರೋತ್ಸಾಹಧನದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೮೫೨ (೪೫೩೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಲು ಉತ್ಪಾದಕರ ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಪ್ರತಿ ಲೀಟರ್‌ಗೆ ನೀಡುತ್ತಿರುವ ೨೦ ಪೈಸೆ ಪ್ರೋತ್ಸಾಹಧನ ಕಳೆದ ಒಂದು ವರ್ಷದಿಂದ ಬಿಡುಗಡೆಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಸರ್ಕಾರ ಪ್ರೋತ್ಸಾಹ ಧನ ಬಿಡುಗಡೆ ಮಾಡಲು ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯಲ್ಲಿ ೨೦೧೬–೧೭ನೇ ಸಾಲಿನಲ್ಲಿ ಹಾಲು ಉತ್ಪಾದಕರಿಗೆ ನೀಡಿರುವ ಪ್ರೋತ್ಸಾಹ ಧನ ಎಷ್ಟು?

## ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ಅನುದಾನದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೮೫೩ (೪೫೩೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಯಚೂರು ಜಿಲ್ಲೆಗೆ ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಅಪೆಂಡಿಕ್ಸ್–ಇ, ಎಸ್.ಹೆಚ್.ಡಿ.ಪಿ, ಸಿ.ಆರ್.ಎಫ್, ನಬಾರ್ಡ್, ಯೋಜನೆಗಳ ಮುಖಾಂತರ ಮಂಜೂರಾಗಿರುವ ಅನುದಾನ ಎಷ್ಟು?

## ಬೆಳೆಗಳಿಗೆ ಸರ್ಕಾರದಿಂದ ಸೂಕ್ತ ಬೆಲೆ ನೀಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೮೫೪ (೪೫೩೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಬೆಳೆಯುವ ಬೆಳಗಳಾದ ಹತ್ತಿ, ತೊಗರಿ ಹಾಗೂ ಇತರೆ ಬೆಳೆಗಳಿಗೆ ಸೂಕ್ತ ಬೆಲೆ ಸಿಗಲು ಸರ್ಕಾರ ತೆಗೆದುಕೊಂಡ ಕ್ರಮವೇನು;

(ಆ) ತುಂಗಾಭದ್ರ ಅಚ್ಚುಕಟ್ಟು ಪ್ರದೇಶದಲ್ಲಿ ಬದಲಾದ ವಾತಾವರಣ ಹಾಗೂ ನೀರು ಸಂಗ್ರಹಣ ಕೊರತೆಯಿಂದ ರೈತರಿಗೆ ಸೂಕ್ತ ಬೆಳೆಗಳನ್ನು ಬೆಳೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಗ್ರಾಮ ಜ್ಯೋತಿ ಯೋಜನೆ ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೮೫೫ (೪೫೨೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಸೋಲಾರ್ ವಿದ್ಯುತ್ ಘಟಕಗಳ ಮುಖಾಂತರ ಪ್ರತಿ ನಿತ್ಯ ಸರ್ಕಾರ ಖರೀದಿ ಮಾಡುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು;

(ಆ) ರಾಯಚೂರಿನಲ್ಲಿರುವ Y.T.P.S ಸ್ಥಾಪಿಸಲಿರುವ ೧೬೦೦ಮೆಗಾ ವ್ಯಾಟ್ (ಎರಡು ಘಟಕಗಳ ಮುಖಾಂತರ) ವಿದ್ಯುತ್ ಉತ್ಪಾದನೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ಜಿಲ್ಲೆಯಲ್ಲಿ ಧೀನದಯಾಳ್ ಉಪಾಧ್ಯಾಯ ಗ್ರಾಮ ಜ್ಯೋತಿ ಯೋಜನೆ ಯಾವಾಗಿನಿಂದ ಕಾರ್ಯಗತಗೊಳಿಸಲಾಗುವುದು; ಈ ಯೋಜನೆಗೆ ಖರ್ಚಾಗುವ ವೆಚ್ಚ ಎಷ್ಟು;

(ಈ) ರಾಯಚೂರು ಜಿಲ್ಲೆಯಲ್ಲಿ IPDS (Intigrated Power Development Scheme) ಕಾರ್ಯಗತಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಉ) ರಾಯಚೂರು ಜಿಲ್ಲೆಯಲ್ಲಿ ಜೆಸ್ಕಾಂ ವಿಭಾಗದಲ್ಲಿ (GESCOM) ಖಾಲಿ ಇರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; GESCOM ವಿಭಾಗದಲ್ಲಿ ಮಾರ್ಗದಾಳು (ಲೈನ್‌ಮ್ಯಾನ್) ಹುದ್ದೆಗಳನ್ನು ನೇಮಕಾತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಸರ್ಕಾರಿ ನೌಕರರ ಸಂಘದ ಸ್ಥಿರಾಸ್ತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೮೫೬ (೪೪೮೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘ ಮತ್ತು ಅದರ ಜಿಲ್ಲಾ ಸಂಘಗಳ ಸ್ಥಿರಾಸ್ತಿ ಮತ್ತು ಚರಾಸ್ತಿಯ ಸಂಪೂರ್ಣ ಮಾಹಿತಿ ಒದಗಿಸುವುದು; ಅವುಗಳ ಮಾಲೀಕತ್ವಕ್ಕೆ ಸಂಬಂಧಿಸಿದ ವಿವರ ನೀಡುವುದು;

(ಆ) ಈ ಸ್ಥಿರಾಸ್ತಿಗಳನ್ನು ಸರ್ಕಾರವು ಮಂಜೂರು ಮಾಡಿರುವುದೇ ಅಥವಾ ಸ್ವಂತ ಗಳಿಕೆಯಿಂದ ಹೊಂದಿರುತ್ತವೆಯೇ; (ವಿವರ ನೀಡುವುದು)

(ಇ) ಈ ಸಂಘಗಳ ಸ್ಥಿರಾಸ್ತಿಗಳ ಇಂದಿನ ಮಾರುಕಟ್ಟೆ ಮೌಲ್ಯಗಳೇನು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಸ್ಥಿರಾಸ್ತಿಗಳಿಗೆ ಸಂಬಂಧಿಸಿದಂತೆ ತೆರಿಗೆಗಳನ್ನು ಕಾಲಕಾಲಕ್ಕೆ ಸರ್ಕಾರಕ್ಕೆ ಪಾವತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮವೇನು;

(ಉ) ಯಾವ ಯಾವ ಸ್ಥಿರಾಸ್ತಿಗಳಿಗೆ ಸಂಬಂಧಿಸಿದಂತೆ ಎಷ್ಟು ಮೊತ್ತದ ತೆರಿಗೆಯನ್ನು ಬಾಕಿ ಉಳಿಸಿಕೊಳ್ಳಲಾಗಿದೆ?

## ಸರ್ಕಾರಿ ನೌಕರರ ಸಂಘದ ಕಟ್ಟಡದ ಮಾಲೀಕತ್ವ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೮೫೭ (೪೪೮೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘಕ್ಕೆ ಒದಗಿಸಿರುವ ಜಾಗ ಮತ್ತು ಕಟ್ಟಡಗಳ ಅಸಲಿ ಮಾಲೀಕತ್ವ ಯಾರ ಹೆಸರಿನಲ್ಲಿದೆ;

(ಆ) ಈ ಜಾಗ ಮತ್ತು ಕಟ್ಟಡವನ್ನು ನೌಕರರ ಸಂಘಕ್ಕೆ ಗುತ್ತಿಗೆ ನೀಡಲಾಗಿದೆಯೇ; ನೀಡಿದ್ದಲ್ಲಿ, ಎಷ್ಟು ವರ್ಷಗಳಿಗೆ ಯಾವ ದರದಲ್ಲಿ ಗುತ್ತಿಗೆ ನೀಡಲಾಗಿದೆ; (ಅದರ ಸಂಪೂರ್ಣ ವಿವರ ನೀಡುವುದು)

(ಇ) ಈ ಜಾಗ ಮತ್ತು ಕಟ್ಟಡದ ವಿಸ್ತೀರ್ಣವೆಷ್ಟು; ಇದರ ನಿರ್ವಹಣೆಯನ್ನು ಲೋಕೋಪಯೋಗಿ ಇಲಾಖೆ ಮಾಡುತ್ತಿದ್ದು, ಇದರ ನಿರ್ವಹಣೆಯ ವಾರ್ಷಿಕ ವೆಚ್ಚದ ಮಾಹಿತಿ ಒದಗಿಸುವುದು? (ಕಳೆದ ೫ ವರ್ಷಗಳ ಮಾಹಿತಿ ಒದಗಿಸುವುದು)

## ಕುಲಪತಿಗಳ ನೇಮಕ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೮೫೮ (೪೪೯೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್‌ನಲ್ಲಿರುವ ಪಶುವೈದ್ಯಕೀಯ ವಿಶ್ವವಿದ್ಯಾಲಯದ ಕುಲಪತಿಯ ಹುದ್ದೆಯು ೧೪ ತಿಂಗಳುಗಳಿಂದ ಖಾಲಿ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು;

(ಆ) ಈ ವಿಶ್ವವಿದ್ಯಾಲಯಕ್ಕೆ ಕುಲಪತಿ ನೇಮಕಾತಿ ಸಂಬಂಧ ಸರ್ಚ್ ಕಮಿಟಿ ರಚಿಸಲಾಗಿದೆಯೇ; ಯಾವ ದಿನಾಂಕದಂದು ರಚಿಸಲಾಗಿದೆ; ಇಲ್ಲಿಯವರೆಗೂ ಈ ಕಮಿಟಿ ಎಷ್ಟು ಸಭೆಗಳನ್ನು ನಡೆಸಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಕುಲಪತಿ ಹುದ್ದೆ ಖಾಲಿ ಇರುವುದರಿಂದ ವಿಶ್ವವಿದ್ಯಾಲಯದ ಆಡಳಿತ ಯಂತ್ರ ಕುಸಿದಿದ್ದು, ವಿಶ್ವವಿದ್ಯಾಲಯದ ಸರ್ವತೋಮುಖ ಬೆಳವಣಿಗೆ ಕುಂಠಿತವಾಗಿವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಕುಲಪತಿಯ ನೇಮಕಾತಿಗೆ ವಿಳಂಬವಾಗಲು ಕಾರಣಗಳೇನು; (ವಿವರವಾದ ಮಾಹಿತಿ ನೀಡುವುದು)

(ಉ) ಯಾವ ಕಾಲಮಿತಿಯೊಳಗೆ ಕುಲಪತಿಗಳನ್ನು ನೇಮಕ ಮಾಡಲಾಗುವುದು?

## ಸರ್ಕಾರಿ ನೌಕರರ ಸಂಘದ ಕಟ್ಟಡದ ಮಾರುಕಟ್ಟೆ ಬೆಲೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೮೫ (೪೪೮೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಟ್ಟಡ ಉದ್ಯಾನವನ ಬೆಂಗಳೂರು–೦೧ ಈ ಸಂಘಕ್ಕೆ ಒದಗಿಸಿರುವ ಜಾಗ ಮತ್ತು ಕಟ್ಟಡದ ವಿಸ್ತೀರ್ಣವೆಷ್ಟು;

(ಆ) ಈ ಜಾಗ ಮತ್ತು ಕಟ್ಟಡದ ಇಂದಿನ ಮಾರುಕಟ್ಟೆ ದರವೇನು;

(ಇ) ಈ ಜಾಗ ಮತ್ತು ಕಟ್ಟಡಗಳಿಗೆ ಬಿ.ಬಿ.ಎಂ.ಪಿ. ಯು ವಾರ್ಷಿಕವಾಗಿ ನಿಗಧಿಪಡಿಸಿರುವ ತೆರಿಗೆಯ ಮೊತ್ತವೇನು; ತೆರಿಗೆಯು ಕಾಲಕಾಲಕ್ಕೆ ಪಾವತಿಯಾಗಿದ್ದಲ್ಲಿ, ವರ್ಷಾವಾರು, ಕಳೆದ ೫ ವರ್ಷಗಳ ಮಾಹಿತಿಯನ್ನು ನೀಡುವುದು;

(ಈ) ಸಂಘವು ಬಿ.ಬಿ.ಎಂ.ಪಿ. ಗೆ ತೆರಿಗೆ ಕಟ್ಟದೇ ಬಾಕಿ ಉಳಿಸಿಕೊಂಡಿದ್ದಲ್ಲಿ, ಉಳಿಸಿಕೊಂಡಿರುವ ಒಟ್ಟು ಮೊತ್ತವೆಷ್ಟು; ಸದರಿ ಮೊತ್ತವನ್ನು ವಸೂಲಿ ಮಾಡಲು ಬಿ.ಬಿ.ಎಂ.ಪಿ. ತೆಗೆದುಕೊಂಡಿರುವ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ವಸೂಲಿ ಮಾಡಲಾಗುವುದು?

## ೩೧೫ ಜನರನ್ನು ಕಂಪನಿ ಸೇವೆಯಲ್ಲಿ ವಿಲೀನಗೊಳಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೮೬೦ (೪೫೨೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ವೃಂದ ಮತ್ತು ನೇರ ನೇಮಕಾತಿ ನಿಯಮಗಳ ಪ್ರಕಾರ ಮಂಜೂರಾದ ಹುದ್ದೆಗಳು ಎಷ್ಟು; ಹಾಲಿ ಭರ್ತಿ ಆಗಿರುವ ಹುದ್ದೆಗಳು ಹಾಗೂ ಖಾಲಿ ಉಳಿದಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು, ಪದನಾಮ, ವೇತನ ಶ್ರೇಣಿ, ತಿಂಗಳಿಗೆ ದೊರೆಯಬಹುದಾದ ವೇತನ ಒಳಗೊಂಡಂತೆ ವಿವರವಾದ ಮಾಹಿತಿ ಕೊಡುವುದು)

(ಆ) ಸದರಿ ನಿಗಮದ ೭೮ನೇ ಆಡಳಿತ ಮಂಡಳಿಯ ದಿನಾಂಕ:೨೦.೦೯.೨೦೧೬ರ ನಡವಳಿಗಳು ಏನು; ಈ ಸಭೆಯಲ್ಲಿ ೩೧೫ ಜನರನ್ನು ಕಂಪನಿ ಸೇವೆಯಲ್ಲಿ ವಿಲೀನಗೊಳಿಸಿ ಖಾಯಂ ಮಾಡಿರುವುದು ನಿಜವೇ; (ನಡವಳಿಯ ಪ್ರತಿಯೊಂದಿಗೆ ಮಾಹಿತಿ ಕೊಡುವುದು)

(ಇ) ಈ ೩೧೫ ಜನರು ಯಾವ ಹುದ್ದೆಗಳಲ್ಲಿ ಯಾವ ಯಾವ ದಿನಾಂಕದಿಂದ ಕಾರ್ಯನಿರ್ವಹಿಸುತ್ತಿದ್ದರು; ಇವರನ್ನು ಖಾಯಂ ಮಾಡುವ ಸಂಬಂಧ ಮಾನ್ಯ ಉಚ್ಛ ನ್ಯಾಯಾಲಯದ ಆದೇಶ ಏನಿದೆ; (ಆದೇಶದ ಪ್ರತಿಯೊಂದಿಗೆ ಮಾಹಿತಿ ನೀಡುವುದು)

(ಈ) ೩೧೫ ಜನರನ್ನು ಯಾವ ಹುದ್ದೆಯಡಿ ಕಂಪನಿ ಸೇವೆಯಲ್ಲಿ ವಿಲೀನಗೊಳಿಸಲಾಯಿತು; ಇವರ ವೇತನ ಶ್ರೇಣಿ ಎಷ್ಟು; ಹಾಲಿ ಇವರು ಪಡೆಯುತ್ತಿರುವ ೧ ತಿಂಗಳ ವೇತನ ಎಷ್ಟು;

(ಉ) ಸದರಿ ಆಡಳಿತ ಮಂಡಳಿಯ ಸಭೆಯಲ್ಲಿ ಹಾಜರಿದ್ದ ಅಧ್ಯಕ್ಷರು ಮತ್ತು ನಿರ್ದೇಶಕರು ಯಾರು ಯಾರು ? (ವಿವರವಾದ ಮಾಹಿತಿ ಕೊಡುವುದು)

## ವಿದ್ಯುತ್ ಅವಘಡಗಳಿಂದ ಜೀವಹಾನಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೬೧ (೪೩೯೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿದ್ಯುತ್ ಅವಘಡದಿಂದ ರಾಜ್ಯದಲ್ಲಿ ಜನ ಜಾನುವಾರುಗಳ ಜೀವ ಹಾನಿಯಾಗುತ್ತಿದ್ದು ಇದನ್ನು ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ಕಳೆದ ಮೂರು ವರ್ಷಗಳಲ್ಲಿ ವಿದ್ಯುತ್ ಅವಘಡದಿಂದ ಎಷ್ಟು ಜೀವ ಹಾನಿಯಾಗಿದೆ; ಅವರಿಗೆ ಯಾವ ರೀತಿ ಪರಿಹಾರ ನೀಡಲಾಗಿದೆ;

(ಇ) ಅನೇಕ ಕಡೆಗಳಲ್ಲಿ ವಿದ್ಯುತ್ ತಂತಿಗಳು ತುಂಡಾಗಿ ಅದರಲ್ಲೂ ಮಳೆಗಾಲದಲ್ಲಿ ಅವಘಡಗಳು ಹೆಚ್ಚಾಗುತ್ತಿರುವುದರಿಂದ ವಿದ್ಯುಚ್ಛಕ್ತಿ ಮಂಡಳಿಯವರು ತಪಾಸಣೆ ಮಾಡಿ ಅವಘಡಗಳನ್ನು ತಪ್ಪಿಸಲು ಕೈಗೊಳ್ಳುತ್ತಿರುವ ಕ್ರಮಗಳಾವುವು?

## ರಾಜ್ಯಾದ್ಯಂತ ರಸ್ತೆಗಳು ಹಾಳಾಗಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೮೬೨ (೪೨೪೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿವರ್ಷ ಸಾವಿರಾರು ಕೋಟಿ ಹಣ ಖರ್ಚು ಮಾಡುತ್ತಿದ್ದರೂ ರಾಜ್ಯಾದ್ಯಂತ ಮಳೆಗಾಲದ ನಂತರ ರಸ್ತೆಗಳು ಇಷ್ಟೊಂದು ಹಾಳಾಗಲು ಕಾರಣಗಳೇನು:

(ಆ) ರಸ್ತೆಗಳ ನಿರ್ಮಾಣ ಸಮಯದಲ್ಲಿ ಗುಣಮಟ್ಟದ ಕಾಮಗಾರಿಯನ್ನು ನಿರ್ವಹಿಸಲು ಇರುವ ಮಾನದಂಡಗಳೇನು;

(ಇ) ಈ ಮಾನದಂಡಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿಯನ್ನು ಗುರುತಿಸಲಾಗಿದೆಯೇ;

(ಈ) ಲೋಕೋಪಯೋಗಿ ಇಲಾಖೆಯ ರಸ್ತೆ ನಿರ್ಮಾಣ ಹಾಗೂ ನಿರ್ವಹಣೆ ಕಾಮಗಾರಿಗಳಲ್ಲಿ ವ್ಯಾಪಕ ಭ್ರಷ್ಟಾಚಾರ ಇದೆಯೆಂದು ಮಾಧ್ಯಮಗಳಲ್ಲಿ ಪ್ರಕಟವಾಗುತ್ತಿರುವುದು ನಿಜವೇ; ಈ ಕುರಿತಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

## ಮುಂಗಾರು ಮಳೆಯಿಂದ ಆಗಿರುವ ಹಾನಿಯ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೮೬೩ (೪೨೪೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತಡವಾಗಿ ಪ್ರಾರಂಭವಾದ ಮುಂಗಾರು ಮಳೆಯಿಂದಾಗಿ ನಿರಂತರವಾಗಿ ಆಗಿರುವ ಹಾನಿಯ ಕುರಿತು ಸಮೀಕ್ಷೆ ನಡೆಸಲಾಗಿದೆಯೆ; (ಜಿಲ್ಲಾವಾರು ವಿವರ ನೀಡುವುದು)

(ಆ) ತಡವಾಗಿ ಪ್ರಾರಂಭವಾದ ಮುಂಗಾರು ಮಳೆ ಹಾಗೂ ನಂತರ ಸುರಿದ ಮಳೆಯಿಂದಾಗಿ ಕೃಷಿ ಚಟುವಟಿಕೆಗಳಿಗೆ ತೊಂದರೆಯಾದ ಹಿನ್ನಲೆಯಲ್ಲಿ ರೈತರ ನೆರವಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಬದಲಾಗುತ್ತಿರುವ ಮುಂಗಾರು ಮಳೆಯ ಹಂಚಿಕೆಯ ವಿಧದಿಂದಾಗಿ (Distribution Pattron) ರಾಜ್ಯದ ಕೃಷಿಯ ಮೇಲಾಗುತ್ತಿರುವ ಪರಿಣಾಮಗಳನ್ನು ಎದುರಿಸಲು ಸರ್ಕಾರ ದೂರಗಾಮಿ ಯೋಜನೆಯನ್ನು ಹಮ್ಮಿಕೊಂಡಿದೆಯೇ; (ವಿವರ ನೀಡುವುದು)

(ಈ) ಕೃಷಿಗಾಗಿ ಲಭ್ಯವಿರುವ ನೀರಿನ ಸಂಪನ್ಮೂಲದ ಸದ್ಬಳಕೆಗಾಗಿ ಹಾಗೂ ನೀರಿನ ಅತಿಯಾದ ಬಳಕೆಯಿಂದಾಗಿ ಮಣ್ಣಿನ ಮೇಲೆ ಉಂಟಾಗುತ್ತಿರುವ ದುಷ್ಪರಿಣಾಮಗಳನ್ನು ಕಡಿಮೆ ಮಾಡಲು ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳ ವಿವರ ನೀಡುವುದು?

## ಹೊರ ದೇಶದಿಂದ ಅಕ್ರಮವಾಗಿ ಆಮದಾಗುತ್ತಿರುವ ಕಾಳುಮೆಣಸಿನ ವಿಚಾರ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೮೬೪ (೪೨೪೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗಿನ ಕಾಳುಮೆಣಸಿಗೆ ಹೊರ ದೇಶಗಳಿಂದ ಆಮದಾದ ಕರಿಮೆಣಸು ಮಿಶ್ರಣಗೊಂಡು ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ವಿಯೆಟ್ನಾಂ ದೇಶದಿಂದ ಕಳಪೆ ದರ್ಜೆಯ ಮೆಣಸಿನ ಕಾಳನ್ನು ಆಮದು ಮಾಡಿಕೊಂಡು ಇಲ್ಲಿಯ ಗೋಧಾಮುಗಳಲ್ಲಿ ಸಂಗ್ರಹಿಸಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹೊರದೇಶದಿಂದ ಬಂದ ಕಳಪೆ ದರ್ಜೆಯ ಕರಿಮೆಣಸು ಅತೀ ಕಡಿಮೆ ಬೆಲೆಗೆ ಮಾರಾಟವಾಗುತ್ತಿದ್ದು, ಸ್ಥಳೀಯವಾಗಿ ಬೆಳೆದ ಉತ್ತಮ ಗುಣಮಟ್ಟದ ಕಾಳುಮೆಣಸನ್ನು ಬೆಳೆಯಲು ಆಗುವ ಖರ್ಚನ್ನು ನಿಭಾಯಿಸದ ಸ್ಥಿತಿಯಲ್ಲಿ ರೈತರು ಇದ್ದು, ಇವರ ರಕ್ಷಣೆಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಈ) ಹೊರ ದೇಶದಿಂದ ಅಕ್ರಮವಾಗಿ ಆಮದಾಗುತ್ತಿರುವ ಕಾಳುಮೆಣಸಿಗೆ ಕಡಿವಾಣ ಹಾಕಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

## ರಾಜ್ಯದ ರೈತರಿಗೆ ಬೇಕಾಗುವ ವಿವಿಧ ರೀತಿಯ ರಸಗೊಬ್ಬರದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೮೬೫ (೪೨೪೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರೈತರಿಗೆ ವಾರ್ಷಿಕವಾಗಿ ಬೇಕಾಗುವ ವಿವಿಧ ರೀತಿಯ ರಸಗೊಬ್ಬರದ ಪ್ರಮಾಣವೆಷ್ಟು; (ವಿವರ ನೀಡುವುದು)

(ಆ) ಈ ರಸಗೊಬ್ಬರವನ್ನು ಯಾವ ಯಾವ ಮೂಲಗಳಿಂದ ಖರೀದಿಸಲಾಗುವುದು ಮತ್ತು ವಿತರಿಸಲಾಗುವುದು;

(ಇ) ಪ್ರತಿ ವರ್ಷ ರೈತರು ಹಲವು ವಿಧದ ರಸಗೊಬ್ಬರ ಸಿಗದೆ ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದರೆ, ಬೇಡಿಕೆಗೆ ತಕ್ಕಂತೆ ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೮೬೬ (೪೨೪೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದಿಂದ ರಾಜ್ಯದ ಕೃಷಿ ಇಲಾಖೆಗೆ ವಿವಿಧ ಉದ್ದೇಶಗಳಿಗೆ ಕಳೆದ ೪ ವರ್ಷಗಳಿಂದ ಬಿಡುಗಡೆಯಾದ ಅನುದಾನದ ವಿವರ ನೀಡುವುದು;

(ಆ) ಬಿಡುಗಡೆ ಮಾಡಿದ ಅನುದಾನದಲ್ಲಿ ವೆಚ್ಚ ಮಾಡಿದ ವಿವರವನ್ನು ಉದ್ದೇಶವಾರು ನೀಡುವುದು;

(ಇ) ಬಿಡುಗಡೆಯಾದ ಅನುದಾನದಲ್ಲಿ ಖರ್ಚಾಗದೇ ಬಾಕಿ ಇರುವ ಹಣ ಎಷ್ಟು; ಇದಕ್ಕೆ ಕಾರಣಗಳನ್ನು ನೀಡುವುದು?

## ಬೇಡ್ತಿ ಸೇತುವೆ ಕಾಮಗಾರಿ ವಿಳಂಬ ನೀತಿ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೬೭ (೪೨೮೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನ ಶಿರಸಿಗೆ ಹೋಗುವ ಮಾರ್ಗದಲ್ಲಿರುವ ಬೇಡ್ತಿ ಸೇತುವೆ ಕಾಮಗಾರಿ ಇಲಾಖೆಯ ವಿಳಂಬ ನೀತಿ ಹಾಗೂ ಅಸಹಕಾರದಿಂದ ಪ್ರಗತಿ ಕುಂಠಿತವಾಗಿದ್ದು, ಬರುವ ಮಾರ್ಚ್‌ನಲ್ಲಿ ಮುಕ್ತಾಯಗೊಳ್ಳಬೇಕಾದ ಈ ಯೋಜನೆ ಇನ್ನೂ ಒಂದು ವರ್ಷದ ಹೆಚ್ಚಿನ ಅವಧಿ ತೆಗೆದುಕೊಳ್ಳುವ ಸಾಧ್ಯತೆ ಇರುವ ವಿಷಯ ಸರಕಾರದ ಗಮನಕ್ಕೆ ಬಂದಿರುತ್ತದೆಯೇ; (ವಿವರ ನೀಡುವುದು)

(ಆ) ಸದರಿ ಸೇತುವೆ ನಿರ್ಮಾಣ ಕಾಮಗಾರಿ ಕುಂಠಿತವಾಗಲು ಕಾರಣವೇನು; ಇಲಾಖೆಯ ನಿರ್ಲಕ್ಷದಿಂದ ಬಿಡುಗಡೆಯಾದ ಅನುದಾನ ಮರಳಿ ಹೋಗಿರುತ್ತದೆಯೆಂದು ತಿಳಿದು ಬಂದಿದ್ದು, ಇದಕ್ಕೆ ಯಾರು ಹೊಣೆಗಾರರು; (ವಿವರ ನೀಡುವುದು)

(ಇ) ಮಾರ್ಚ್ ೨೦೧೮ರೊಳಗಾಗಿ ಮುಗಿಯಬೇಕಾದ ಕಾಮಗಾರಿ ಪೂರ್ಣಗೊಳ್ಳಲು ಇನ್ನು ಎಷ್ಟು ಅವಧಿ ಬೇಕಾಗಬಹುದು? (ವಿವರ ನೀಡುವುದು)

## ಮುಜರಾಯಿ ದೇವಸ್ಥಾನಗಳನ್ನು ಜೀರ್ಣೋದ್ಧಾರ ಮಾಡುವ ಬಗ್ಗೆ

**ಶ್ರೀ ಎಂ. ಎ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೬೮ (೪೫೪೨) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಸ್ಥಾನಗಳು ಅವ್ಯವಸ್ಥೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಆ) ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಸ್ಥಾನಗಳಿಂದ ೨೦೦೦–೦೧ ರಿಂದ ೨೦೧೭–೧೮ನೇ ಸಾಲಿನವರೆಗೆ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು; (ವರ್ಷಾವಾರು ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಸ್ಥಾನಗಳ ಜೀರ್ಣೋದ್ಧಾರ ಮಾಡಲು ೨೦೦೦–೦೧ ರಿಂದ ೨೦೧೭–೧೮ನೇ ಸಾಲಿನವರೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ಕಾಮಗಾರಿಗಳ ವಿವರ ಮತ್ತು ಕಾಮಗಾರಿಗಳಿಗೆ ಆದ ವೆಚ್ಚದ ವಿವರಗಳನ್ನು ನೀಡುವುದು)

## ಕೇಂದ್ರ ಸರ್ಕಾರದ ವತಿಯಿಂದ ರಾಷ್ಟ್ರೀಯ ಹೆದ್ದಾರಿಗೆ ನೀಡಲಾಗುತ್ತಿರುವ ಅನುದಾನದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೮೭೬ (೪೫೦೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ ರಿಂದ ೨೦೧೭–೧೮ನೇ ಸಾಲಿನವರೆಗೆ ಕರ್ನಾಟಕ ರಾಜ್ಯಕ್ಕೆ ಕೇಂದ್ರ ಸರ್ಕಾರದಿಂದ ರಾಷ್ಟ್ರೀಯ ಹೆದ್ದಾರಿಗಳಿಗೆ ನೀಡಲಾದ ಅನುದಾನ ಎಷ್ಟು; ಬೇಡಿಕೆ ಎಷ್ಟು; (ವಿವರ ಒದಗಿಸುವುದು)

(ಆ) ಮೇಲಿನ ಮೂರು ವರ್ಷಗಳಲ್ಲಿ ಎಷ್ಟು ಕಿ.ಮೀ ರಾಷ್ಟ್ರೀಯ ಹೆದ್ದಾರಿಯನ್ನು ನಿರ್ಮಿಸಲಾಗಿದೆ; (ವಿವರ ಒದಗಿಸುವುದು)

(ಇ) ಖಾಸಗಿ ಸಹಭಾಗಿತ್ವದಲ್ಲಿ ಎಷ್ಟು ಕಿ.ಮೀ ರಾಷ್ಟ್ರೀಯ ಹೆದ್ದಾರಿಯನ್ನು ಸ್ಥಾಪಿಸಲಾಗಿದೆ; ಟೋಲ್‌ಗೇಟ್ ಅಳವಡಿಸುವಾಗ ಯಾವ ನಿಯಮಗಳನ್ನು ಪಾಲಿಸಲಾಗಿದೆ; ಒಂದು ಟೋಲ್‌ಗೇಟ್‌ನಿಂದ ಇನ್ನೊಂದು ಟೋಲ್‌ಗೇಟ್‌ಗೆ ಎಷ್ಟು ಅಂತರ ಇರಬೇಕು; (ವಿವರ ಒದಗಿಸುವುದು)

(ಈ) ರಾಷ್ಟ್ರೀಯ ಹೆದ್ದಾರಿಗಳ ನಿರ್ವಹಣೆಯು ಕಳಪೆಯಾಗಿರುವ ದೂರುಗಳಿದ್ದು, ಗುಣಮಟ್ಟ ಹೆಚ್ಚಿಸಲು ಇಲಾಖೆ ಕೈಗೊಂಡ ಕ್ರಮಗಳೇನು?

## ಹಾಲು ಉತ್ಪಾದನೆ ಪ್ರಮಾಣದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು)**

೩೮೭೦ (೪೫೦೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಉತ್ಪತ್ತಿಯಾಗುವ ಹಾಲಿನ ಪ್ರಮಾಣ ಎಷ್ಟು; ರಾಜ್ಯಕ್ಕೆ ಬೇಕಾಗಿರುವ ಹಾಲಿನ ಅವಶ್ಯಕತೆ ಎಷ್ಟು; ರಾಜ್ಯದಲ್ಲಿ ಅತ್ಯಂತ ಹೆಚ್ಚು ಹಾಲು ಉತ್ಪತ್ತಿ ಮಾಡುವ ಜಿಲ್ಲೆ ಯಾವುದು; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಪಶುಗಳ ರಕ್ಷಣೆಗೆ ಪ್ರತಿ ಹೋಬಳಿ ಮಟ್ಟದಲ್ಲಿ ಪಶು ಚಿಕಿತ್ಸಾಲಯವನ್ನು ಸ್ಥಾಪಿಸಲು ಇಲಾಖೆ ಕ್ರಮ ಕೈಗೊಂಡಿದೆಯೇ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಪಶುವೈದ್ಯಕೀಯ ಆಸ್ಪತ್ರೆಗಳಿವೆ? (ಜಿಲ್ಲಾವಾರು ವಿವರ ಒದಗಿಸುವುದು)

## ಕೃಷಿ ಹೊಂಡಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು)**

೩೮೭೧ (೪೫೦೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ; ಯಾವ ಮಾನದಂಡದಲ್ಲಿ ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ; (ವಿವರ ಒದಗಿಸುವುದು)

(ಆ) ಇದಕ್ಕಾಗಿ ಮೀಸಲಿಟ್ಟ ಅನುದಾನ ಎಷ್ಟು; (ವಿವರ ಒದಗಿಸುವುದು)

(ಇ) ಭತ್ತದ ಕೃಷಿಯನ್ನು ಉತ್ತೇಜಿಸಲು ಇಲಾಖೆ ಕೈಗೊಂಡ ಕ್ರಮಗಳೇನು; ದಕ್ಷಿಣ ಕನ್ನಡ ಜಿಲ್ಲೆಯ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಭತ್ತದ ಕೃಷಿಯನ್ನು ಮಾಡಲಾಗುತ್ತಿದೆ? (ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಎ,ಬಿ,ಸಿ ದರ್ಜೆಯ ದೇವಸ್ಥಾನಗಳ ವಿವರ ಕುರಿತು

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು)**

೩೮೭೨ (೪೫೦೩) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಎ,ಬಿ,ಸಿ ದರ್ಜೆಯ ದೇವಸ್ಥಾನಗಳಿವೆ; ಅವುಗಳಿಗೆ ಆಡಳಿತ ಮಂಡಳಿ ನಿಯಮ ವಿಧಿಸಲಾಗಿದೆಯೇ; ರಾಜ್ಯದಲ್ಲಿ ಮುಜರಾಯಿ ಇಲಾಖೆಯಿಂದ ಎಷ್ಟು ಅನುದಾನವನ್ನು ದೇವಸ್ಥಾನಗಳಿಗೆ ನೀಡಲಾಗಿದೆ; (ವಿವರ ಒದಗಿಸುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯ ಒಟ್ಟು ಎಷ್ಟು ಶಿಕ್ಷಣ ಸಂಸ್ಥೆಗಳಿಗೆ ದೇವಸ್ಥಾನಗಳಿಂದ ಅನುದಾನ ನೀಡಲಾಗುತ್ತಿದೆ; ಹಾಗೂ ಯಾವ ಮಾನದಂಡದಲ್ಲಿ ನೀಡಲಾಗುತ್ತದೆ; (ವಿವರ ಒದಗಿಸುವುದು)

(ಇ) ಜಿಲ್ಲೆಯಲ್ಲಿ ಒಟ್ಟು ಎಷ್ಟು ದೇವಸ್ಥಾನಗಳು ಧಾರ್ಮಿಕ ಪರಿಷತ್‌ನಲ್ಲಿ ಕಾರ್ಯನಿರ್ವಹಿಸುತ್ತಿವೆ; ಎಷ್ಟು ಆಡಳಿತ ಮಂಡಳಿಗಳನ್ನು ನೇಮಕ ಮಾಡಲಾಗಿದೆ? (ವಿವರ ಒದಗಿಸುವುದು)

## ರಾಷ್ಟ್ರೀಯ ಹೆದ್ದಾರಿಗಳ ಕಾಮಗಾರಿ ಕುರಿತು

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು)**

೩೮೭೩ (೪೫೦೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರಿನ ನಂತೂರಿನಲ್ಲಿ ಕೆಳಸೇತುವೆ/ಮೇಲುಸೇತುವೆ ನಿರ್ಮಿಸಬೇಕೆಂಬ ಪ್ರಸ್ತಾವನೆ ಇನ್ನು ಕಾರ್ಯಗತಗೊಳ್ಳದಿರಲು ಕಾರಣವೇನು; ಪ್ರಸ್ತಾವನೆ ಯಾವ ಹಂತದಲ್ಲಿದೆ; ಕಾಮಗಾರಿ ಎಂದು ಪ್ರಾರಂಭಿಸಲಾಗುವುದು; (ವಿವರ ಒದಗಿಸುವುದು)

(ಆ) ಮಂಗಳೂರಿನಿಂದ ಬಿ.ಸಿ. ರೋಡ್‌ವರೆಗಿನ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಪೂರ್ಣಗೊಳ್ಳದಿರಲು ಕಾರಣವೇನು; (ವಿವರ ಒದಗಿಸುವುದು)

(ಇ) ಪಂಪ್ ಸರ್ಕಲ್‌ನ ಮೇಲುಸೇತುವೆ ಕಾಮಗಾರಿ ಸ್ಥಗಿತಗೊಂಡಿದ್ದು, ವಾಹನ ಸಂಚಾರಕ್ಕೆ ತೊಡಕು ಉಂಟಾಗಿದ್ದು ೪ ವರ್ಷಗಳಲ್ಲಿ ಯಾವುದೇ ಕಾಮಗಾರಿ ಕೈಗೊಳ್ಳದಿರಲು ಕಾರಣವೇನು; ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ? (ವಿವರ ಒದಗಿಸುವುದು)

## ರಸ್ತೆಗಳಿಗೆ ಟೋಲ್‌ಗಳನ್ನು ಹೆಚ್ಚಾಗಿ ಪಡೆಯುತ್ತಿರುವುದನ್ನು ನಿವಾರಿಸುವ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೮೭೪ (೪೫೧೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರಸ್ತೆಗಳಿಗೆ ಹೆಚ್ಚು ಹೆಚ್ಚು ಟೋಲ್ ಸಂಗ್ರಹಿಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೆ; ಹೆಚ್ಚು ಟೋಲ್ ಸಂಗ್ರಹಿಸುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕೆಲವು ರಸ್ತೆಗೆ ಸರಿಯಾದ ಯಾವುದೇ ಕಾಮಗಾರಿಗಳನ್ನು ನಿರ್ವಹಿಸದಿರುವುದರಿಂದ ಸುಗಮವಾಗಿ ರಸ್ತೆಯಲ್ಲಿ ಸಂಚರಿಸಲು ಯೋಗ್ಯವಾಗಿರುವುದಿಲ್ಲ. ಇಂತಹ ಸ್ಥಳಗಳಲ್ಲಿಯೂ ಸಹ ಟೋಲ್ ಸಂಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ರಸ್ತೆಗಳಿಗೆ ಟೋಲ್‌ಗಳನ್ನು ಹೆಚ್ಚಾಗಿ ಪಡೆಯುತ್ತಿರುವ ರಸ್ತೆ ನಿರ್ವಹಣಾ ಏಜೆನ್ಸಿಗಳ ವಿರುದ್ಧ ಸರ್ಕಾರವು ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ?

## ಕೃಷಿ ವಿಕಾಸ ಯೋಜನೆಯಡಿ ರಾಜ್ಯದಲ್ಲಿ ಪಶುಸಂಗೋಪನೆ ಮತ್ತು ಹೈನುಗಾರಿಕೆ ಅಭಿವೃದ್ಧಿ ಪಡಿಸುವ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೮೭೫ (೪೫೧೫) ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ ಪಶುಸಂಗೋಪನೆ ಮತ್ತು ಹೈನುಗಾರಿಕೆ ಅಭಿವೃದ್ಧಿಗಾಗಿ ಸರ್ಕಾರ ಎಷ್ಟು ಅನುದಾನ ಒದಗಿಸಿದೆ;

(ಆ) ಇತ್ತೀಚಿನ ದಿನಗಳಲ್ಲಿ ಕ್ಷೀಣಿಸುತ್ತಿರುವ ಪಶುಗಳ ಸಂಖ್ಯೆಯನ್ನು ಹೆಚ್ಚಿಸಲು ಈ ಅನುದಾನವನ್ನು ಯಾವ ರೀತಿ ಹಾಗೂ ಯಾವ ಯಾವ ಜಿಲ್ಲೆಗಳಲ್ಲಿ ಬಳಸಿಕೊಳ್ಳಲು ಉದ್ದೇಶಿಸಿದೆ; (ಜಿಲ್ಲಾವಾರು ಹಾಗೂ ಯೋಜನಾವಾರು ವಿವರಗಳನ್ನು ಒದಗಿಸುವುದು)

(ಇ) ರಾಜ್ಯ ಸರ್ಕಾರವು ಎಷ್ಟು ಹಣವನ್ನು ಈ ಯೋಜನೆಗಳಲ್ಲಿ ವೆಚ್ಚ ಮಾಡಲು ಉದ್ದೇಶಿಸಿದೆ;

(ಈ) ಹಾಗಿದ್ದಲ್ಲಿ, ಈ ಯೋಜನೆಗಳನ್ನು ಎಷ್ಟು ದಿನಗಳಲ್ಲಿ ಜಾರಿಗೆ ತರಲಾಗುವುದು?

## ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸುವ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೮೭೬ (೪೫೧೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೦೩ ವರ್ಷದಿಂದ ಎಷ್ಟು ನೂತನ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪನೆ ಮಾಡಲಾಗಿದೆ; (ಹಾಗಿದ್ದಲ್ಲಿ, ಪೂರ್ಣ ವಿವರ ನೀಡುವುದು)

(ಆ) ಹೊಸದಾಗಿ ಎಷ್ಟು ವಿದ್ಯುತ್ ವಿತರಣಾ ಕೇಂದ್ರ ಸ್ಥಾಪನೆಗೆ ಮಂಜೂರಾತಿ ನೀಡಲಾಗಿದೆ; ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಬೇಸಿಗೆಯಲ್ಲಿ ವಿದ್ಯುತ್‌ನ್ನು ನಗರ ಪ್ರದೇಶಗಳಲ್ಲಿನ ಕೈಗಾರಿಕಾ ಪ್ರದೇಶಗಳಿಗೆ ಪೂರೈಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ;

(ಈ) ಉತ್ತರ ಕರ್ನಾಟಕ ಭಾಗದ ಗ್ರಾಮೀಣ ಪ್ರದೇಶಗಳ ಸುತ್ತಮುತ್ತಲ ಗ್ರಾಮದ ರೈತರಿಗೆ ಅನುಕೂಲವಾಗುವ ದೃಷ್ಟಿಯಿಂದ ವಿತರಣಾ ಕೇಂದ್ರ ಸ್ಥಾಪನೆಗೆ ಸರ್ಕಾರ ಚಿಂತಿಸಿದೆಯೇ?

## ಬಿ.ಬಿ.ಎಂ.ಪಿ.ಯಲ್ಲಿ ಪಶುವೈದ್ಯ ಚಿಕಿತ್ಸಾಲಯಗಳನ್ನು ಅಭಿವೃದ್ಧಿ ಪಡಿಸುವ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೮೭೭ (೪೫೧೩) ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಪಶು ವೈದ್ಯ ಚಿಕಿತ್ಸಾಲಯಗಳಿವೆ; ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿರುವ ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪಶು ವೈದ್ಯ ಚಿಕಿತ್ಸಾಲಯವನ್ನು ತೆರೆಯಲಾಗಿದೆ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಡಿಮೆ ಸಂಖ್ಯೆಯ ಪಶು ವೈದ್ಯ ಚಿಕಿತ್ಸಾಲಯಗಳು ಇರುವುದರಿಂದ ಸಾರ್ವಜನಿಕರು ಖಾಸಗಿ ಪಶು ವೈದ್ಯ ಚಿಕಿತ್ಸಾಲಯಗಳನ್ನು ಅವಲಂಬಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬೆಂಗಳೂರಿನಲ್ಲಿರುವ ಪಶು ಚಿಕಿತ್ಸಾಲಯಗಳು ಯಾವ ಇಲಾಖೆಯ ಅಧೀನದಲ್ಲಿದೆ;

(ಇ) ಬೆಂಗಳೂರಿನಲ್ಲಿ ಹೆಚ್ಚಿನ ಸಂಖ್ಯೆಯ ಪಶು ಚಿಕಿತ್ಸಾಲಯಗಳನ್ನು ತೆರೆಯಲು ಹಾಗೂ ಸಾಕಷ್ಟು ಔಷಧಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ಮುಜರಾಯಿ ದೇವಸ್ಥಾನದ ನೌಕರರಿಗೆ ವೇತನ ಮತ್ತು ಅಗತ್ಯ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೭೮ (೪೩೮೮) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಮುಜರಾಯಿ ದೇವಸ್ಥಾನಗಳಲ್ಲಿ ಹಲವಾರು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿರುವ ನೌಕರರನ್ನು ಖಾಯಂ ಗೊಳಿಸಲಾಗಿದೆಯೇ; ಹಾಗೂ ಎಷ್ಟು ನೌಕರರನ್ನು ಖಾಯಂಗೊಳಿಸಲಾಗಿದೆ; ಅವರಿಗೆ ಪ್ರಸಕ್ತ ನೀಡುತ್ತಿರುವ ವೇತನ ಸೌಲಭ್ಯಗಳೇನು;

(ಆ) ಖಾಯಂಗೊಳಿಸಿದ ನೌಕರರಿಗೆ ವೇತನ ಹಾಗೂ ಸದರಿ ಹುದ್ದೆಯ ಸೌಲಭ್ಯಗಳು ಸಿಗದೇ ಇರುವುದು ಮತ್ತು ವ್ಯತ್ಯಾಸಗಳಿರುವುದು ನಿಜವೇ;

(ಇ) ಖಾಯಂಗೊಳಿಸದ ನೌಕರರಿಗೆ ಸಮಾನ ಕೆಲಸ ಸಮಾನ ವೇತನ ನಿಯಮದಂತೆ ಲಭ್ಯ ವೇತನ ಸೌಲಭ್ಯ ಒದಗಿಸುವ ಕುರಿತು ಸರ್ಕಾರದ ನಿಲುವೇನು;

(ಈ) ಈ ಕುರಿತು ಅಗತ್ಯ ಕ್ರಮ ಕೈಗೊಂಡು ನೌಕರರ ಹಿತ ಕಾಪಾಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳೇನು? (ವಿವರ ನೀಡುವುದು)

## ಶಿರಾಡಿ ಘಾಟ್ ಸುರಂಗ ಮಾರ್ಗ ಯೋಜನೆಯ ಅನುಷ್ಠಾನ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೭೯ (೪೩೯೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು– ಮಂಗಳೂರು ನಡುವಿನ ಸಕಲೇಶಪುರ ಶಿರಾಡಿ ಘಾಟ್ ಸುರಂಗ ಮಾರ್ಗ ನಿರ್ಮಾಣದ ಯೋಜನೆ ಅನುಷ್ಠಾನದ ಕುರಿತು ಸರ್ಕಾರದ ನಿಲುವೇನು;

(ಆ) ಸಕಲೇಶಪುರ ಶಿರಾಡಿ ಘಾಟ್ ಸುರಂಗ ಮಾರ್ಗ ನಿರ್ಮಾಣದ ಯೋಜನೆಯ ಪ್ರಸ್ತಾವನೆ ಯಾವ ಹಂತದಲ್ಲಿದೆ; ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಅನುದಾನವೆಷ್ಟು;

(ಇ) ಮಂಗಳೂರು–ಅಡ್ಡ ಹೊಳೆ ಮತ್ತು ಹಾಸನ ಸಕಲೇಶಪುರ ರಾಷ್ಟ್ರೀಯ ಹೆದ್ದಾರಿ ಚತುಷ್ಪಥ ಕಾಮಗಾರಿ ಯಾವ ಹಂತದಲ್ಲಿದೆ;

(ಈ) ಹಾಸನ–ಸಕಲೇಶಪುರ– ಅಡ್ಡ ಹೊಳೆ–ಮಂಗಳೂರು ರಾಷ್ಟ್ರೀಯ ಹೆದ್ದಾರಿ ಚತುಷ್ಪಥ ಕಾಮಗಾರಿಯ ಸಂದರ್ಭದಲ್ಲಿ ಅತಿಯಾದ ತಿರುವುಗಳನ್ನು ಕಡಿಮೆಗೊಳಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು)

## ಗ್ರಾಮ ಪಂಚಾಯಿತಿಗೊಂದು ಪ್ರಾಥಮಿಕ ಸಹಾಕಾರಿ ಸಂಘ ಸ್ಥಾಪಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೮೦ (೪೪೦೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ನೇ ಸಾಲಿನ ಆಯ–ವ್ಯಯದಲ್ಲಿ ಘೋಷಿಸಿರುವಂತೆ ಪ್ರತಿಯೊಂದು ಗ್ರಾಮ ಪಂಚಾಯಿತಿಯಲ್ಲಿ ಪ್ರಾಥಮಿಕ ಕೃಷಿ ಸಹಕಾರಿ ಸಂಘಗಳನ್ನು ರಚನೆ ಮಾಡಲಾಗಿದೆಯೇ;

(ಆ) ಹಾಗಿದ್ದಲ್ಲಿ, ರಚನೆ ಮಾಡಿರುವ ಸಹಕಾರಿ ಸಂಘಗಳು ಎಷ್ಟು; ಗ್ರಾಮ ಪಂಚಾಯತ್ ಒಂದರಂತೆ ಒಟ್ಟು ಎಷ್ಟು ಸಹಕಾರಿ ಸಂಘಗಳಿವೆ; ಹೊಸ ಸಹಕಾರಿ ಸಂಘಗಳ ರಚನೆಗೆ ಇರುವ ಮಾನದಂಡಗಳೇನು;

(ಇ) ಫ್ಯಾಕ್ಸ್‌ಗಳ ವಾರ್ಷಿಕ ಸಾಮಾನ್ಯ ಸಂಘವನ್ನು ವಿಭಜನೆಗೊಳಿಸಿ ಗ್ರಾಮ ಪಂಚಾಯುತಿಗೊಂದು ಸಂಘ ನೋಂದಣಿ ಮಾಡಲು ನಿರ್ಣಯವಾಗಿರುವುದು ನಿಜವೇ; ಹಾಗಿದ್ದಲ್ಲಿ, ಸಂಘ ನೋಂದಣಿಗೆ ಸ್ವೀಕರಿಸಿರುವ ಪ್ರಸ್ತಾವನೆ ಎಷ್ಟು; ಎಷ್ಟು ಪ್ರಸ್ತಾವನೆಗಳು ಬಾಕಿ ಇವೆ; ಬಾಕಿಗೆ ಕಾರಣಗಳೇನು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಫ್ಯಾಕ್ಸ್‌ಗಳ ವಿಭಜನೆಗೆ ಪ್ರೊ: ವೈದ್ಯನಾಥನ್ ವರದಿಯ ಪ್ರಕಾರ ಹಣಕಾಸು ಪೂರೈಸುವ ಸಂಸ್ಥೆಗಳ ಅನುಮತಿ ಅಗತ್ಯವಿದೆಯೇ;

(ಉ) ಪ್ರೊ: ವೈದ್ಯನಾಥನ್ ವರದಿಯ ಮುಖ್ಯಾಂಶಗಳೇನು?

## ದೀನ್‌ದಯಾಳ್ ವಿದ್ಯುದೀಕರಣ ಯೋಜನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೮೧ (೪೪೦೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ವಿದ್ಯುದೀಕರಣಕ್ಕಾಗಿ ಕೇಂದ್ರ ಸರ್ಕಾರದಿಂದ ಮಂಜೂರಾದ ಅನುದಾನವೆಷ್ಟು; (ಕಳೆದ ೩ ವರ್ಷದಲ್ಲಿ ಬಿಡುಗಡೆಯಾದ ಅನುದಾನದ ವಿವರ ನೀಡುವುದು)

(ಆ) ಇಂಧನ ಇಲಾಖೆಯ ಮೂಲಕ ಇದುವರೆಗೆ ಎಷ್ಟು ಎಲ್.ಇ.ಡಿ. ಬಲ್ಬ್ ವಿತರಿಸಲಾಗಿದೆ; ಇದಕ್ಕಾಗಿ ಎಷ್ಟು ಅನುದಾನ ವ್ಯಯಿಸಲಾಗಿದೆ; ಸದರಿ ಅನುದಾನದಲ್ಲಿ ಕೇಂದ್ರದ ಪಾಲೆಷ್ಟು;

(ಇ) ದೀನ್‌ದಯಾಳ್ ಗ್ರಾಮೀಣ ವಿದ್ಯುದೀಕರಣ ಯೋಜನೆಯಡಿ ಇದುವರೆಗೆ ರಾಜ್ಯದ ಎಷ್ಟು ಕುಟುಂಬಗಳಿಗೆ ವಿದ್ಯುತ್ ಸಂಪರ್ಕ ನೀಡಲಾಗಿದೆ ಹಾಗೂ ವಿದ್ಯುತ್ ಸಂಪರ್ಕ ನೀಡಲು ಬಾಕಿ ಉಳಿದಿದೆ;

(ಈ) ದೀನ್‌ದಯಾಳ್ ಯೋಜನೆಯಡಿ ಸಮೀಕ್ಷೆಯಿಂದ ಫಲಾನುಭವಿಗಳು ಬಿಟ್ಟು ಹೋಗಿರುವುದು, ಕಂಬಗಳಿಗೆ ಶುಲ್ಕಕ್ಕೆ ಒತ್ತಾಯಿಸುವುದು, ಬಿ.ಪಿ.ಎಲ್ ಪಡಿತರ ಚೀಟಿ ರದ್ದಾಗಿ ಯೋಜನೆಯಿಂದ ಕೈ ತಪ್ಪಿಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಉ) ದೀನ್‌ದಯಾಳ್ ವಿದ್ಯುದೀಕರಣ ಯೋಜನೆ ಮತ್ತು ಉಜಾಲ ಯೋಜನೆಯನ್ನು ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು)

## ಹೆಚ್.ಟಿ. ಮಾರ್ಗದಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೮೨ (೪೫೨೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ಹಲವು ಜಿಲ್ಲೆಗಳ ರೈತರು ಸಾಮೂಹಿಕ ವೈಯಕ್ತಿಕ ಏತ ನೀರಾವರಿ ಯೋಜನೆಗಳ ಮೂಲಕ ಕೃಷ್ಣಾ, ದೂಧಗಂಗಾ ನದಿಗಳಿಂದ ತಮ್ಮ ಜಮೀನುಗಳಿಗೆ ನೀರು ಹರಿಸಲು, ಹೆಚ್.ಟಿ. ಮಾರ್ಗದಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಿಕೊಳ್ಳಲು ಹರಸಾಹಸ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರೈತರ ಸಾಮೂಹಿಕ ವೈಯಕ್ತಿಕ ಏತ ನೀರಾವರಿ ಯೋಜನೆಗಳಿಗೆ ಹೆಚ್.ಟಿ. ಮಾರ್ಗದಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಿಕೊಡಲು ಸರ್ಕಾರವು ಏನು ಕ್ರಮಗಳನ್ನು ತೆಗೆದುಕೊಂಡಿದೆ;

(ಇ) ಈ ವಿಚಾರದಲ್ಲಿ ವಿದ್ಯುತ್ ಕಂಪನಿಗಳ ಜೊತೆ ಮಾಡಿಕೊಂಡ ಒಪ್ಪಂದಗಳೇನು; ರೈತರ ಮೇಲೆ ಆರ್ಥಿಕ ಹೊರೆಯಾಗುವುದನ್ನು ತಪ್ಪಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳುವುದು;

(ಈ) ಯಾವ ಕಾಲಮಿತಿಯಲ್ಲಿ ರೈತರ ಸಾಮೂಹಿಕ ವೈಯಕ್ತಿಕ ಏತ ನೀರಾವರಿ ಯೋಜನೆಗಳಿಗೆ ಹೆಚ್.ಟಿ. ಮಾರ್ಗದಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಿಕೊಡಲಾಗುವುದು; ಸರ್ಕಾರವು ಈ ವಿಚಾರದಲ್ಲಿ ಶೀಘ್ರ ಸೂಕ್ತ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)

## ರಸ್ತೆ ಅಭಿವೃದ್ಧಿಗೆಂದು ಸಿ.ಆರ್.ಎಫ್ ಅನುದಾನವು ಬಳಕೆಯಾಗದೆ ಇರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೮೩ (೪೪೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಕ್ಕೆ ಕೇಂದ್ರ ಸರ್ಕಾರದಿಂದ ರಸ್ತೆ ಅಭಿವೃದ್ಧಿಗಾಗಿ ಸಿ.ಆರ್. ಎಫ್. ಯೋಜನೆಯಡಿ ನೀಡಿದ ಅನುದಾನ ಪೂರ್ಣ ಪ್ರಮಾಣದಲ್ಲಿ ಬಳಕೆಯಾಗದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಸಿ.ಆರ್.ಎಫ್ ನಿಂದ ರಾಜ್ಯಕ್ಕೆ ಕೇಂದ್ರ ಸರ್ಕಾರ ನೀಡಿದ ಅನುದಾನವೆಷ್ಟು; ಬಳಕೆಯಾದ ಅನುದಾನವೆಷ್ಟು; ಬಳಕೆಯಾಗದೆ ಉಳಿದ ಬಾಕಿ ಅನುದಾನವೆಷ್ಟು; (ವರ್ಷಾವಾರು ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಸಿ.ಆರ್.ಎಫ್ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಂಡು ರಸ್ತೆಗಳನ್ನು ಅಭಿವೃದ್ಧಿ ಪಡಿಸಲು/ರಸ್ತೆ ಅಥವಾ ಸೇತುವೆಗಳನ್ನು ನಿರ್ಮಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಈ) ಯಾವ ಕಾಲ ಮಿತಿಯಲ್ಲಿ ಕೇಂದ್ರದ ಸಿ.ಆರ್.ಎಫ್. ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳಲಾಗುವುದು;

(ಉ) ೨೦೧೭–೧೮ರ ಆರ್ಥಿಕ ವರ್ಷದಲ್ಲಿ ಕೇಂದ್ರ ಸರ್ಕಾರಕ್ಕೆ ಸಿ.ಆರ್.ಎಫ್ ಅನುದಾನಕ್ಕಾಗಿ ಹೊಸ ಪ್ರಸ್ತಾವನೆ ಸಲ್ಲಿಸಲಾಗಿದೆಯೇ? (ಸಂಪೂರ್ಣ ವಿವರ ನೀಡುವುದು)

## ರೈತರ ಬೆಳೆಗಳಿಗೆ ವೈಜ್ಞಾನಿಕ/ಯೋಗ್ಯ ಬೆಲೆ ಸಿಗದೇ ಇರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೮೪ (೪೪೯೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರ ಬೆಳೆಗೆ, ವೈಜ್ಞಾನಿಕ ಮತ್ತು ಯೋಗ್ಯ ಬೆಲೆ ಸಿಗಬೇಕೆಂಬ ಉದ್ದೇಶದಿಂದ ಸರ್ಕಾರವು ‘‘ಕೃಷಿ ಬೆಲೆ ಆಯೋಗ’’ ರಚಿಸಿದ್ದರೂ ಬೆಳೆಗಳಿಗೆ ಯೋಗ್ಯ ಬೆಲೆಗಳು ಸಿಗದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸದರಿ ‘‘ಕೃಷಿ ಬೆಲೆ ಆಯೋಗ’’ವು ಯಾವಾಗ ರಚನೆಯಾಯಿತು; ಇದರ ಸದಸ್ಯರುಗಳು ಮತ್ತು ಅಧ್ಯಕ್ಷರುಗಳು ಯಾರು; ಇವರುಗಳನ್ನು ಯಾವ ಯಾವ ಕ್ಷೇತ್ರಗಳಿಂದ ಆಯ್ಕೆ ಮಾಡಲಾಗಿದೆ; ಇವರುಗಳನ್ನು ಎಷ್ಟು ವರ್ಷಗಳ ಕಾಲಾವಧಿಗೆ ನೇಮಕ ಮಾಡಲಾಗುವುದು; (ಇವರುಗಳ ಕಾರ್ಯವ್ಯಾಪ್ತಿಯ ವಿವರ ಒದಗಿಸುವುದು)

(ಇ) ಸದರಿ ‘‘ಕೃಷಿ ಬೆಲೆ ಆಯೋಗ’’ವು ಯಾವ ಯಾವ ಬೆಳೆಗಳಿಗೆ ಯೋಗ್ಯ ಬೆಲೆಗಳನ್ನು ನಿಗಧಿ ಮಾಡಿದೆ; ಅಥವಾ ಬೆಂಬಲ ಬೆಲೆಗಳನ್ನು ಘೋಷಿಸಿದೆ; (ಸಂಕ್ಷಿಪ್ತ ವಿವರ ನೀಡುವುದು)

(ಈ) ಉತ್ತರ ಕರ್ನಾಟಕದ ಮುಖ್ಯ ಬೆಳೆಗಳಾದ ಹತ್ತಿ, ಗೋವಿನ ಜೋಳಗಳಿಗೆ ಎಷ್ಟು ಬೆಂಬಲ ಬೆಲೆ ನಿಗಧಿಯಾಗಿದೆ; ರೈತರ ಬೆಳೆಗಳು ವಿವಿಧ ಕಾರಣಗಳಿಂದ ಬೆಳೆ ನಷ್ಟವಾದಾಗ ಸದರಿ ಆಯೋಗದ ಪಾತ್ರವೇನು;

(ಉ) ''ಕೃಷಿ ಬೆಲೆ ಆಯೋಗ''ವು ಬೆಳೆಗಳಿಗೆ ಯೋಗ್ಯ ಬೆಲೆಗಳನ್ನು ನಿಗಧಿಪಡಿಸಲು ಅನುಸರಿಸುವ ಮಾನದಂಡಗಳೇನು? (ವಿವರ ನೀಡುವುದು)

## ರೈತರ ಪಂಪ್‌ಸೆಟ್‌ಗಳಿಗೆ ಕನಿಷ್ಠ ಎಂಟು ಗಂಟೆಗಳ ಕಾಲ ಮೂರು ಫೇಸ್ ವಿದ್ಯುತ್ ಹರಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೮೫ (೪೪೯೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರೈತರು ಮುಂಗಾರು ವಿಳಂಬದಿಂದ ಪರ್ಯಾಯ ಬೆಳೆ ಬೆಳೆಯಲು ಪಂಪ್‌ಸೆಟ್‌ಗಳಿಗೆ ಮೊರೆ ಹೋಗಿರುವುದರಿಂದ, ವಿಳಂಬವಾದರೂ ಸಾಕಷ್ಟು ಮಳೆಯಿಂದ ಜಲಾಶಯಗಳು ತುಂಬಿರುವುದರಿಂದ ಈ ಬಾರಿಯೂ ರೈತರ ಪಂಪ್‌ಸೆಟ್‌ಗಳಿಗೆ ಕನಿಷ್ಠ ಎಂಟು ಗಂಟೆಗಳ ಕಾಲ ಮೂರು ಫೇಸ್ ವಿದ್ಯುತ್ ಕೊಡುವ ಬಗ್ಗೆ ಸರ್ಕಾರ ಗಂಭೀರವಾಗಿ ಚಿಂತಿಸುವುದೇ;

(ಆ) ಹಾಗಿದ್ದಲ್ಲಿ, ರೈತರ ಪಂಪ್‌ಸೆಟ್‌ಗಳಿಗೆ ಕನಿಷ್ಠ ಎಂಟು ಗಂಟೆಗಳ ಕಾಲ ಮೂರು ಫೇಸ್ ವಿದ್ಯುತ್ ಕೊಡುವ ಸಂಬಂಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಇ) ರಾಜ್ಯದಲ್ಲಿ ಒಟ್ಟು ಎಷ್ಟು ಪಂಪ್‌ಸೆಟ್‌ಗಳಿಗೆ ಸರ್ಕಾರ ವಿದ್ಯುತ್ ಒದಗಿಸುತ್ತಿದೆ; ಇದಕ್ಕೆ ಒಟ್ಟು ಎಷ್ಟು ಪ್ರಮಾಣದ ವಿದ್ಯುತ್ ಬೇಕಾಗಬಹುದು;

(ಈ) ರಾಜ್ಯದಲ್ಲಿ ಎಲ್ಲಾ ಮೂಲಗಳಿಂದ ಒಟ್ಟು ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದಿಸಲಾಗುತ್ತಿದೆ; ಯಾವ ಯಾವ ಮೂಲಗಳಿಂದ ಉತ್ಪಾದಿಸಲಾಗುತ್ತಿದೆ; ಪ್ರಮಾಣದೊಂದಿಗೆ ಮೂಲಗಳ ವಿವರ ಒದಗಿಸುವುದು;

(ಉ) ರಾಜ್ಯದಲ್ಲಿ ಬೇಡಿಕೆಯಿರುವ ಒಟ್ಟು ವಿದ್ಯುತ್ ಪ್ರಮಾಣವೆಷ್ಟು; ಕೊರತೆಯ ಪ್ರಮಾಣ ಎಷ್ಟು; ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು)

(ಊ) ಸಕ್ಕರೆ ಕಾರ್ಖಾನೆಗಳಿಂದ ಒಟ್ಟು ಎಷ್ಟು ಪ್ರಮಾಣದ ವಿದ್ಯುತ್ ಖರೀದಿಸಲಾಗುತ್ತಿದೆ; ಯಾವ ದರದಲ್ಲಿ ಖರೀದಿಸಲಾಗುತ್ತಿದೆ? (ವಿವರ ನೀಡುವುದು)

## ಹಾಲು ಉತ್ಪಾದಕರ ಸಹಕಾರ ಸಂಘಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೮೬ (೪೨೭೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) ಹಾಗೆಯೇ ತುಮಕೂರು ಜಿಲ್ಲೆಯ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರತಿ ಜಿಲ್ಲೆಯಿಂದ ಹಾಲು ಉತ್ಪಾದಕರ ಸಹಕಾರ ಸಂಘಗಳಿಂದ ಶೇಖರಣೆಯಾಗುತ್ತಿರುವ ಹಾಲಿನ ಪ್ರಮಾಣವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು ಹಾಗೂ ತುಮಕೂರು ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಾಲಿಗೆ ಪ್ರತಿ ದಿನ ಪ್ರತಿ ಲೀಟರ್‌ಗೆ ಪ್ರೋತ್ಸಾಹ ಧನವನ್ನು ರೈತರಿಗೆ ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ, ಎಷ್ಟು ರೂಪಾಯಿ ನೀಡಲಾಗುತ್ತಿದೆ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಎಷ್ಟು ಜನ ರೈತರು ಹೈನುಗಾರಿಕೆ ನಂಬಿ ಜೀವನ ಸಾಗಿಸುತ್ತಿದ್ದಾರೆ; (ಜಿಲ್ಲಾವಾರು ಅಂಕಿ ಅಂಶ ಒದಗಿಸುವುದು)

(ಉ) ಈ ಪ್ರೋತ್ಸಾಹ ನೆರವು ನೀಡುವ ಯೋಜನೆ ಜಾರಿಗೆ ಬಂದಿದ್ದು ಯಾವಾಗ; ಒಟ್ಟಾರೆಯಾಗಿ ರಾಜ್ಯದಲ್ಲಿ ಪ್ರೋತ್ಸಾಹ ಹಣ ನೀಡುತ್ತಿರುವ ಒಟ್ಟು ಮೊತ್ತವೆಷ್ಟು; (ಮಾಹಿತಿ ಒದಗಿಸುವುದು)

(ಊ) ಈ ಪ್ರೋತ್ಸಾಹ ಧನವನ್ನು ಇಲ್ಲಿಯತನಕ ಬಾಕಿ ಇಲ್ಲದೆ ರೈತರಿಗೆ ನೀಡಲಾಗಿದೆಯೇ;

(ಋ) ಬಾಕಿ ಉಳಿಸಿಕೊಂಡಿದ್ದಲ್ಲಿ ಅದರ ಮೊತ್ತವೆಷ್ಟು; ಈ ಬಾಕಿ ಹಣವನ್ನು ಯಾವಾಗ ಪಾವತಿ ಮಾಡಲಾಗುವುದು; (ಸಂಪೂರ್ಣ ವಿವರದೊಂದಿಗೆ ಮಾಹಿತಿ ನೀಡುವುದು)

(ಎ) ಬ್ಯಾಂಕುಗಳ ನಿರ್ಲಕ್ಷ್ಯದಿಂದ ನೂರಾರು ಕೋಟಿ ರೂಪಾಯಿಗಳು ರೈತರ ಖಾತೆಗೆ ಜಮೆ ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ದೇವಸ್ಥಾನಗಳಿಗೆ ಅನುದಾನ ನೀಡುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೮೭ (೪೨೮೧) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ನೇ ಸಾಲಿಗೆ ಸರ್ಕಾರದಿಂದ ದೇವಸ್ಥಾನಗಳ ನಿರ್ಮಾಣಕ್ಕೆ ಮತ್ತು ದುರಸ್ಥಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು;

(ಆ) ಹಾಗಿದ್ದಲ್ಲಿ, ಈ ಅನುದಾನವನ್ನು ಜಿಲ್ಲಾವಾರು ಸಮನಾಗಿ ಹಂಚಿಕೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಜಿಲ್ಲಾವಾರು ಮಾಹಿತಿ ನೀಡುವುದು;

(ಇ) ಈ ಅನುದಾನವನ್ನು ಹಂಚಿಕೆ ಮಾಡಲು ಯಾವುದಾದರೂ ಮಾನದಂಡವನ್ನು ಅನುಸರಿಸಿ ಹಂಚಿಕೆ ಮಾಡಲಾಗುತ್ತಿದೆಯೇ; (ವಿವರ ನೀಡುವುದು)

(ಈ) ವಿವಿಧ ವಿಧಾನಸಭಾ ಕ್ಷೇತ್ರಗಳಿಗೆ ಅನುದಾನವನ್ನು ಹಂಚಿಕೆ ಮಾಡಲು ತಾರತಮ್ಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ನಿವಾರಣೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಉ) ತುಮಕೂರು ಸ್ಥಳೀಯ ಸಂಸ್ಥೆಯ ಸಂಸ್ಥೆ ಮತ ಕ್ಷೇತ್ರದ ದೇವಸ್ಥಾನಗಳಿಗೆ ಅನುದಾನವನ್ನು ನೀಡಲು ಕೋರಿದ್ದರೂ ಸಹ, ಕೊಡದೆ ಇರಲು ಕಾರಣವೇನು; (ವಿವರ ನೀಡುವುದು)

(ಊ) ತುಮಕೂರು ಜಿಲ್ಲೆಯ ಯಾವ ಯಾವ ಮತ ಕ್ಷೇತ್ರಗಳಿಗೆ ಎಷ್ಟು ಅನುದಾನ ನೀಡಲಾಗಿದೆ? (ವಿವರ ನೀಡುವುದು)

## ಜವಳಿ ಇಲಾಖೆಯಲ್ಲಿ ನೇಕಾರರಿಗೆ ನೀಡಿರುವ ಸೌಲಭ್ಯಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೮೮ (೪೨೮೦) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷದಲ್ಲಿ ಜವಳಿ ಇಲಾಖೆಗೆ ನೀಡಿರುವ ಅನುದಾನವೆಷ್ಟು; ಈ ಅನುದಾನವನ್ನು ರಾಜ್ಯದ ೩೦ ಜಿಲ್ಲೆಗಳಿಗೆ ಸಮನಾಗಿ ಹಂಚಿಕೆ ಮಾಡಲಾಗಿದೆಯೇ; (ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿರುವ ನೇಕಾರರ ಸಂಖ್ಯೆ ಎಷ್ಟು; ಈ ನೇಕಾರರಿಗೆ ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಸರ್ಕಾರದಿಂದ ನೀಡಿರುವ ಸೌಲಭ್ಯಗಳೇನು; ಯಾವ ಯಾವ ಯೋಜನೆಯನ್ನು ನೀಡಲಾಗಿದೆ; (ವಿವರ ನೀಡುವುದು)

(ಇ) ನೇಕಾರರಿಗೆ ಯಾವ ಯಾವ ಯೋಜನೆಯಡಿ ನೀಡಿರುವ ಸಬ್ಸಿಡಿ ಮೊತ್ತ ಎಷ್ಟು; (ವಿವರ ನೀಡುವುದು)

(ಈ) ೨೦೧೭–೧೮ನೇ ಸಾಲಿನಲ್ಲಿ ತುಮಕೂರು ಜಿಲ್ಲೆಯ ನೇಕಾರರಿಗೆ ಸಹಾಯಧನ ರೂಪದಲ್ಲಿ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ? (ವಿವರ ನೀಡುವುದು)

## ಪಶು ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೮೯ (೪೨೭೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು; ಯಾವ ಯಾವ ದರ್ಜೆಯ ಆಸ್ಪತ್ರೆಗಳಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರತಿಯೊಂದು ಪಶು ಆಸ್ಪತ್ರೆಯಲ್ಲಿ ಪಶು ವೈದ್ಯರಿದ್ದಾರೆಯೇ; ಇಲ್ಲದಿದ್ದಲ್ಲಿ, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಈ ಹುದ್ದೆಗಳನ್ನು ಯಾವಾಗ ತುಂಬಲಾಗುವುದು;

(ಇ) ಅದೇ ರೀತಿಯಾಗಿ ಪಶು ಪರಿವೀಕ್ಷಕರ ಖಾಲಿ ಇರುವ ಹುದ್ದೆಗಳೆಷ್ಟು; ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಯಾವಾಗ; (ವಿವರ ನೀಡುವುದು)

(ಈ) ೨೦೧೭–೧೮ನೇ ಸಾಲಿನಲ್ಲಿ ಹೊಸದಾಗಿ ಎಷ್ಟು ಪಶು ಆಸ್ಪತ್ರೆಗಳನ್ನು ತೆರೆಯಲಾಗಿದೆ;

(ಉ) ತುಮಕೂರು ಜಿಲ್ಲೆಗೆ ಹೊಸದಾಗಿ ೨೦೧೭–೧೮ನೇ ಸಾಲಿಗೆ ನೀಡಿರುವ ಪಶು ಆಸ್ಪತ್ರೆ/ಪಶು ಚಿಕಿತ್ಸಾ ಕೇಂದ್ರಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಊ) ತುಮಕೂರು ಜಿಲ್ಲೆಯಲ್ಲಿ ಖಾಲಿ ಇರುವ ಪಶು ವೈದ್ಯರ ಮತ್ತು ಪಶು ಪರಿವೀಕ್ಷಕರ ಸಂಖ್ಯೆ ಎಷ್ಟು ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? (ಈ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

## ಬಿ.ಡಿ.ಸಿ.ಸಿ ಬ್ಯಾಂಕ್‌ನಿಂದ ನೇಕಾರರಿಗೆ ಸಾಲ ವಿತರಣೆ

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೯೦ (೪೨೫೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕು (ಬಿ.ಡಿ.ಸಿ.ಸಿ.) ನೇಕಾರರಿಗೆ ವೈಯಕ್ತಿಕವಾಗಿ ನೇರ ಸಾಲ ಕೊಡುವುದಾಗಿ ಘೋಷಣೆ ಮಾಡಿ, ಠರಾವು ಅಂಗೀಕರಿಸಿದ್ದರೂ ನೇಕಾರ ಸಮುದಾಯಕ್ಕೆ ಆ

ಸೌಲಭ್ಯವು ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ದೂರುಗಳೇನಾದರೂ ಬಂದಿದ್ದಲ್ಲಿ, ಅದರ ವಿವರಗಳನ್ನು ನೀಡುವುದು;

(ಆ) ಈ ಸಾಲವನ್ನು ಕೊಡಲು ಹಿಂದೇಟು ಹಾಕುತ್ತಿರುವುದೇಕೆ; ನೇರ ಸಾಲ ಕೊಡಲು ಇರುವ ಅಡ್ಡಿಗಳಾದರೂ ಏನು; (ವಿವರಗಳನ್ನು ಕೊಡುವುದು)

(ಇ) ನೇಕಾರರ ಪರ ಸಂಘಟನೆಗಳು ಕಳೆದ ಮೂರು ವರ್ಷಗಳಿಂದ ವೈಯಕ್ತಿಕವಾಗಿ ನೇರ ಸಾಲ ಕೊಡುವಂತೆ ಬ್ಯಾಂಕಿನ ಅಧ್ಯಕ್ಷರು ಮತ್ತು ವ್ಯವಸ್ಥಾಪಕ ನಿರ್ದೇಶಕರು ಹಾಗೂ ಸರ್ಕಾರಕ್ಕೆ ಮೇಲಿಂದ ಮೇಲೆ ಮನವಿ ಸಲ್ಲಿಸಿ ಕೇಳಿಕೊಳ್ಳುತ್ತಿದ್ದರೂ ಬ್ಯಾಂಕು ೨೦೧೪ರ ಅಕ್ಟೋಬರ್‌ನಲ್ಲಿ ತಾನೇ ಅಂಗೀಕರಿಸಿರುವ ಠರಾವಿನಂತೆ ನೇರ ಸಾಲ ಯಾಕೆ ಕೊಡುತ್ತಿಲ್ಲ;

(ಈ) ನೇಕಾರರಿಗೆ ತಕ್ಷಣವೇ ಬಿ.ಡಿ.ಸಿ.ಸಿ. ಬ್ಯಾಂಕಿನ ಮೂಲಕ ನೇರ ಸಾಲ ವಿತರಣೆಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು?

## ದಿನಗೂಲಿ ನೌಕರರ ಕುರಿತು

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೯೧ (೪೨೫೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಮರಣ ಮತ್ತು ನಿವೃತ್ತಿ ಹೊಂದಿದ ದಿನಗೂಲಿ ನೌಕರರ ಸಂಖ್ಯೆ ಎಷ್ಟು;

(ಆ) ಮರಣ ಮತ್ತು ನಿವೃತ್ತಿ ಹೊಂದಿದ ದಿನಗೂಲಿ ನೌಕರರಿಗೆ ಅಥವಾ ಅವಲಂಬಿತರಿಗೆ ನೀಡಿರುವ ಉಪದಾನ ಮೊತ್ತವೆಷ್ಟು;

(ಇ) ಲೋಕೋಪಯೋಗಿ ಇಲಾಖೆ, ಬೆಂಗಳೂರು ವಿಭಾಗದ ವ್ಯಾಪ್ತಿಗೆ ಬರುವ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ದಿನಗೂಲಿ ನೌಕರರು ಮತ್ತು ಹೊರಗುತ್ತಿಗೆ ನೌಕರರಿಗೆ ಪ್ರತಿ ಹುದ್ದೆಗೆ ಪ್ರತಿ ಮಾಹೆಯಾನ ನೀಡುತ್ತಿರುವ ವೇತನ ದರವೆಷ್ಟು;

(ಈ) ಯಾವ ಸರ್ಕಾರಿ ಆದೇಶಾನುಸಾರ ಹೊರಗುತ್ತಿಗೆ ನೌಕರರಿಗೆ ವೇತನ ಪಾವತಿ ಮಾಡಲಾಗುತ್ತಿದೆ;

(ಉ) ಹೊರಗುತ್ತಿಗೆ ನೌಕರರಿಗಿಂತ ದಿನಗೂಲಿ ನೌಕರರಿಗೆ ಪಾವತಿ ಮಾಡಲಾಗುತ್ತಿರುವ ವೇತನ ದರವು ಕಡಿಮೆ ಇರುವುದು ನಿಜವೇ:

(ಊ) ಹಾಗಿದ್ದಲ್ಲಿ, ಕಳೆದ ೩೦ ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ದಿನಗೂಲಿ ನೌಕರರಿಗೆ ಪಾವತಿ ಮಾಡಲಾಗುತ್ತಿರುವ ವೇತನವನ್ನು ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೇ?

## ಸಹಕಾರಿ ಬ್ಯಾಂಕ್‌ಗಳಲ್ಲಿ ನೇಕಾರರ ಸಾಲ ಮನ್ನಾ ಮಾಡಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೮೯೨ (೪೮೪೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಡ ಕೂಲಿ ಕಾರ್ಮಿಕ ನೇಕಾರರು ಸಹಕಾರಿ ಬ್ಯಾಂಕ್‌ಗಳಲ್ಲಿ ತೆಗೆದುಕೊಂಡಿರುವ ಸಾಲ ಮನ್ನಾ ಮಾಡಲಾಗಿದೆಯೇ;

(ಆ) ಮಾಡಲಾಗಿದ್ದಲ್ಲಿ, ಯಾವಾಗ; (ಸಂಪೂರ್ಣ ವಿವರ ನೀಡುವುದು)

(ಇ) ಸಾಲ ಮನ್ನಾ ಮಾಡಲು ಅನುಸರಿಸಿರುವ ಮಾನದಂಡಗಳೇನು?

## ಕೈಮಗ್ಗ ಅಭಿವೃದ್ಧಿ ನಿಗಮದ ಅಭಿವೃದ್ಧಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೮೯೩ (೪೪೯೪) ಮಾನ್ಯ ಜವಳಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೈಮಗ್ಗ ಅಭಿವೃದ್ಧಿ ನಿಗಮ ಹಲವಾರು ವರ್ಷಗಳಿಂದ ಸಂಕಷ್ಟ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ನಿಗಮವನ್ನು ಪುನಃಶ್ಚೇತನಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ೨೦೧೭–೧೮ನೇ ಸಾಲಿನಲ್ಲಿ ಆಯವ್ಯಯದಲ್ಲಿ ಪುನಃಶ್ಚೇತನಕ್ಕೆ ನೀಡಲಾದ ಅನುದಾನವೆಷ್ಟು;

(ಈ) ಇದನ್ನು ಯಾವ ಯಾವ ಕೆಲಸಕ್ಕೆ ವಿನಿಯೋಗ ಮಾಡಲಾಗಿದೆ? (ಪೂರ್ಣ ವಿವರ ನೀಡುವುದು)

## ನೇಕಾರರ ಸಮಸ್ಯೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೮೯೪ (೪೪೯೧) ಮಾನ್ಯ ಜವಳಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಅತಿ ಹೆಚ್ಚು ನೇಕಾರಿಕೆ ಕುಟುಂಬಗಳು ಸಂಕಷ್ಟದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಜಂಟಿ ನಿರ್ದೇಶಕರ ಕಛೇರಿ, ಬೆಳಗಾವಿಯಲ್ಲಿ ನೇಕಾರರ ಮನವಿಗೆ ಸ್ಪಂದಿಸದೇ ಇರುವುದರಿಂದ ಅನೇಕ ಹೋರಾಟಗಳು ನಡೆದಿರುವುದು ನಿಜವೇ; ನೇಕಾರರ ಯಾವ ಯಾವ ಮನವಿಗೆ ಅಧಿಕಾರಿಗಳು ಸ್ಪಂದಿಸಿರುವುದಿಲ್ಲ;(ವಿವರ ನೀಡುವುದು)

(ಇ) ಕಳೆದ ೫ ವರ್ಷದಲ್ಲಿ ನೇಕಾರರ ಯಾವ ಯಾವ ಸಮಸ್ಯೆಗಳನ್ನು ಗುರುತಿಸಿ ಸರ್ಕಾರದ ಮಟ್ಟದಲ್ಲಿ ಅನುಕೂಲ ಮಾಡಿಕೊಡಲಾಗಿದೆ?

## ಬಡ ನೇಕಾರರಿಗೆ ಉಚಿತ ವಿದ್ಯುತ್ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೮೯೫ (೪೪೯೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಅತೀ ಹೆಚ್ಚು ಬಡಕೂಲಿ ಕಾರ್ಮಿಕ ನೇಕಾರರು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ವಿದ್ಯುತ್ ಚಾಲಿತ ಮಗ್ಗಗಳಿಗೆ ಇಲಾಖೆ ವತಿಯಿಂದ ಸಬ್ಸಿಡಿ ದರದಲ್ಲಿ ವಿದ್ಯುತ್ ನೀಡಲಾಗುತ್ತಿದೆಯೇ;

(ಇ) ಈ ಕ್ಷೇತ್ರದಲ್ಲಿ ಎಷ್ಟು ಕುಟುಂಬಗಳಿಗೆ ಸಬ್ಸಿಡಿ ದರದಲ್ಲಿ ವಿದ್ಯುತ್ ರಿಯಾಯಿತಿ ನೀಡಲಾಗುತ್ತಿದೆ; (ವಿಳಾಸದೊಂದಿಗೆ ವಿವರ ನೀಡುವುದು)

(ಈ) ಗುಡಿ ಕೈಗಾರಿಕೆ ಮಾಡುತ್ತಿರುವ ಬಡ ನೇಕಾರರಿಗೆ ಉಚಿತ ವಿದ್ಯುತ್ ನೀಡಲು ಸರ್ಕಾರ ಯೋಚಿಸಿದೆಯೇ?

## ಮಾವು ಬೆಳೆಯ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೯೬ (೪೨೫೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಮಾವು ಬೆಳೆಯಿಂದ ಎಷ್ಟು ಪ್ರಮಾಣದಲ್ಲಿ ವಹಿವಾಟು ನಡೆಸಲಾಗಿದೆ; (ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರದಿಂದ ಎಷ್ಟು ಪ್ರಮಾಣದಲ್ಲಿ ಮಾವಿನ ಹಣ್ಣಿನ ರಫ್ತು ನಡೆಸಲಾಗಿದೆ; ಮಾವು ಬೆಳೆಯ ವಹಿವಾಟಿನಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು; (ವರ್ಷಾವಾರು ಮಾಹಿತಿ ನೀಡುವುದು)

(ಇ) ಮಾವು ಬೆಳೆದ ರೈತರಿಗೆ ಉತ್ತಮ ಬೆಲೆ ಸಿಗುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಲೋಕೋಪಯೋಗಿ ರಸ್ತೆಗಳ ದುರಸ್ಥಿ ಬಗ್ಗೆ

**ಶ್ರೀ ಸಿ. ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೯೭ (೪೨೭೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳ ಲೋಕೋಪಯೋಗಿ ರಸ್ತೆಗಳ ದುರಸ್ಥಿ ಮತ್ತು ಅಭಿವೃದ್ಧಿಗಾಗಿ ಕಳೆದ ೩ ವರ್ಷಗಳಲ್ಲಿ ಸಿ.ಆರ್.ಎಫ್ (ಕೇಂದ್ರ ರಸ್ತೆ ನಿಧಿ) ನಿಂದ ಬಂದಿರುವ ಅನುದಾನದ ಮೊತ್ತವೆಷ್ಟು; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸಿ.ಆರ್.ಎಫ್. ನಿಂದ ಬಂದ ಅನುದಾನವನ್ನು ಎರಡು ಜಿಲ್ಲೆಗಳ ಎಲ್ಲಾ ತಾಲ್ಲೂಕುಗಳಿಗೆ ಸಮಾನವಾಗಿ ಹಂಚಿಕೆ ಮಾಡಲಾಗಿದೆಯೇ; (ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸಿ.ಆರ್.ಎಫ್. ನಿಂದ ಬಂದ ಅನುದಾನವನ್ನು ಲೋಕೋಪಯೋಗಿ ರಸ್ತೆಗಳ ದುರಸ್ಥಿ ಮತ್ತು ಅಭಿವೃದ್ಧಿಗಾಗಿ ಎಲ್ಲಾ ತಾಲ್ಲೂಕುಗಳಲ್ಲಿಯೂ ಸಮರ್ಪಕವಾಗಿ ಬಳಸಿಕೊಳ್ಳಲಾಗಿದೆಯೇ;

(ಈ) ಹಾಗಿದ್ದಲ್ಲಿ, ಸಿ.ಆರ್. ಎಫ್. ನಿಂದ ಬಂದ ಅನುದಾನದಲ್ಲಿ ಎರಡು ಜಿಲ್ಲೆಗಳ ಎಷ್ಟು ಲೋಕೋಪಯೋಗಿ ರಸ್ತೆಗಳನ್ನು ದುರಸ್ಥಿಪಡಿಸಿ ಅಭಿವೃದ್ಧಿಪಡಿಸಲಾಗಿದೆ; (ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ಸಿ.ಆರ್.ಎಫ್. ನಿಂದ ಬಂದ ಅನುದಾನವನ್ನು ಕೆಲವು ತಾಲ್ಲೂಕುಗಳಲ್ಲಿ ಲೋಕೋಪಯೋಗಿ ರಸ್ತೆಗಳ ದುರಸ್ಥಿ ಮತ್ತು ಅಭಿವೃದ್ಧಿಗಾಗಿ ಸಮಪರ್ಕವಾಗಿ ಬಳಸಿಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದ್ದೆಯೇ;

(ಊ) ಹಾಗಿದ್ದಲ್ಲಿ, ಅಂತಹ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಕೃಷಿ ಭಾಗ್ಯ ಯೋಜನೆಯ ಅನುಷ್ಟಾನದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೯೮ (೪೫೧೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕೃಷಿ ಭಾಗ್ಯ ಯೋಜನೆಯು ಅನುಷ್ಟಾನವಾಗಿದೆಯೇ; (ವಿವರ ನೀಡುವುದು)

(ಆ) ಈ ಯೋಜನೆಯಿಂದ ಎಷ್ಟು ಫಲಾನುಭವಿಗಳು ಉಪಯೋಗ ಪಡೆದುಕೊಂಡಿದ್ದಾರೆ; (ವರ್ಗಾವಾರು ವಿವರ ನೀಡುವುದು)

(ಇ) ಕೃಷಿ ಭಾಗ್ಯ ಯೋಜನೆಯನ್ನು ಮಳೆ ಆಶ್ರಿತ ಕಾಫಿ ಬೆಳೆಗಾರರಿಗೆ ಅನ್ವಯವಾಗುವಂತೆ ಯೋಜನೆ ರೂಪಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ;

(ಈ) ಮಲೆನಾಡು ಪ್ರದೇಶದಲ್ಲಿನ ಬೆಳೆಗಾರರು (ಮಳೆ ಆಶ್ರಿತ) ಈ ಯೋಜನೆಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ದೇವಸ್ಥಾನಗಳಿಗೆ ನೀಡಿರುವ ಅನುದಾನದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೯೯ (೪೫೦೮) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿರುವ ದೇವಸ್ಥಾನಗಳಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಅನುದಾನದಲ್ಲಿ ಬೆಂಗಳೂರು ನಗರ ಜಿಲ್ಲೆಯ ಯಾವ ಯಾವ ದೇವಸ್ಥಾನಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ೨೦೧೬–೧೭ನೇ ಸಾಲಿನಲ್ಲಿ ನೂತನವಾಗಿ ನಿರ್ಮಿಸಿರುವ ದೇವಸ್ಥಾನಗಳಿಗೆ ಮತ್ತು ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ನೀಡಿರುವ ಅನುದಾನವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಸರ್ಕಾರದ ಅನುದಾನವನ್ನು ಮುಜರಾಯಿ ಇಲಾಖಾ ದೇವಸ್ಥಾನಗಳಿಗೆ ಮಾತ್ರ ನೀಡಲಾಗುವುದೇ; ಅಥವಾ ಖಾಸಗಿ ದೇವಸ್ಥಾನಕ್ಕೂ ನೀಡಲಾಗುವುದೇ?

## ತೋಟಗಾರಿಕೆ ಇಲಾಖೆಯಿಂದ ಮಂಜೂರಾದ ಅನುದಾನಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦೦ (೪೫೨೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಗೆ ತೋಟಗಾರಿಕಾ ಇಲಾಖೆಯಿಂದ ಮಂಜೂರಾದ ಅನುದಾನವೆಷ್ಟು;

(ಆ) ಈ ಮಂಜೂರಾದ ಅನುದಾನದಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ;

(ಇ) ಈ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ–ಗೊಳಿಸಲಾಗಿದೆಯೇ? (ಆರ್ಥಿಕ ಹಾಗೂ ಭೌತಿಕ ಫಲಾನುಭವಿಗಳ ವಿವರ ನೀಡುವುದು)

## ಹಾಲು ಉತ್ಪಾದಕರ ಸಂಘಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦೧ (೪೫೩೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಪ್ರಾರಂಭಿಸಲಾಗಿರುವ, ನೋಂದಾಯಿಸಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳೆಷ್ಟು;

(ಆ) ಕಳೆದ ೩ ವರ್ಷಗಳಲ್ಲಿ ಈ ಸಹಕಾರ ಸಂಘಗಳಿಗೆ ನೀಡಲಾದ ಅನುದಾನವೆಷ್ಟು;

(ಇ) ಹಾಲು ಉತ್ಪಾದನೆಯನ್ನು ಹೆಚ್ಚಿಸಲು ಅನುಸರಿಸುತ್ತಿರುವ ಮಾರ್ಗವೇನು;

(ಈ) ಹಾಲು ಉತ್ಪಾದಕರ ಸಹಕಾರ ಸಂಘಗಳನ್ನು ತೆರೆಯಲು ಇರುವ ಮಾನದಂಡಗಳೇನು?

## ಹೆದ್ದಾರಿಗಳನ್ನು ಮೇಲ್ದರ್ಜೆಗೇರಿಸುವುದರ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦೨ (೪೫೮೧೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತಾಲ್ಲೂಕು ಹೆದ್ದಾರಿಗಳನ್ನು ಜಿಲ್ಲಾ ಹೆದ್ದಾರಿಗಳಿಗೆ ಮತ್ತು ಜಿಲ್ಲಾ ಹೆದ್ದಾರಿಗಳನ್ನು ರಾಜ್ಯ ಹೆದ್ದಾರಿಗಳಿಗೆ ಹಾಗೂ ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಎಷ್ಟು ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೆಂಗಳೂರು ನಗರ ಜಿಲ್ಲೆಯಲ್ಲಿ ಯಾವುದಾದರು ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗಿದೆಯೇ? (ವಿವರ ನೀಡುವುದು)

## ಸಹಕಾರ ಸಂಘಗಳ ನೋಂದಣಿ ಮತ್ತು ಪರವಾನಿಗೆ ನವೀಕರಣ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦೩ (೪೪೦೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಸಹಕಾರ ಕಾಯಿದೆ, ೧೯೬೦ರ ಪ್ರಕಾರ ನೋಂದಣೆಯಾದ ಸಂಘಗಳು ಎಷ್ಟು; ಅವುಗಳಲ್ಲಿ ಲೆಕ್ಕ ಪತ್ರ ಸಲ್ಲಿಸಿದ ಸಂಸ್ಥೆಗಳು ಎಷ್ಟು; (ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)

(ಆ) ಕರ್ನಾಟಕ ಸಹಕಾರ ಸಂಘ ನಿಯಮ ೧೭ (೪) ತಿದ್ದುಪಡಿ ದಿನಾಂಕ: ೨೯.೦೭.೨೦೧೭ ರಂದು ಆಗಿದ್ದು, ಇದರಿಂದ ಗ್ರಾಮೀಣ ಮಟ್ಟದ ಸಹಕಾರ ಸಂಘಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರದ ಕ್ರಮವೇನು;

(ಇ) ಹಣಕಾಸು/ಲೇವಾದೇವಿ/ ಗಿರವಿದಾರ ಸಂಸ್ಥೆಗಳು ಪರವಾನಿಗೆ ನವೀಕರಣ ಮಾಡಲು ಇರುವ ನಿಯಮವೇನು; ಈ ನಿಯಮದಿಂದ ಈ ಸಂಸ್ಥೆಗಳು ಕಿರುಕುಳವನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರದ ಕ್ರಮವೇನು?

## ಕೃಷಿ ನೀರಾವರಿ ಪಂಪ್ ಸೆಟ್ಟುಗಳಿಗೆ ೨೦೧೩ ರಿಂದ ಪೂರ್ವಾನ್ವಯವಾಗುವಂತೆ ಮೂಲಸೌಕರ್ಯ ವೆಚ್ಚ ಪಾವತಿ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦೪ (೪೪೦೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ವಿದ್ಯುತ್ ಸಂಪರ್ಕಗೊಂಡ ರೈತರ ಕೃಷಿ ಪಂಪ್ ಸೆಟ್ಟುಗಳಿಗೆ ೨೦೧೩ ರಿಂದ ಪೂರ್ವಾನ್ವಯವಾಗುವಂತೆ ಮೂಲ ಸೌಕರ್ಯ ವೆಚ್ಚ ರೂ.೧೦,೦೦೦/–ನ್ನು ಪಾವತಿಸಬೇಕಾಗಿ ಮೆಸ್ಕಾಂ ಆದೇಶಿಸಿರುವುದು ನಿಜವೇ; ಹೌದಾದಲ್ಲಿ, ಆದೇಶ ಪ್ರತಿ ಒದಗಿಸುವುದು;

(ಆ) ವಿದ್ಯುತ್ ಸಂಪರ್ಕದ ಸಮಯದಲ್ಲಿ ಈ ಮೊತ್ತ ಪಾವತಿಗೆ ಸಂಬಂಧಪಟ್ಟ ಗ್ರಾಹಕರಿಗೆ ತಿಳಿಸದೇ ಇರಲು ಕಾರಣವೇನು; ಇದರಿಂದ ಬಡ ರೈತರ ಮೇಲೆ ಆರ್ಥಿಕ ಹೊರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೌದಾದಲ್ಲಿ, ಸರ್ಕಾರದ ಪರಿಹಾರ ಕ್ರಮವೇನು?

## ಉಡುಪಿ ಜಿಲ್ಲೆಯಲ್ಲಿ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾನಿಲಯ ಪ್ರಾರಂಭಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦೫ (೪೪೦೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಪ್ರಧಾನ ಜಿಲ್ಲೆಗಳಲ್ಲಿ ಕೃಷಿ ಮತ್ತು ತೋಟಗಾರಿಕೆ ವಿಶ್ವ ವಿದ್ಯಾಲಯಗಳನ್ನು ರಚಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ, ಕಾರಣವೇನು;

(ಆ) ಉಡುಪಿ ಜಿಲ್ಲೆಯಲ್ಲಿ ಕೃಷಿ ಮತ್ತು ತೋಟಾಗಾರಿಕೆ ಇಲಾಖೆಯ ೪೦೦ ಎಕರೆಗೂ ಹೆಚ್ಚು ಭೂಮಿ, ೧೦೦ ಎಕರೆಗೂ ಹೆಚ್ಚು ಸಹಕಾರಿ ಸಕ್ಕರೆ ಕಾರ್ಖಾನೆಯ ಭೂಮಿ ಮತ್ತು ಸಾವಿರಾರು ಎಕರೆ ಗೇರು ಅಭಿವೃದ್ಧಿ ನಿಗಮದ ಭೂಮಿಯಿದ್ದರೂ ಸ್ಥಳೀಯ ಕೃಷಿ ಮತ್ತು ತೋಟಗಾರಿಕೆಯ ಅಭಿವೃದ್ಧಿಗೆ ವ್ಯವಸ್ಥೆಯಿಲ್ಲದಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು;

(ಇ) ಈ ವಿಶ್ವವಿದ್ಯಾನಿಲಯಕ್ಕೆ ಅವಶ್ಯಕತೆ ಇರುವಷ್ಟು ಭೂಮಿ ಇರುವುದರಿಂದ ವಿಶ್ವವಿದ್ಯಾನಿಲಯದ ಕಾಲೇಜನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರದ ಮುಂದಿದೆಯೇ?

## ಮಾದರಿ ವಿದ್ಯುತ್ ಗ್ರಾಮದ ಆಯ್ಕೆ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦೬ (೪೪೦೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರದ ಮಾದರಿ ವಿದ್ಯುತ್ ಗ್ರಾಮ ಯೋಜನೆಯಡಿಯಲ್ಲಿ ಬೈಂದೂರು ಮತ್ತು ಕುಂದಾಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಆಯ್ಕೆಗೊಂಡ ಗ್ರಾಮಗಳು ಯಾವುವು; ಈ ಗ್ರಾಮಗಳಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿ ವಿವರಗಳನ್ನು ಒದಗಿಸುವುದು;

(ಆ) ಇಲಾಖೆಯ ವತಿಯಿಂದ ಕಾಮಗಾರಿ ನಿರ್ವಹಣೆಗೆ ಅನುಸರಿಸಲಾಗುವ ಮಾರ್ಗಸೂಚಿಗಳೇನು; ಹಾಲಿ ಪ್ರಗತಿಯ ವಿವರ ಒದಗಿಸುವುದು; (ಬೈಂದೂರು, ಕುಂದಾಪುರ ವಿಧಾನಸಭಾ ಕ್ಷೇತ್ರಗಳ ಆಯ್ಕೆಗೊಂಡ ಗ್ರಾಮವಾರು ವಿವರ ನೀಡುವುದು)

(ಇ) ಮಾದರಿ ವಿದ್ಯುತ್ ಗ್ರಾಮದ ಕಾಮಗಾರಿಯನ್ನು ಯಾವಾಗ ಮುಗಿಸಲಾಗುವುದು?

## ಬೆಳೆ ಹಾನಿ ಪರಿಹಾರದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦೭ (೪೨೬೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಿಗೆ ಕಳೆದ ಮೂರು ವರ್ಷಗಳಿಂದ "ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ"ಯಡಿ ಕೇಂದ್ರ ಸರ್ಕಾರ ನೀಡಿರುವ ಬೆಳೆ ಪರಿಹಾರದ ಅನುದಾನ ಎಷ್ಟು; (ವಿವರ ನೀಡುವುದು)

(ಆ) ಇದರಲ್ಲಿ ಈವರೆಗೆ ರೈತರಿಗೆ ವಿತರಿಸಲಾಗಿರುವ ಬೆಳೆ ಪರಿಹಾರ ಎಷ್ಟು; (ವರ್ಷವಾರು, ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಬೆಳೆ ಪರಿಹಾರ ವಿತರಿಸಲು ಬಾಕಿಯಿರುವ ಅನುದಾನ ಎಷ್ಟು; (ವರ್ಷವಾರು, ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಈ) ಬೆಳೆ ಪರಿಹಾರ ವಿತರಿಸಲು ಬಾಕಿಯಿರಲು ಕಾರಣವೇನು? (ಮಾಹಿತಿ ನೀಡುವುದು)

## ಶ್ರೀ ಚನ್ನರಾಯಸ್ವಾಮಿ ದೇವಸ್ಥಾನದ ಜಾಗ ಒತ್ತುವರಿ ಆಗಿರುವ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦೮ (೪೩೯೧) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಹುಸ್ಕೂರು ಗ್ರಾಮದ ಮುಜರಾಯಿ ಇಲಾಖೆಗೆ ಸೇರಿದ ಶ್ರೀ ಚನ್ನರಾಯಸ್ವಾಮಿ ದೇವಸ್ಥಾನದ ಒಟ್ಟು ವಿಸ್ತೀರ್ಣವೆಷ್ಟು;

(ಆ) ದೇವಸ್ಥಾನದ ಅರ್ಚಕರ ವಠಾರದ ಪಾಳು ಜಾಗ ಹಾಗೂ ಕಾಂಪೌಂಡ್ ಜಾಗವು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಒತ್ತುವರಿಯಾದ ಜಾಗದ ವಿಸ್ತೀರ್ಣ ಎಷ್ಟು; ಈ ಒತ್ತುವರಿ ಮಾಡಿರುವವರ ವಿರುದ್ಧ ಈವರೆಗೆ ಕೈಗೊಂಡಿರುವ ಕ್ರಮಗಳೇನು: (ವಿವರ ನೀಡುವುದು)

(ಈ) ಈ ಒತ್ತುವರಿಯಾದ ಜಾಗವನ್ನು ತೆರವುಗೊಳಿಸಿ ದೇವಸ್ಥಾನದ/ ಸರ್ಕಾರದ ಸುಪರ್ದಿಗೆ ವಹಿಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇದಕ್ಕೆ ನಿಗದಿಗೊಳಿಸಿರುವ ಕಾಲಮಿತಿ ಎಷ್ಟು? (ವಿವರ ನೀಡುವುದು)

## ಕೃಷಿ ಯಂತ್ರೋಪಕರಣಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦೯ (೪೨೩೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೃಷಿ ಇಲಾಖೆಯು ವಿವಿಧ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ವಿತರಿಸಲಾಗಿದೆಯೇ;

(ಆ) ವಿತರಿಸಲಾಗಿದ್ದಲ್ಲಿ, ಯಾವ್ಯಾವ ಯಂತ್ರೋಪಕರಣಗಳನ್ನು ವಿತರಿಸಲಾಗಿದೆ; (ತಾಲ್ಲೂಕುವಾರು, ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳ ವ್ಯಾಪ್ತಿಯಲ್ಲಿ ಯಂತ್ರೋಪಕರಣಗಳನ್ನು ಈವರೆಗೆ ಪಡೆದಿರುವ ರೈತ ಫಲಾನುಭವಿಗಳ ಸಂಪೂರ್ಣ ವಿವರ ನೀಡುವುದು?

## ಎ.ಪಿ.ಎಂ.ಸಿ. ಗೋದಾಮುಗಳಲ್ಲಿ ಕೃಷಿ ಉತ್ಪಾದಕಗಳ ಶೇಖರಣೆಗೆ ಸೂಕ್ತ ಮೂಲಭೂತ ಸೌಕರ್ಯವಿಲ್ಲದೆ ಇರುವುದು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೩೯೧೦ (೪೫೩೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಎ.ಪಿ.ಎಂ.ಸಿ ಗೋದಾಮುಗಳ ಸಂಖ್ಯೆ ಎಷ್ಟು; (ಅವುಗಳ ಶೇಖರಣಾ ಸಾಮರ್ಥ್ಯದ ವಿವರ ನೀಡುವುದು)

(ಆ) ಅವುಗಳಲ್ಲಿ ಪಡಿತರಗಳನ್ನು ಹಾಗೂ ಕೃಷಿ ಉತ್ಪಾದನೆಗಳನ್ನು ಶೇಖರಿಸಲು ಸರಿಯಾದ ವ್ಯವಸ್ಥೆಯಿಲ್ಲದ ಗೋದಾಮುಗಳು ಯಾವುವು; (ವಿವರ ನೀಡುವುದು)

(ಇ) ಕೆಲವು ಗೋದಾಮುಗಳಲ್ಲಿ ಶೇಖರಣೆಯಾಗಿದ್ದ ಟನ್‌ಗಟ್ಟಲೆ ಅಕ್ಕಿ ಮತ್ತು ಗೋಧಿ ಇತ್ತೀಚೆಗೆ ಮುಗ್ಗಲು ಹಿಡಿದು, ಹುಳುಗಳ ಗೂಡು ಕಾಣಿಸಿಕೊಂಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು)

## ರಾಜ್ಯ ನೀರಾ ನೀತಿ ಅನುಷ್ಠಾನ ವಿಳಂಬ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೩೯೧೧ (ಳಚಿಇಚಿ) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಂಕಷ್ಟಕ್ಕೆ ಸಿಲುಕಿರುವ ತೆಂಗು ಬೆಳಗಾರರನ್ನು ಸಬಲರನ್ನಾಗಿಸುವ ಉದ್ದೇಶದಿಂದ “ರಾಜ್ಯ ನೀರಾ ನೀತಿ” ರೂಪಿಸಿದ್ದು ನಿಜವೇ; ನಿಜವಾಗಿದ್ದಲ್ಲಿ, ಯಾವಾಗ ರೂಪಿಸಲಾಯಿತು;

(ಆ) ಈ ಸಂಬಂಧ ನೀರಾ ನೀತಿಯನ್ನು ಅನುಷ್ಠಾನಗೊಳಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ;

(ಇ) ಸದರಿ ನೀತಿಯುನ್ನು ರೂಪಿಸಿ ಒಂದು ವರ್ಷವಾಗಿದ್ದರೂ, ಅನುಷ್ಠಾನಗೊಳಿಸುವಲ್ಲಿ ವಿಳಂಬವಾಗಲು ಕಾರಣವೇನು; ಪ್ರಸ್ತುತ ಯಾವ ಹಂತದಲ್ಲಿದೆ?

## ರಾಜ್ಯದಲ್ಲಿನ ಏಕದಳ ಧಾನ್ಯದ ಬೆಳೆಗಳಿಗೆ ಲದ್ದಿ ಹುಳು ಹಾವಳಿಯ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೩೯೧೨ (೪೫೩೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ, ರಾಜ್ಯದಲ್ಲಿ ಏಕದಳ ಧಾನ್ಯಗಳಾದ ಮೆಕ್ಕೆಜೋಳ, ರಾಗಿ, ನವಣೆ ಮೊದಲಾದ ಬೆಳೆಗಳು ಲದ್ದಿ ಹುಳು ಹಾವಳಿಗೆ ತುತ್ತಾಗಿರುವುದು ನಿಜವೇ;

(ಆ) ನಿಜವಾಗಿದ್ದಲ್ಲಿ, ಯಾವ ಯಾವ ತಾಲ್ಲೂಕುಗಳಲ್ಲಿ ಯಾವ ಪ್ರಮಾಣದ ದಾಸ್ತಾನು ಹಾಳಾಗಿದೆ; (ವಿವರ ನೀಡುವುದು)

(ಇ) ಲದ್ದಿ ಹುಳು ಹಾವಳಿಯನ್ನು ತಡೆಗಟ್ಟಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು; ಸದರಿ ಹುಳು ಹಾವಳಿಯನ್ನು ತಡೆಗಟ್ಟುವಲ್ಲಿ ರೈತರಿಗೆ ಸೂಕ್ತ ಮಾಹಿತಿ ಹಾಗೂ ಕೀಟನಾಶಕಗಳನ್ನು ನೀಡಲಾಗುವುದೆ; ನೀಡುವ ವಿಷಯದಲ್ಲಿ ವಿಫಲವಾಗಲು ಕಾರಣಗಳೇನು?

## ರಾಜ್ಯದ ರೈತರ ಕೃಷಿ ಸಾಲ ಸಂಪೂರ್ಣ ಮನ್ನಾ ಮಾಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೩೯೧೩ (೪೫೩೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಸಹಕಾರ ಸಂಘಗಳಿಂದ ಪಡೆದಿರುವ ರಾಜ್ಯದ ರೈತರ ಕೃಷಿ ಸಾಲದ ಮೊತ್ತ ಎಷ್ಟು; ರೈತರ ಕೃಷಿ ಸಾಲಕ್ಕೆ ಹಾಕಿರುವ ಬಡ್ಡಿಯ ಮತ್ತು ಸುಸ್ತಿ ಬಡ್ಡಿಯ ಮೊತ್ತವೇಷ್ಟು; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ರಾಜ್ಯದ ರೈತರ ಕೃಷಿ ಸಾಲವನ್ನು ಮನ್ನಾ ಮಾಡಲಾಗಿದೆಯೇ; ಮಾಡಿದ್ದಲ್ಲಿ, ವಿವರ ನೀಡುವುದು;

(ಇ) ಮನ್ನಾ ಮಾಡಿದ ನಂತರ ಉಳಿದಿರುವ ರೈತರ ಕೃಷಿ ಸಾಲದ ಮೊತ್ತವೆಷ್ಟು; ಉಳಿದ ಸಾಲವನ್ನು ಮನ್ನಾ ಮಾಡುವಲ್ಲಿ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು? (ವಿವರ ನೀಡುವುದು)

## ಭಾರಿ ಮಳೆಯಿಂದ ಗುಂಡಿಗಳುಂಟಾಗಿರುವ ರಾಜ್ಯ ಹೆದ್ದಾರಿಗಳ ತುರ್ತು ರಿಪೇರಿ ಮಾಡುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೩೯೧೪ (೪೫೩೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಕಿ.ಮೀ. ರಾಜ್ಯ ಹೆದ್ದಾರಿ ಇದೆ; (ವಿವರ ನೀಡುವುದು)

(ಆ) ಇತ್ತೀಚೆಗೆ ಬಂದ ಭಾರಿ ಮಳೆಯಿಂದಾಗಿ ಎಷ್ಟು ಪ್ರಮಾಣದಲ್ಲಿ ರಾಜ್ಯ ಹೆದ್ದಾರಿಗಳು ಹದೆಗೆಟ್ಟಿವೆ; (ವಿವರ ನೀಡುವುದು)

(ಇ) ತೀರ ಹದಗೆಟ್ಟಿರುವ ರಾಜ್ಯ ಹೆದ್ದಾರಿಗಳ ರಸ್ತೆ ರಿಪೇರಿ ಮತ್ತು ತೇಪೆ ಕಾರ್ಯವನ್ನು ಕೈಗೆತ್ತಿಕೊಳ್ಳುವಂತೆ ಕ್ರಮ ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು)

(ಈ) ಕೈಗೊಳ್ಳಲಾಗಿದ್ದಲ್ಲಿ, ಅದಕ್ಕೆಂದೇ ವಿಶೇಷವಾಗಿ ಹಣ ಬಿಡುಗಡೆ ಮಾಡಲಾಗಿದೆಯೇ; (ವಿವರ ನೀಡುವುದು)

(ಉ) ಇಲ್ಲವಾದಲ್ಲಿ, ತುರ್ತಾಗಿ ರಸ್ತೆಯ ಗುಂಡಿಗಳನ್ನು ಮುಚ್ಚುವುದು ಮತ್ತು ರಸ್ತೆ ಕಿತ್ತುಹೋದ ಕಡೆಗಳಲ್ಲಿ ತೇಪೆ ಹಾಕುವ ಕೆಲಸವನ್ನು ಮಾಡಿಸಲು ಸರ್ಕಾರವು ಮುಂದಾಗುವುದೇ?

## ಸಹಕಾರಿ ಇಲಾಖೆ ಯೋಜನೆಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೯೧೫ (೪೫೬೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಸಹಕಾರ ಇಲಾಖೆಗೆ ಕೇಂದ್ರ ಸರ್ಕಾರದ ಎಷ್ಟು ಯೋಜನೆಗಳಲ್ಲಿ ಅನುದಾನಗಳು ದೊರೆಯುತ್ತಿದೆ; ಕಳೆದ ನಾಲ್ಕು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯದ ಸಹಕಾರ ಇಲಾಖೆಗೆ ಹಂಚಿಕೆಯಾಗಿರುವ ಹಾಗೂ ಬಿಡುಗಡೆಯಾಗಿರುವ ಅನುದಾನಗಳು ಎಷ್ಟು;

(ಆ) ಕರ್ನಾಟಕದಲ್ಲಿ Dairy Entrepreneurship Development Scheme (DEDS) ಎಂದಿನಿಂದ ಜಾರಿಯಿರುತ್ತದೆ; ಕಳೆದ ನಾಲ್ಕು ವರ್ಷಗಳಲ್ಲಿ ಈ ಯೋಜನೆಗೆ ನಬಾರ್ಡ್ (NABARD) ಮೂಲಕ ಎಷ್ಟು ಹಣ ಹಂಚಿಕೆ ಮತ್ತು ಬಿಡುಗಡೆ ಆಗಿರುತ್ತದೆ; ಎಷ್ಟು ಫಲಾನುಭವಿಗಳಿಗೆ ಇದರ ಪ್ರಯೋಜನ ದೊರೆತಿರುತ್ತದೆ;

(ಇ) ಸಹಕಾರಿ ಇಲಾಖೆ ಮೂಲಕ ಎಷ್ಟು ಜಿಲ್ಲಾ ಪಂಚಾಯತ್‌ಗಳಿಗೆ ಕಳೆದ ಮೂರು ವರ್ಷಗಳಲ್ಲಿ ವಾರ್ಷಿಕ ನೆರವನ್ನು ನೀಡಲಾಗಿರುತ್ತದೆ; ಸದರಿ ಹಣವು ಜಿಲ್ಲಾ ಪಂಚಾಯತ್‌ಗಳಲ್ಲಿ ಯಾವ ಉದ್ದೇಶಗಳಿಗೆ ಬಳಕೆ ಆಗಿರುತ್ತದೆ;

(ಈ) ೨೦೧೭–೧೮ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಉಪ ಯೋಜನೆಯಲ್ಲಿ ಸಹಕಾರಿ ಇಲಾಖೆಗೆ ಆಯವ್ಯಯದ ಮೂಲಕ ಎಷ್ಟು ಹಣ ಹಂಚಿಕೆ ಆಗಿರುತ್ತದೆ; ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಆಗಿರುತ್ತದೆ;

(ಉ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಲೆಕ್ಕ ಪರಿಶೋಧನೆಗೆ ಒಳಪಟ್ಟ ಸಹಕಾರ ಸಂಘಗಳು ಎಷ್ಟು; ಲೆಕ್ಕ ಪರಿಶೋಧನೆ ಆಗದೇ ಇರುವ ಸಹಕಾರ ಸಂಘಗಳು ಎಷ್ಟು;

(ಊ) ಸಹಕಾರ ಇಲಾಖೆಯು ಪ್ರಾಥಮಿಕ ಸಹಕಾರ ಸಂಘಗಳಿಗೆ ನಡೆಸುವ ಆಡಳಿತ ಮಂಡಳಿಗಳ ಚುನಾವಣೆಗೆ ಸರ್ಕಾರದ ವತಿಯಿಂದಲೇ ಚುನಾವಣಾ ವೆಚ್ಚವನ್ನು ಭರಿಸುತ್ತದೆಯೇ; ಇದಕ್ಕೆ ಪೂರಕವಾದ ಕಾನೂನು ತಿದ್ದುಪಡಿಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

## ಬೀಜಗಳ ಪೂರೈಕೆ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೯೧೬ (೪೫೬೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಕೃಷಿ ಇಲಾಖೆಯು ಕರ್ನಾಟಕ ರಾಜ್ಯದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಾಣ ಮಾಡಿರುತ್ತದೆ; ನಾಲ್ಕು ವರ್ಷಗಳಲ್ಲಿ ಕೃಷಿ ಹೊಂಡಗಳಲ್ಲಿ ಬಿದ್ದು ಮೃತರಾದವರ ಸಂಖ್ಯೆ ಎಷ್ಟು; ಮೃತರ ಕುಟುಂಬಗಳಿಗೆ ಕೃಷಿ ಇಲಾಖೆಯಿಂದ ಪರಿಹಾರ ನೀಡಲಾಗಿದೆಯೇ; ನೀಡದೇ ಇದ್ದಲ್ಲಿ, ಸರ್ಕಾರ ಈ ಸಂಬಂಧ ಸಮಗ್ರವಾದ ಯೋಜನೆಯೊಂದನ್ನು ರೂಪಿಸುವುದೇ;

(ಆ) ನಕಲಿ ರಸಗೊಬ್ಬರ ಮಾರಾಟ ಸಂಬಂಧ ಕಳೆದ ನಾಲ್ಕು ವರ್ಷಗಳಲ್ಲಿ ಕೃಷಿ ಇಲಾಖೆ ಎಷ್ಟು ದೂರುಗಳನ್ನು ರೈತರಿಂದ ಪಡೆದಿರುತ್ತದೆ; ಕೃಷಿ ಇಲಾಖೆಯು ನಕಲಿ ರಸಗೊಬ್ಬರ ಮಾರಾಟಗಾರರ ಮೇಲೆ ಎಷ್ಟು

ಪ್ರಕರಣಗಳನ್ನು ಕಳೆದ ನಾಲ್ಕು ವರ್ಷಗಳಲ್ಲಿ ದಾಖಲು ಮಾಡಿರುತ್ತದೆ; ದೃಢೀಕೃತ ರಸಗೊಬ್ಬರ ಮಾರಾಟ ಸಂಬಂಧ ವಾರ್ಷಿಕವಾಗಿ ಕೃಷಿ ಅಧಿಕಾರಿಗಳು ಇಲಾಖೆಗೆ ಮತ್ತು ರೈತರಿಗೆ ಮಾಹಿತಿ ನೀಡುತ್ತಿರುವರೇ;

(ಇ) ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಕೃಷಿ ಇಲಾಖೆ ರೈತರಿಗೆ ರಾಜ್ಯದಲ್ಲಿ ಎಷ್ಟು ಪ್ರಮಾಣದ ಬೀಜಗಳ ಪೂರೈಕೆ ಹಾಗೂ ರಸಗೊಬ್ಬರ ಪೂರೈಕೆ ಮಾಡಿರುತ್ತದೆ; ಯಾವ ಯಾವ ಜಿಲ್ಲೆಗಳಲ್ಲಿ ರೈತರಿಂದ ಬೀಜಗಳ ಪೂರೈಕೆಗೆ ಹಾಗೂ ರಸಗೊಬ್ಬರದ ಪೂರೈಕೆಗೆ ಹೆಚ್ಚುವರಿ ಬೇಡಿಕೆ ಬಂದಿರುತ್ತದೆ;

(ಈ) ಕೃಷಿ ಇಲಾಖೆಯು ಸಾವಯವ ಗೊಬ್ಬರದ ಯೋಜನೆಯಲ್ಲಿ ರೈತರಿಗೆ ನೀಡುತ್ತಿರುವ ಸಹಾಯಧನವನ್ನು ಹೆಚ್ಚಿಸಲು ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ; ರೈತರಿಗೆ ಪೂರೈಸುತ್ತಿರುವ ಕೃಷಿ ಪರಿಕರಗಳ ಶೇ.೫೦ರ ರಿಯಾಯ್ತಿ ದರವನ್ನು ಹೆಚ್ಚಿಸುವ ಉದ್ದೇಶ ಇದೆಯೇ;

(ಉ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕೃಷಿ ಇಲಾಖೆಯು ಪ್ರಸಕ್ತ ಸಾಲಿನಲ್ಲಿ ಎಷ್ಟು ಪ್ರಮಾಣದ ಬೀಜ ಮತ್ತು ರಸಗೊಬ್ಬರಗಳನ್ನು ಪೂರೈಕೆ ಮಾಡಿರುತ್ತದೆ; ಕಳೆದ ಮೂರು ವರ್ಷಗಳಲ್ಲಿ ಈ ತಾಲ್ಲೂಕಿನಲ್ಲಿ ರೈತರಿಗೆ ಒಟ್ಟು ಎಷ್ಟು ಮೊತ್ತದ ಅನುದಾನಗಳನ್ನು ವಿವಿಧ ರೂಪದಲ್ಲಿ ನೀಡಲಾಗಿದೆ; ಫಲಾನುಭವಿಗಳ ಒಟ್ಟು ಸಂಖ್ಯೆ ಎಷ್ಟು; ತಾಲ್ಲೂಕಿನ ಕೃಷಿ ಅಧಿಕಾರಿಗಳು ಎಷ್ಟು ಕೃಷಿ ಅಭಿಯಾನ ಕಾರ್ಯಕ್ರಮಗಳನ್ನು ಹಾಗೂ ರೈತರಿಗೆ ಮಾಹಿತಿ ನೀಡುವ ಕಾರ್ಯಕ್ರಮವನ್ನು ಕೈಗೊಂಡಿರುತ್ತಾರೆ?

## ಹೆದ್ದಾರಿ ಕಾಮಗಾರಿ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೯೧೭ (೪೫೫೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ: ೦೧.೦೪.೨೦೧೩ ರಿಂದ ಇಲ್ಲಿಯವರೆಗೆ ರಾಜ್ಯ ಸರ್ಕಾರ ಎಷ್ಟು ಮೊತ್ತದ ರಾಜ್ಯ ಹೆದ್ದಾರಿ ಅಭಿವೃದ್ಧಿ ಕಾಮಗಾರಿಗಳನ್ನು ಯಾವ ಯಾವ ಯೋಜನೆಯಡಿ ಕೈಗೊಂಡಿರುತ್ತದೆ; ಇವುಗಳಿಗೆ ಹಂಚಿಕೆಯಾಗಿರುವ ಅನುದಾನ ಎಷ್ಟು; ಬಿಡುಗಡೆಯಾಗಿರುವ ಅನುದಾನ ಎಷ್ಟು;

(ಆ) ಲೋಕೋಪಯೋಗಿ ಇಲಾಖೆಯು ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡಗಳ ಉಪ ಯೋಜನೆ ಅಡಿಯಲ್ಲಿ ಪ್ರಸಕ್ತ ವರ್ಷ ಎಷ್ಟು ಕಿಲೋ ಮೀಟರ್ ಕಾಂಕ್ರಿಟ್ ರಸ್ತೆ ನಿರ್ಮಾಣಕ್ಕೆ ಪ್ರತಿ ತಾಲ್ಲೂಕಿನಲ್ಲಿ ಅನುಮೋದನೆ ನೀಡಿರುತ್ತದೆ; (ತಾಲ್ಲೂಕುವಾರು, ಕಾಮಗಾರಿವಾರು ಮೊತ್ತದ ಸಹಿತವಾಗಿ ವಿವರ ನೀಡುವುದು)

(ಇ) ಲೋಕೋಪಯೋಗಿ ಇಲಾಖೆಯು ಬೆಂಗಳೂರು ಸುತ್ತ ಮುತ್ತ ಎಷ್ಟು ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಕಾಮಗಾರಿಗಳನ್ನು ಕೈಗೊಂಡಿರುತ್ತದೆ; ಸದರಿ ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗಿದೆಯೇ; ಅದರ ವಿವರಗಳನ್ನು ನೀಡುವುದು; ಗುತ್ತಿಗೆದಾರರಿಗೆ ಈ ಕಾಮಗಾರಿಗಳಿಗೆ ಇಲ್ಲಿಯವರೆಗೆ ಲೋಕೋಪಯೋಗಿ ಇಲಾಖೆಯಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ;

(ಈ) ರಾಜ್ಯ ಹೆದ್ದಾರಿ ರಸ್ತೆ ಅಭಿವೃದ್ಧಿಯ ಎಷ್ಟು ಕಾಮಗಾರಿಗಳನ್ನು ಟೆಂಡರ್ ಮೂಲಕ ಮಾಡಲಾಗಿದೆ; ಅಂದಾಜು ಪಟ್ಟಿಗಿಂತ ಹೆಚ್ಚುವರಿಯಾಗಿ ರಾಜ್ಯದ ಹೆದ್ದಾರಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಹಣ ಪಾವತಿ ಮಾಡಲಾಗಿದೆ; ಮಾಡಿದ್ದಲ್ಲಿ, ಕಾರಣವೇನು; ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಹೆದ್ದಾರಿ ರಸ್ತೆ ಅಭಿವೃದ್ಧಿಯ ಎಷ್ಟು ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ಗುತ್ತಿಗೆದಾರರು ಪೂರೈಸಿರುತ್ತಾರೆ; ನಿಯಮಗಳನ್ನು ಎಷ್ಟು ಗುತ್ತಿಗೆದಾರರು ಉಲ್ಲಂಘನೆ ಮಾಡಿರುತ್ತಾರೆ?

## ಜವಳಿ ನೀತಿ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೯೧೮ (೪೫೫೮) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ನೂತನ ಜವಳಿ ನೀತಿ ೨೦೧೩–೧೮ರ ಮೂಲಕ ೦೧/೦೪/೨೦೧೩ರಿಂದ ಇಲ್ಲಿಯುವರೆಗೆ ಎಷ್ಟು ಕೈಗಾರಿಕಾ ಬೆಳವಣಿಗೆಗಳನ್ನು ಸಾಧಿಸಲಾಗಿದೆ; ಈ ನೀತಿಯಿಂದ ಎಷ್ಟು ಜನರಿಗೆ ಉದ್ಯೋಗಾವಕಾಶ ಕಲ್ಪಿಸಲಾಗಿದೆ; ಎಷ್ಟು ಮೊತ್ತದ ರಫ್ತು ವ್ಯವಹಾರ ನಡೆದಿರುತ್ತದೆ;

(ಆ) ರಾಜ್ಯ ಸರ್ಕಾರವು ಜವಳಿ ನೀತಿ ಮುಖಾಂತರ ರಾಜ್ಯದಲ್ಲಿ ಎಷ್ಟು ಜವಳಿ ಮತ್ತು ಗಾರ್ಮೆಂಟ್ಸ್ ಕೈಗಾರಿಕೆಗಳಿಗೆ ೦೧/೦೪/೨೦೧೩ ರಿಂದ ಇಲ್ಲಿಯವರೆಗೆ ಒದಗಿಸಲಾಗಿರುವ ಅನುದಾನ ಎಷ್ಟು; ಹಂಚಿಕೆ ಆಗಿರುವ ಹಣ ಎಷ್ಟು;

(ಇ) ಕೇಂದ್ರದಿಂದ ಜವಳಿ ಇಲಾಖೆಗೆ ವಾರ್ಷಿಕವಾಗಿ ದೊರೆತಿರುವ ಅನುದಾನ ಎಷ್ಟು; ಕಳೆದ ನಾಲ್ಕು ವರ್ಷಗಳಲ್ಲಿ ಕೇಂದ್ರ ಸರ್ಕಾರದ ಪೂರ್ಣ ಅನುದಾನಗಳನ್ನು ಬಳಸಿಕೊಳ್ಳಲಾಗಿರುತ್ತದೆಯೇ;

(ಈ) ಈ ರಾಜ್ಯದಲ್ಲಿ ಕೈ ಉತ್ಪನ್ನಗಳ ಹಾಗೂ ಗೃಹ ಉತ್ಪನ್ನಗಳ ಮಾರುಕಟ್ಟೆಗೆ ಯಾವ ಉತ್ತೇಜನಗಳನ್ನು ನೀಡಿರುತ್ತದೆ ಮತ್ತು ಇವುಗಳನ್ನು ಜಿ.ಎಸ್.ಟಿ ವ್ಯಾಪ್ತಿಯಿಂದ ಹೊರಗಿಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಉ) ರಾಜ್ಯದಲ್ಲಿರುವ ಎಷ್ಟು ಖಾದಿ ಸಂಸ್ಥೆಗಳಿಗೆ ಜವಳಿ ಇಲಾಖೆಯಿಂದ ವಾರ್ಷಿಕ ಅನುದಾನವನ್ನು ನೀಡಲಾಗುತ್ತಿದೆ; (ವಿವರವಾದ ಪಟ್ಟಿಯನ್ನು ಒದಗಿಸತಕ್ಕದ್ದು)

(ಊ) ಕಳೆದ ನಾಲ್ಕು ವರ್ಷಗಳಲ್ಲಿ ಜವಳಿ ಇಲಾಖೆಗೆ ರಾಜ್ಯ ಸರ್ಕಾರ ಆಯವ್ಯಯದ ಮೂಲಕ ನೀಡಿರುವ ವಾರ್ಷಿಕ ಅನುದಾನ ಎಷ್ಟು; ಹಂಚಿಕೆಯಾಗಿರುವ ಹಣ ಎಷ್ಟು; ಆಯವ್ಯಯದಲ್ಲಿ ಘೋಷಣೆಯಾದ ಪೂರ್ಣ ಹಣವನ್ನು ಜವಳಿ ಇಲಾಖೆಗೆ ನೀಡಲಾಗಿದೆಯೇ; ಆ ಪೈಕಿ ಎಷ್ಟು ಹಣವನ್ನು ಇಲಾಖೆ ಖರ್ಚು ಮಾಡಿರುತ್ತದೆ?

## ಬೆಳೆ ಖರೀದಿ ಕೇಂದ್ರಗಳನ್ನು ಪ್ರಾರಂಭಿಸದೇ ಇರುವುದು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೯ (೪೨೩೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಈವರೆಗೆ ಬೆಳೆ ಖರೀದಿಗೆ ಖರೀದಿ ಕೇಂದ್ರಗಳನ್ನು ಪ್ರಾರಂಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಖರೀದಿ ಕೇಂದ್ರಗಳನ್ನು ಪ್ರಾರಂಭಿಸದೇ ಇರುವುದಕ್ಕೆ ತೊಡಕುಗಳೇನು; ಇದರ ನಿವಾರಣೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಖರೀದಿ ಕೇಂದ್ರ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆಯ ನಡುವೆ ದರ ವ್ಯತ್ಯಾಸದಿಂದ ರೈತರಿಗೆ ಅನ್ಯಾಯವಾಗುತ್ತಿರುವುದನ್ನು ತಡೆಗಟ್ಟಲು ಹಾಗೂ ರೈತರಿಗೆ ಅನುಕೂಲವಾಗುವಂತೆ ಖರೀದಿ ಕೇಂದ್ರಗಳನ್ನು ಯಾವ ಕಾಲಮಿತಿಯಲ್ಲಿ ಪ್ರಾರಂಭಿಸಲಾಗುವುದು; ಈ ಕೇಂದ್ರವನ್ನು ಪ್ರಾರಂಭಿಸಲು ಇರುವ ಮಾನದಂಡಗಳೇನು? (ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯ ಸೌಲಭ್ಯಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೨೦ (೪೨೭೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಇಲಾಖೆಯಿಂದ ರೈತರಿಗೆ ವಿವಿಧ ಯೋಜನೆಗಳಲ್ಲಿ ನೀಡುತ್ತಿರುವ ಸಹಾಯಧನ ಕನಿಷ್ಠ ರೀತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರೈತರಿಗೆ ಯಾವ ಯಾವ ಯೋಜನೆಗಳಲ್ಲಿ ಎಷ್ಟೆಷ್ಟು ಸಹಾಯಧನ ನಿಗಧಿಪಡಿಸಿದೆ; (ವಿವರ ನೀಡುವುದು)

(ಇ) ಎಲ್ಲಾ ರೀತಿಯ ಸಹಾಯಧನಗಳನ್ನು ಸಮಗ್ರ ಬಡ ರೈತರಿಗೂ ವಿಸ್ತರಿಸುವ ಬಗ್ಗೆ ಸರ್ಕಾರದ ನಿಲುವೇನು;

(ಈ) ರೈತರಿಗೆ ನೀಡುವ ಸಹಾಯಧನ ಬಳಕೆ ಬಗ್ಗೆ ಯಾವ ರೀತಿಯ ಪ್ರಗತಿ ಪರಿಶೀಲನೆ ನಡೆಸಲಾಗುತ್ತಿದೆ? (ವಿವರ ನೀಡುವುದು)

## ಕೃಷಿ ಮಾರುಕಟ್ಟೆ ಅಭಿವೃದ್ಧಿಗೆ ಅನುದಾನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೨೧ (೪೨೭೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಕೃಷಿ ಉತ್ಪನ್ನ ಮಾರುಕಟ್ಟೆಗಳ ಅಭಿವೃದ್ಧಿಗೆ ನೀಡಲಾದ, ಬಿಡುಗಡೆಯಾದ ಮತ್ತು ಖರ್ಚು ಮಾಡಿದ ಅನುದಾನವೆಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಯಾವ ಯಾವ ಲೆಕ್ಕ ಶೀರ್ಷಿಕೆಗಳ ಅಡಿಯಲ್ಲಿ ಅನುದಾನ ನೀಡಲಾಗಿದೆ; ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ; ಇಲ್ಲದಿದ್ದಲ್ಲಿ, ಕಾರಣಗಳೇನು;

(ಇ) ಆ ಪೈಕಿ ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು? (ತಾಲ್ಲೂಕುವಾರು, ಲೆಕ್ಕಶೀರ್ಷಿಕೆಗಳವಾರು, ಕಾಮಗಾರಿವಾರು ವಿವರ ನೀಡುವುದು)

## ಲೋಕೋಪಯೋಗಿ ರಸ್ತೆಗಳ ನಿರ್ವಹಣೆ ಮತ್ತು ದುರಸ್ಥಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೨೨ (೪೨೭೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯು ಎಷ್ಟು ಕಿ.ಮೀ ರಾಜ್ಯ ಹೆದ್ದಾರಿಯನ್ನು ಮತ್ತು ಜಿಲ್ಲಾ ಮುಖ್ಯ ರಸ್ತೆಗಳನ್ನು ನಿರ್ವಹಣೆ ಮಾಡುತ್ತಿದೆ; ಈ ಹೆದ್ದಾರಿಗಳು ಮತ್ತು ಜಿಲ್ಲಾ ಮುಖ್ಯ ರಸ್ತೆಗಳು ಯಾವ್ಯಾವ ಊರುಗಳಿಗೆ ಮತ್ತು ಯಾವ್ಯಾವ ಅಂತರರಾಜ್ಯಗಳಿಗೆ ಸಂಪರ್ಕವನ್ನು ಕಲ್ಪಿಸುತ್ತಿವೆ;

(ಆ) ಕಳೆದ ೦೩ ವರ್ಷಗಳ ಅವಧಿಯಲ್ಲಿ ಸರ್ಕಾರವು ಪ್ರತಿ ವರ್ಷ ಈ ರಸ್ತೆಗಳ ನಿರ್ವಹಣೆಗಾಗಿ ವೆಚ್ಚ ಮಾಡಿರುವ ಹಣವೆಷ್ಟು; (ತಾಲ್ಲೂಕು ಮತ್ತು ವಿಧಾನಸಭಾ ಕ್ಷೇತ್ರವಾರು ಅಂಕಿ ಅಂಶಗಳನ್ನು ಒದಗಿಸುವುದು)

(ಇ) ಜಿಲ್ಲೆಯ ಬಹುತೇಕ ಹೆದ್ದಾರಿ ಮುಖ್ಯ ರಸ್ತೆಗಳು (ಎಂ.ಡಿ.ಆರ್) ರಸ್ತೆಗಳು ಹಾಳಾಗಿದ್ದು, ಈ ರಸ್ತೆಗಳ ದುರಸ್ಥಿ ಮತ್ತು ನಿರ್ವಹಣೆ ಸಲುವಾಗಿ ಕಳೆದ ಒಂದು ವರ್ಷದಲ್ಲಿ ಬಿಡುಗಡೆ ಮಾಡಲಾದ ಹಣವೆಷ್ಟು;

(ಈ) ಈ ರಸ್ತೆಗಳನ್ನು ಎಷ್ಟು ಅವಧಿಯಲ್ಲಿ ದುರಸ್ಥಿ ಮಾಡಲಾಗುವುದು; ಪ್ರಸ್ತುತ ಸಾಲಿನಲ್ಲಿ ಹೊಸ ರಾಜ್ಯ ಹೆದ್ದಾರಿಗಳನ್ನು ನಿರ್ಮಿಸುವ ಪ್ರಸ್ತಾವನೆ ರಾಜ್ಯ ಸರ್ಕಾರದ ಮುಂದೆ ಇದೆಯೇ? (ಅಂಕಿ ಅಂಶಗಳನ್ನು ಒದಗಿಸುವುದು)

## ಕೃಷಿ ಮಾರುಕಟ್ಟೆ ವ್ಯವಹಾರದ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೨೩ (೪೪೯೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಕೃಷಿ ಉತ್ಪನ್ನ ಮಾರುಕಟ್ಟೆಗಳಿವೆ; ಏಕೀಕೃತ ವ್ಯವಸ್ಥೆಯಲ್ಲಿ ಎಷ್ಟು ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಆನ್‌ಲೈನ್ ವ್ಯವಹಾರ ನಡೆಸಲಾಗುತ್ತಿದೆ; ಉಳಿದ ಕೃಷಿ ಉತ್ಪನ್ನ ಮಾರುಕಟ್ಟೆಗಳನ್ನು ಯಾವ ಕಾಲಮಿತಿಯೊಳಗೆ ವ್ಯವಸ್ಥೆ ಮಾಡಲಾಗುವುದು; (ವಿವರ ನೀಡುವುದು)

(ಆ) ಕೃಷಿ ಉತ್ಪನ್ನ ಮಾರುಕಟ್ಟೆಗಳ ಆನ್‌ಲೈನ್ ವ್ಯವಹಾರ ನಡೆಸಲು ಅಳವಡಿಸಿಕೊಂಡ ಕ್ರಮ, ಖರ್ಚು ವೆಚ್ಚ ಮತ್ತು ಉಸ್ತುವಾರಿ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳ ಪೂರ್ಣ ವಿವರ ನೀಡುವುದು;

(ಇ) ಮಾರುಕಟ್ಟೆಗಳ ಆನ್‌ಲೈನ್ ವ್ಯವಹಾರದ ಅರಿವಿನ ಬಗ್ಗೆ ರೈತರಿಗೆ ತರಬೇತಿ ನೀಡಲಾಗಿದೆಯೇ; ಇದರ ಸಾಧಕ–ಬಾಧಕಗಳ ಬಗ್ಗೆ ರೈತರ ಅಭಿಪ್ರಾಯ ಪಡೆಯಲಾಗಿದೆಯೇ; (ಪೂರ್ಣ ವಿವರ ನೀಡುವುದು)

(ಈ) ಈವರೆಗೆ ಎಷ್ಟು ರೈತ ಉತ್ಪನ್ನಗಳ ಕಂಪನಿಗಳು ನೋಂದಾಯಿಸಿವೆ; ಅದರಲ್ಲಿ ಎಷ್ಟು ಕಾರ್ಯ ನಿರ್ವಹಿಸುತ್ತಿವೆ, ಕಾರ್ಯ ನಿರ್ವಹಿಸದ ಕಂಪನಿಗಳ ಮೇಲೆ ತೆಗೆದುಕೊಂಡ ಕ್ರಮಗಳೇನು?

## ಕೃಷಿ ಇಲಾಖೆಯಲ್ಲಿನ ಬೆಂಬಲ ಬೆಲೆಯಲ್ಲಿನ ಅಸಮಾನತೆ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೨೪ (೪೨೬೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ಇಲಾಖೆ ವತಿಯಿಂದ ಯಾವ ಯಾವ ಬೆಳೆಗಳಿಗೆ ಬೆಂಬಲ ಬೆಲೆ ನೀಡಲಾಗುತ್ತಿದೆ; (ಮಾಹಿತಿ ನೀಡುವುದು)

(ಆ) ಯಂತ್ರಗಳಿಂದ ಗದ್ದೆಯಲ್ಲಿ ಭತ್ತ ಬೆಳೆದರೆ ಮಾತ್ರ ಬೆಂಬಲ ಬೆಲೆ ಇದೆ; ಯಂತ್ರದ ಸಹಾಯವಿಲ್ಲದೇ ಬೆಳೆದ ಭತ್ತಕ್ಕೆ ಬೆಂಬಲ ಬೆಲೆ ಇಲ್ಲದಿರುವುದರಿಂದ ರೈತರು ಮೂಲೆಗುಂಪಾಗಿ, ರೈತರ ಬೆಳೆಗೆ ಬೆಂಬಲ ಬೆಲೆಯಿಲ್ಲದೆ ನೈಜ ರೈತರು ಬೆಳೆದ ಬೆಳೆಗಳಿಗೆ ಬೆಂಬಲ ಬೆಲೆಯಿಲ್ಲದೆ ಸಂಕಷ್ಟಕ್ಕೆ ಒಳಗಾಗುತ್ತಿರುವ ಕುರಿತು ಸರ್ಕಾರದ ನಿಲುವೇನು;

(ಇ) ಸರ್ಕಾರ ರೈತರಿಗೆ ಯಾವ ರೀತಿಯಲ್ಲಿ ನೆರವಾಗುವ ಚಿಂತನೆ ನಡೆಸಿದೆ? (ಮಾಹಿತಿ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿ ಕಳಪೆ ಬೀಜದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೨೫ (೪೨೪೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಹತ್ತಿಬೆಳೆಯ ಕಳಪೆ ಬೀಜದ ಪರಿಣಾಮ ರೈತರಿಗೆ ಭಾರಿ ನಷ್ಟವುಂಟಾದ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕೃಷಿ ಇಲಾಖೆ ಮೇ ೧೮ರ ನಂತರ ಬಿತ್ತನೆ ಬೀಜ ಮಾರಾಟ ಮಾಡಬೇಕೆಂದು ಮಾರಾಟಗಾರರಿಗೆ ಆದೇಶ ಮಾಡಿರುವುದರಿಂದ ಮಾರಾಟಗಾರರು ರಶೀದಿ ಇಲ್ಲದೆ ಜನವರಿ, ಫೆಬ್ರವರಿಯಲ್ಲಿ ರೈತರಿಗೆ ಬೀಜ ಮಾರಾಟ ಮಾಡಿದ್ದು ಬೀಜದ ಕಂಪನಿ ವಿರುದ್ಧ ಪ್ರಕರಣ ದಾಖಲಿಸಲು ಸಹ ರೈತರಿಗೆ ದಾಖಲೆ ಇಲ್ಲದೆ ತೊಂದರೆಯಾಗಿದ್ದು ಈ ರೈತರಿಗೆ ಸೂಕ್ತ ಪರಿಹಾರ ನೀಡಲು ಸರ್ಕಾರ ಮುಂದಾಗುವುದೇ? (ತಾಲ್ಲೂಕುವಾರು ವಿವರ ನೀಡುವುದು)

## ರೈತರ ಆತ್ಮಹತ್ಯೆ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೨೬ (೪೨೪೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ರಿಂದ ೨೦೧೬–೧೭ನೇ ಸಾಲಿನವರೆಗೆ ಕರ್ನಾಟಕ ರಾಜ್ಯದಲ್ಲಿ ರೈತರ ಆತ್ಮಹತ್ಯೆ ಎಷ್ಟು; ಜಿಲ್ಲಾವಾರು ಮಾಹಿತಿ ನೀಡುವುದು; (ಹಾವೇರಿ, ಜಿಲ್ಲೆಯ ತಾಲ್ಲೂಕುವಾರು ರೈತರ ಆತ್ಮಹತ್ಯೆಯ ಹೆಸರು, ಊರು ವಿವರ ನೀಡುವುದು)

(ಆ) ಆತ್ಮಹತ್ಯೆಯಾದ ರೈತರಲ್ಲಿ ಸಹಕಾರಿ ಸಾಲ ಹಾಗೂ ಸರ್ಕಾರದಿಂದ ಸಾಲ ಪಡೆದ ರೈತರೆಷ್ಟು; ಖಾಸಗಿಯವರಿಂದ ಸಾಲ ಪಡೆದವರೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹಾವೇರಿ ಜಿಲ್ಲೆಯ ೭ ತಾಲ್ಲೂಕಿನಲ್ಲಿಯ ಎರಡು ಬಗೆಯ ರೈತರು ಯಾರು? (ಹೆಸರು, ಊರು ಸಹಿತ ಮಾಹಿತಿ ನೀಡುವುದು)

## ಕೃಷಿ ಭೂಮಿ ಬೀಳು ಬಿಡುತ್ತಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೨೭ (೪೩೯೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಭೂಮಿ ಬೀಳು ಬಿಡುತ್ತಿರುವುದರಿಂದ. ಭೂಚಿದ್ರೀಕರಣದ ಪರಿಣಾಮ ಸಣ್ಣ ಹಾಗೂ ಅತಿ ಸಣ್ಣ ರೈತರ ಸಂಖ್ಯೆ ಹೆಚ್ಚಾಗಿ, ರೈತರೇ ಕೂಲಿಕಾರ್ಮಿಕರಾಗಿ ಪರಿವರ್ತನೆಯಾಗುತ್ತಿರುವ ಆತಂಕದ ಸ್ಥಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕೃಷಿ ಲಾಭದಾಯಕವಲ್ಲ, ನಿರ್ವಹಣೆ ಕಷ್ಟ ಮುಂತಾದ ಆನೇಕ ಕಾರಣಗಳಿಂದ ರೈತರು ತಮ್ಮ ಭೂಮಿ ಪಾಳು ಬಿಡುತ್ತಿರುವುದನ್ನು ತಪ್ಪಿಸಲು ಅವರಿಗೆ ಪ್ರೋತ್ಸಾಹ, ಉತ್ತೇಜನ ನೀಡುವಲ್ಲಿ ಸರ್ಕಾರದ ಮುಂದಿರುವ ಕಾರ್ಯಕ್ರಮಗಳೇನು;

(ಇ) ರಾಜ್ಯದಲ್ಲಿ ಪಾಳು ಭೂಮಿ ಪ್ರಮಾಣ ೨೧ ಲಕ್ಷ ಹೆಕ್ಟೇರಿನಷ್ಟಿದ್ದು, ಇದರಿಂದ ವಾರ್ಷಿಕ ಸುಮಾರು ೮೦೦೮ ಕೋಟಿ ನಷ್ಟ ಸಂಭವಿಸುತ್ತಿದ್ದು, ಈ ಪಾಳುಭೂಮಿಯಿಂದ ಸದ್ಬಳಕೆಗೆ ಸರ್ಕಾರದ ಮುಂದಿರುವ ಯೋಜನೆಗಳೇನು;

(ಈ) ಹಾವೇರಿ ಜಿಲ್ಲೆಯ ಪಾಳುಬಿದ್ದ ಭೂಮಿ ವಿಸ್ತೀರ್ಣವೆಷ್ಟು? (ತಾಲ್ಲೂಕುವಾರು ವಿವರ ಒದಗಿಸುವುದು)

## ಸಾಲ ಮನ್ನಾ ಯೋಜನೆ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೨೮ (೪೩೮೨) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೪ ವರ್ಷಗಳಲ್ಲಿ ಎಷ್ಟು ಜನ ನೇಕಾರರಿಗೆ ಸರ್ಕಾರದ ಯಾವ ಯಾವ ಯೋಜನೆಯಡಿಯಲ್ಲಿ ಯಾವ ಯಾವ ಬ್ಯಾಂಕಿನಿಂದ ಅಂದರೆ ಸಹಕಾರಿ ಮತ್ತು ರಾಷ್ಟ್ರೀಕೃತ ಹಾಗೂ ಇನ್ನಿತರೆ ಬ್ಯಾಂಕಿನಿಂದ ಸಾಲ ಮಂಜೂರು ಮಾಡಲಾಗಿದೆ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಸರ್ಕಾರ ಈಗಾಗಲೇ ಎಷ್ಟು ಕೋಟಿ ಸಾಲ ಮನ್ನಾ ಮಾಡಿದೆ; ಇದರಿಂದ ಎಷ್ಟು ಜನರಿಗೆ ಸರ್ಕಾರದ ಸಾಲ ಮನ್ನಾ ಆಗಿದೆ; (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

(ಇ) ಸರ್ಕಾರ ಎಷ್ಟು ಕೋಟಿ ಸಾಲ ಮನ್ನಾ ಮಾಡಲು ನಿರ್ಧರಿಸಿದೆ; ಇದರಿಂದ ಎಷ್ಟು ಜನರಿಗೆ ಹಾಗೂ ಸೊಸೈಟಿಗೆ ಲಾಭವಾಗಲಿದೆ? (ತಾಲ್ಲೂಕುವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

## ಸೋಲಾರ್ ವಿದ್ಯುತ್ ಯೋಜನೆ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೨೯ (೪೩೮೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸೋಲಾರ್‌ನಿಂದ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆ ಯಾವಾಗಿನಿಂದ ಜಾರಿಗೆ ಬಂದಿದೆ;

(ಆ) ಸದರಿ ಯೋಜನೆಯಡಿ ಎಷ್ಟು ಜನ ರೈತರಿಗೆ ಕೃಷಿ ಜಮೀನಿನಲ್ಲಿ ಸೋಲಾರ್‌ನಿಂದ ವಿದ್ಯುತ್ (೧.೫.ಮೆಗ ವ್ಯಾಟ್‌ನಿಂದ ೧ ಮೆಗವ್ಯಾಟ್ ಅಥವಾ ಹೆಚ್ಚಿಗೆ) ಉತ್ಪಾದನೆ ಮಾಡಲು ಪಿ.ಪಿ.ಎ. ನೀಡಲಾಗಿದೆ; (ಹಾವೇರಿ ಜಿಲ್ಲೆಯ ಸಂಪೂರ್ಣ ವಿವರ ನೀಡುವುದು)

(ಇ) ಪಿ.ಪಿ.ಎ. ನೀಡಿದ ದಿನಾಂಕದಿಂದ ಇಲ್ಲಿಯವರೆಗೆ ಎಷ್ಟು ಜನ ರೈತರು ಈ ಪಿ.ಪಿ.ಎ. ಯನ್ನು ಕಾರ್ಯಗತಗೊಳಿಸಿದ್ದಾರೆ; ಉಳಿದ ಕಾಮಗಾರಿಗಳು ಯಾವ ಹಂತದಲ್ಲಿವೆ; (ಹಾವೇರಿ ಜಿಲ್ಲೆಯ ರೈತರ ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಈ) ಟ್ರೈಪಾರ್ಟಿ ಕರಾರು ಅಂದರೇನು; ಪಿ.ಪಿ.ಎ ಪಡೆದ ರೈತರು ಟ್ರೈಪಾರ್ಟಿ ಕರಾರು ಮಾಡಿಕೊಳ್ಳಬಹುದೆ; (ಹಾವೇರಿ ಜಿಲ್ಲೆಯವಾರು ವಿವರ ನೀಡುವುದು)

(ಉ) ಕೃಷಿ ಜಮೀನಿನಲ್ಲಿ ಸೋಲಾರ್ ಉತ್ಪಾದನೆ ಮಾಡುವ ರೈತರಿಗೆ ಸರ್ಕಾರವು ನೀಡುತ್ತಿರುವ ರಿಯಾಯತಿ ಹಾಗೂ ವಿಶೇಷ ಸೌಲಭ್ಯಗಳೇನು:

(ಊ) ಈ ಯೋಜನೆ ನಿಧಾನಗತಿಯಲ್ಲಿ ಸಾಗಲು ಕಾರಣಗಳೇನು?

## ಟೋಲ್ ಶುಲ್ಕ ಸಂಗ್ರಹದ ಕುರಿತು

**ಶ್ರೀ ವಿ.ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೯೩೦ (೪೨೯೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಟೋಲ್ ಶುಲ್ಕ ಸಂಗ್ರಹಕ್ಕೆ ಅನುಸರಿಸುವ ಮಾನದಂಡಗಳೇನು; ಯಾವ ಯಾವ ಟೋಲ್ ನಲ್ಲಿ ಯಾವ ಯಾವ ವಿಧದ ವಾಹನಗಳಿಗೆ ಯಾವ ದರ ನಿಗಧಿಪಡಿಸಲಾಗಿದೆ;

(ಆ) ಈ ದರ ನೀತಿಯು ಪ್ರತಿ ಟೋಲ್‌ಗೂ ಪ್ರತ್ಯೇಕವಿರುತ್ತದೆಯೇ; ಇದಕ್ಕೆ ಕಾರಣಗಳೇನು; ಇದನ್ನು ಪರಿಷ್ಕರಿಸುವ ಅಧಿಕಾರ ಯಾರಿಗಿದೆ;

(ಇ) ಟೋಲ್ ಶುಲ್ಕ ಹೆಚ್ಚಳ ಹಿಂತೆಗೆದುಕೊಳ್ಳುವಂತೆ ಸರ್ಕಾರ ಸೂಚಿಸಿದ್ದು ನಿಜವೇ; ಇದಕ್ಕೆ ಸದರಿ ಸಂಸ್ಥೆಗಳಿಂದ ಬಂದ ಉತ್ತರಗಳೇನು;

(ಈ) ಇದಕ್ಕೆ ಕಡಿವಾಣ ಹಾಕಲು ಸರ್ಕಾರದ ಕ್ರಮಗಳೇನು; ಅಲ್ಲದೇ ಟೋಲ್‌ಗಳಲ್ಲಿ ೫–೧೦ ನಿಮಿಷಗಳು ಕಾಯುವ ಸ್ಥಿತಿ ಇದೆ. ಈ ಸಂದರ್ಭದಲ್ಲಿ ಟೋಲ್ ದರವನ್ನು ವಾಹನ ಸವಾರರು ನೀಡಬೇಕಾಗಿದೆ; ಇದಕ್ಕೆ ಇರುವ ನಿಯಮಗಳೇನು; ದರ ಪರಿಷ್ಕರಣೆಗೆ ಸರ್ಕಾರ ಅನುಸರಿಸುವ ಕ್ರಮಗಳೇನು? (ವಿವರ ನೀಡುವುದು)

## ಹಿಂದೂ ಭಕ್ತಾದಿಗಳ ತೀರ್ಥಯಾತ್ರೆಗೆ ಧನಸಹಾಯ ನೀಡುವ ಬಗ್ಗೆ

**ಶ್ರೀ ವಿ.ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೩೧ (೪೨೯೧) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದೂ ದೇವಾಲಯಗಳ ದರ್ಶನಕ್ಕೆ ತೆರಳುವ ಯಾತ್ರಾರ್ಥಿ ಭಕ್ತರಿಗೆ ಯಾವ ರೀತಿಯ ಧನಸಹಾಯಗಳನ್ನು ಸರ್ಕಾರ ರೂಪಿಸಿದೆ;

(ಆ) ಯಾವ ಯಾವ ದೇವಾಲಯ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ; ಇದಕ್ಕೆ ಅನುಸರಿಸುವ ಮಾನದಂಡಗಳೇನು; ಎಷ್ಟು ಮೊತ್ತದ ಧನಸಹಾಯವನ್ನು ಹಿಂದೂ ಭಕ್ತ ಪ್ರವಾಸಿಗರಿಗೆ ನೀಡಲಾಗುತ್ತದೆ;

(ಇ) ಕಳೆದ ಮೂರು ವರ್ಷಗಳಲ್ಲಿ ಈ ರೀತಿಯ ಸಹಾಯಧನ ವಿತರಣೆ ಎಷ್ಟು; (ಜಿಲ್ಲಾವಾರು ನೀಡಿದ ಹಣದ ವಿವರಗಳನ್ನು ಒದಗಿಸುವುದು)

(ಈ) ಇದನ್ನು ಕೇವಲ ಮಾನಸಸರೋವರ ಹಾಗೂ ಚಾರ್‌ಧಾಮ್ ಯಾತ್ರೆಗಳಿಗೆ ಮಾತ್ರವೇ ಸೀಮಿತ ಮಾಡದೇ ಅಮರನಾಥ್ , ವೈಷ್ಣೋದೇವಿ, ಹರಿದ್ವಾರ, ಹೃಷಿಕೇಶಕ್ಕೂ ಅನ್ವಯಗೊಳಿಸಲು ಇರುವ ತೊಂದರೆಗಳೇನು;

(ಉ) ಹಾಗಿದ್ದಲ್ಲಿ, ಇದನ್ನು ಯಾವಾಗಿನಿಂದ ಅನುಷ್ಠಾನಗೊಳಿಸಲಾಗುತ್ತದೆ; ಮೇಲಿನ ಎಲ್ಲಾ ಸಹಾಯಧನಕ್ಕೆ ಖರ್ಚಾಗುವ ವಾರ್ಷಿಕ ಅನುದಾನದ ಮೊತ್ತವೆಷ್ಟು; ಖರ್ಚಾದ ಮೊತ್ತವೆಷ್ಟು ಉಳಿದ ಮೊತ್ತದ ಬಗ್ಗೆ ಸರ್ಕಾರದ ಕ್ರಮವೇನು?

## ಯಶಸ್ವಿನಿ ಯೋಜನೆ

**ಶ್ರೀ ವಿ.ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೩೨ (೪೨೮೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಶಸ್ವಿನಿ ಯೋಜನೆ ಯಾವಾಗಿನಿಂದ ಜಾರಿಗೆ ಬಂದಿದೆ; ಈ ಯೋಜನೆಯಿಂದ ಪ್ರತಿ ವರ್ಷ ಅನುಕೂಲ ಪಡೆಯುತ್ತಿರುವ ರೋಗಿಗಳ ಸಂಖ್ಯೆ ಎಷ್ಟು;

(ಆ) ಈ ಯೋಜನೆ ಅಡಿಯಲ್ಲಿ ಮರುಪಾವತಿ ಹಣ ಬರುತ್ತಿಲ್ಲವೆಂದು ಬಡ ರೋಗಿಗಳನ್ನು ಸತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು;

(ಇ) ಕಳೆದ ೩ ವರ್ಷದಿಂದೀಚೆಗೆ ಈ ಯೋಜನೆಗೆ ಸರ್ಕಾರದಿಂದ ಭರಿಸಲಾದ ಮೊಬಲಗೆಷ್ಟು; ಫಲಾನುಭವಿಗಳ ಸಂಖ್ಯೆ ಎಷ್ಟು ಹಾಗೂ ಈ ಯೋಜನೆಯ ಅನುಕೂಲ ಪಡೆಯಲು ಇರುವ ನಿಬಂದನೆಗಳೇನು;

(ಈ) ಈ ಯೋಜನೆಯನ್ನು ರಾಜ್ಯದ ಎಷ್ಟು ಆಸ್ಪತ್ರೆಗಳಲ್ಲಿ ಅಳವಡಿಸಿಕೊಳ್ಳಲಾಗಿದೆ; ಆ ಪೈಕಿ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಕಳೆದ ೩ ವರ್ಷದಿಂದೀಚೆಗೆ ಪಾವತಿಸಿದ ಬಿಲ್‌ನ ಜಿಲ್ಲಾವಾರು ಆಸ್ಪತ್ರೆಗಳ ಹೆಸರುಗಳೊಂದಿಗೆ ಮಾಹಿತಿ ಹಾಗೂ ವಿವರ ನೀಡುವುದು?

## ಜಲ ವಿದ್ಯುತ್ ಸ್ಥಾವರಗಳ ಸಾಮರ್ಥ್ಯ ಹಾಗೂ ಉತ್ಪಾದನೆ ಕುರಿತು

**ಶ್ರೀ ವಿ.ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೩೩ (೪೨೬೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ವ್ಯಾಪ್ತಿ ಉತ್ತಮ ಮಳೆಯಾಗುತ್ತಿರುವುದರಿಂದ ಜಲ ವಿದ್ಯುತ್ ಸ್ಥಾವರಗಳು ತನ್ನ ಸಾಮರ್ಥ್ಯ ಮತ್ತು ಉತ್ಪಾದನೆಯನ್ನು ಹೆಚ್ಚಿಸಿಕೊಳ್ಳುವ ವಿಶ್ವಾಸ ಸರ್ಕಾರಕ್ಕಿದೆಯೇ;

(ಆ) ಹಾಗಿದ್ದಲ್ಲಿ, ಪ್ರಸ್ತುತ ಯಾವ ಜಲ ವಿದ್ಯುತ್ ಸ್ಥಾವರಗಳಲ್ಲಿ ಎಷ್ಟು ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿತ್ತು; ಹಾಲಿ ಯಾವ ಪ್ರಮಾಣದಲ್ಲಿ ವಿದ್ಯುತ್ ಉತ್ಪಾದನೆಗೆ ಮುಂದಾಗಿವೆ; ಈ ಬಗ್ಗೆ ಸರ್ಕಾರದ ಕ್ರಮಗಳೇನು; (ವಿವರ ನೀಡುವುದು)

(ಇ) ನೀರಿನ ಕೊರತೆಯಿಂದ ವಿದ್ಯುತ್ ಉತ್ಪಾದನೆ ಸ್ಥಗಿತಗೊಳಿಸಿದ್ದ ಸ್ಥಾವರಗಳು ಯಾವುವು; ಸದರಿ ಸ್ಥಾವರಗಳ ಪುನರುಜ್ಜೀವನಕ್ಕಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಸದರಿ ಘಟಕಗಳ ವಿದ್ಯುತ್ ಉತ್ಪಾದನೆಗೆ ಬೇಕಾದ ನೀರಿನ ಮಟ್ಟದ ಪ್ರಮಾಣವೆಷ್ಟು; ಈಗಿನ ಮಳೆಯಿಂದ ಭರ್ತಿಯಾಗಿರುವ ಜಲಾಶಯಗಳ ನೀರಿನಿಂದ ಯಾವ ಅವಧಿವರೆಗೆ ವಿದ್ಯುತ್ ಉತ್ಪಾದನೆ ಮಾಡಬಹುದಾಗಿದೆ?

## ಗದಗ–ಬೆಟಗೇರಿ ಅವಳಿ ನಗರದಲ್ಲಿ ಜವಳಿ ಪಾರ್ಕ್ ಸ್ಥಾಪಿಸುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೩೯೩೪ (೪೫೨೬) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಜವಳಿ ಪಾರ್ಕ್‌ಗಳನ್ನು ಯಾವ–ಯಾವ ಸ್ಥಳದಲ್ಲಿ ನಿರ್ಮಿಸಲಾಗಿದೆ;

(ಆ) ವಿವಿಧ ಸ್ಥಳಗಳಲ್ಲಿರುವ ಜವಳಿ ಪಾರ್ಕ್ ನಿರ್ಮಾಣಕ್ಕಾಗಿ ಖರ್ಚು ಮಾಡಿದ ಹಣ ಎಷ್ಟು; (ವಿವರ ನೀಡುವುದು)

(ಇ) ಗದಗ–ಬೆಟಗೇರಿ ಅವಳಿ ನಗರದಲ್ಲಿ ಜವಳಿ ಪಾರ್ಕ್ ನಿರ್ಮಿಸುವ ಕುರಿತು ಸರಕಾರ ಚಿಂತನೆ ಮಾಡಿದೆಯೇ; ಹಾಗಿದ್ದಲ್ಲಿ, ಆ ಯೋಜನೆ ಸ್ವರೂಪದ ವಿವರಣೆ ನೀಡುವುದು?

## ಹಾಲಿನ ಡೈರಿಗಳ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) –**

೩೯೩೫ (೪೨೩೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೊಡ್ಡಬಳ್ಳಾಪುರ ಹಾಗೂ ಯಲಹಂಕ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಗೆ ಬರುವ ಪ್ರತಿ ಗ್ರಾಮಪಂಚಾಯಿತಿಗಳ ಹಾಲಿನ ಡೈರಿಗಳ ಸಂಖ್ಯೆ ಎಷ್ಟು; (ಡೈರಿ ಅಧ್ಯಕ್ಷರು/ನಿರ್ದೇಶಕರುಗಳ ಸಂಪೂರ್ಣ ಹೆಸರು ಮತ್ತು ವಿಳಾಸಗಳನ್ನು ನೀಡುವುದು)

(ಆ) ರೈತರಿಗೆ ಗೌರವಧನವನ್ನು ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ ಇದುವರೆವಿಗೂ ನೀಡಿರುವ ಮೊತ್ತವೆಷ್ಟು; ಸದರಿ ಹಾಲಿನ ಡೈರಿಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಯಾವಾಗ ಹುದ್ದೆಗಳನ್ನು ಭರ್ತಿ ಮಾಡಲಾಗುವುದು; ವಿವರ ನೀಡುವುದು?

## ಸಹಕಾರ ಸಂಘಗಳ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) –**

೩೯೩೬ (೪೨೩೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೊಡ್ಡಬಳ್ಳಾಪುರ ಹಾಗೂ ಯಲಹಂಕ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಗೆ ಬರುವ ಗ್ರಾಮ/ಹೋಬಳಿಗಳಲ್ಲಿ ಸರ್ಕಾರದ ವತಿಯಿಂದ ನೋಂದಾಯಿಸಲ್ಪಟ್ಟ ಸಂಘ ಸಂಸ್ಥೆಗಳ ಸಂಖ್ಯೆ ಎಷ್ಟು; ಸದರಿ ಸಂಘ ಸಂಸ್ಥೆಗಳು ಯಾವ ಯಾವ ಹೆಸರಿನಡಿ ನೋಂದಾಯಿಸಲ್ಪಟ್ಟಿರುತ್ತವೆ; ಹಾಗಿದ್ದಲ್ಲಿ, ಸಂಘ ಸಂಸ್ಥೆಗಳ ಹೆಸರು, ವಿಳಾಸ ಪದಾಧಿಕಾರಿಗಳ ಸಂಪೂರ್ಣ ವಿವರ ನೀಡುವುದು;

(ಆ) ಮೇಲ್ಕಂಡ ವಿಧಾನಸಭಾ ಕ್ಷೇತ್ರದ ಗ್ರಾಮ/ಹೋಬಳಿಗಳಲ್ಲಿ ನೋಂದಾಯಿಸಲ್ಪಟ್ಟ ರೈತರ ಸೇವಾ ಸಹಕಾರ ಸಂಘಗಳ ಸಂಖ್ಯೆ ಎಷ್ಟು; (ಸಂಘಗಳ ಅಧ್ಯಕ್ಷರು/ಉಪಾಧ್ಯಕ್ಷರು/ನಿರ್ದೇಶಕರುಗಳ ಸಂಪೂರ್ಣ ಹೆಸರು ಮತ್ತು ವಿಳಾಸ ನೀಡುವುದು)

(ಇ) ಈ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಪ್ರತಿ ಗ್ರಾಮಪಂಚಾಯಿತಿಗಳ ಹಾಲಿನ ಡೈರಿಗಳ ಸಂಖ್ಯೆ ಎಷ್ಟು? (ಡೈರಿ ಅಧ್ಯಕ್ಷರು/ನಿರ್ದೇಶಕರುಗಳ ಸಂಪೂರ್ಣ ಹೆಸರು ಮತ್ತು ವಿಳಾಸಗಳನ್ನು ನೀಡುವುದು)

## ಕೃಷಿ ಭಾಗ್ಯ ಯೋಜನೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೩೭ (೪೫೧೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ಭಾಗ್ಯ ಯೋಜನೆ ಜಾರಿಗೊಂಡ ವರ್ಷ ಯಾವುದು; ಸದರಿ ಯೋಜನೆಯ ಉಪಯೋಗ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಕೃಷಿ ಭಾಗ್ಯ ಯೋಜನೆಯಲ್ಲಿ ಮಣ್ಣಿನ ತೇವಾಂಶ ರಕ್ಷಣೆ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು;

(ಇ) ಕೃಷಿ ಭಾಗ್ಯ ಯೋಜನೆಯ ಪ್ಯಾಕೇಜ್ ಘಟಕಗಳು ಎಂದರೆ ಏನು; ಅವು ಯಾವುವು; (ವಿವರವಾದ ಮಾಹಿತಿ ನೀಡುವುದು)

(ಈ) ಪ್ಯಾಕೇಜ್ ಘಟಕಗಳಿಗೆ ಸಾಮಾನ್ಯ ವರ್ಗ ಮತ್ತು ಪರಿಶಿಷ್ಟ ಜಾತಿ/ ಪಂಗಡ ರೈತರಿಗೆ ನೀಡಲಾಗಿರುವ ಸಹಾಯ ಧನದ ವೆಚ್ಚವೆಷ್ಟು? (ಫಲಾನುಭವಿ ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

## ಕೃಷಿ ಮಾರುಕಟ್ಟೆಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೩೮ (೪೫೨೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಕೃಷಿ ಮಾರುಕಟ್ಟೆಗಳಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಯಾವ ಯಾವ ಸರಕುಗಳು ಕೃಷಿ ಮಾರುಕಟ್ಟೆ ವ್ಯಾಪ್ತಿಗೆ ಒಳಪಡುತ್ತವೆ;

(ಇ) ರೈತರಿಂದ ಯಾವ ಯಾವ ಸರಕುಗಳಿಗೆ ಎಷ್ಟು ಶೇಕಡವಾರು ಶುಲ್ಕ ನಿಗದಿಪಡಿಸಲಾಗಿದೆ; ಶುಲ್ಕ ವಿಧಿಸಿರುವ ಹಾಗೂ ಶುಲ್ಕ ಪಡೆಯಬಾರದ ಮಾಹಿತಿಯನ್ನು ವಿವರವಾಗಿ ತಿಳಿಸುವುದು;

(ಈ) ರೈತ ಮಂಡಿ ಅಂದರೇನು; ಇದಕ್ಕೆ ಸರ್ಕಾರದಿಂದ ಸಿಗಬಹುದಾದ ಸವಲತ್ತುಗಳೇನು; ಇದನ್ನು ಸ್ಥಾಪನೆ ಮಾಡಬಹುದೆ; (ಈ ಯೋಜನೆಯ ಸಂಪೂರ್ಣ ವಿವರ ನೀಡುವುದು)

(ಉ) ಕೃಷಿ ಮಾರುಕಟ್ಟೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರವಾಗಿ ತಿಳಿಸುವುದು)

(ಊ) ಇಲಾಖೆಯು ತನ್ನ ಅಧೀನ ಸಂಸ್ಥೆಗಳಿಗೆ ಐ.ಇ.ಸಿ. ಕಾರ್ಯಕ್ರಮದಡಿ ಕಳೆದ ೩ ವರ್ಷಗಳಿಂದ ವೆಚ್ಚ ಮಾಡಿರುವ ಹಣವೆಷ್ಟು? (ವಿವರವಾಗಿ ಕಾರ್ಯಕ್ರಮವಾರು, ವರ್ಷವಾರು ಮಾಹಿತಿ ಕೊಡುವುದು)

## ಸಹಕಾರ ಸಂಘಗಳಲ್ಲಿನ ಅಕ್ರಮದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೩ (೪೫೨೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಿವೇಶನ ನೀಡುವ ಸಂಬಂಧ ನೋಂದಣಿಯಾಗಿರುವ ಸಹಕಾರ ಸಂಘಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸಂಘಗಳು ತನ್ನ ಸದಸ್ಯರಿಗೆ ನಿವೇಶನವನ್ನು ನೀಡುವ ಸಂಬಂಧ ಎಷ್ಟು ಜಮೀನನ್ನು ಸರ್ಕಾರದಿಂದ ಪಡೆದುಕೊಂಡಿದೆ; (ಜಿಲ್ಲಾವಾರು, ವರ್ಷಾವಾರು, ಮಾಹಿತಿ ಕೊಡುವುದು)

(ಇ) ಸದರಿ ಸಂಘಗಳಲ್ಲಿ ಅಕ್ರಮ ಮತ್ತು ವೈಪರಿತ್ಯಗಳು ನಡೆದಿರುವುದು ಎಷ್ಟು; (ಸಂಘವಾರು ಮಾಹಿತಿ ನೀಡುವುದು)

(ಈ) ಸರ್ಕಾರ ಸದಸ್ಯರಿಗೆ ನಿವೇಶನ ಕೊಡಿಸುವ ಸಂಬಂಧ ಕೈಗೊಂಡ ಕ್ರಮಗಳೇನು?

## ತೆಂಗು ಬೆಳೆ ಉತ್ತೇಜನ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೩೯೪೦ (೪೨೪೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೆಂಗು ಬೆಳೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ತೆಂಗು ಬೆಳೆ ಅಭಿವೃದ್ಧಿಗೆ ಸರ್ಕಾರ ನೀಡುತ್ತಿರುವ ಯೋಜನೆ ಮತ್ತು ಸೌಲಭ್ಯಗಳು ಏನು; (ವಿವರ ನೀಡುವುದು)

(ಆ) ತೆಂಗಿನ ಉಪಉತ್ಪನ್ನಗಳ ಅಭಿವೃದ್ಧಿಗೆ ಇಲಾಖೆಯಿಂದ ಸಹಾಯಧನ ನೀಡಲಾಗುತ್ತಿದೆಯೇ; (ವಿವರ ನೀಡುವುದು)

(ಇ) ಸಮಗ್ರ ತೋಟಗಾರಿಕಾ ಬೆಳೆಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಈ ನಿಟ್ಟಿನಲ್ಲಿ ತೋಟಗಾರಿಕಾ ಬೆಳೆಗಳ ವಿಶ್ವವಿದ್ಯಾನಿಲಯಗಳನ್ನು ಮಹಾನಗರ ವ್ಯಾಪ್ತಿಗಳಲ್ಲಿ ಸ್ಥಾಪಿಸಲು ಸರ್ಕಾರ ಆಲೋಚಿಸಿದೆಯೇ; ತೋಟಗಾರಿಕಾ ಉತ್ಪನ್ನಗಳ ಆಭಿವೃದ್ಧಿಗೆ ಉತ್ತೇಜನ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?

## ಪಶು ಆಸ್ಪತ್ರೆ ಮತ್ತು ಸಿಬ್ಬಂದಿಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೩೯೪೧ (೪೨೪೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಪಶು ಆಸ್ಪತ್ರೆಗಳಿವೆ; ಆ ಪೈಕಿ ಸ್ವಂತ ಕಟ್ಟಡಗಳಲ್ಲಿರುವ ಮತ್ತು ಬಾಡಿಗೆ ಕಟ್ಟಡಗಳಲ್ಲಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು;

(ಆ) ಸ್ವಂತ ಕಟ್ಟಡಗಳು ಇಲ್ಲದಿರುವ ಆಸ್ಪತ್ರೆಗಳಿಗೆ ಸ್ವಂತ ಕಟ್ಟಡ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಒಟ್ಟು ಮಂಜೂರಾದ ಪಶುವೈದ್ಯರ ಹುದ್ದೆಗಳೆಷ್ಟು;

(ಈ) ಇದರಲ್ಲಿ ಭರ್ತಿಯಾಗಿರುವ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು;

(ಉ) ಈ ಖಾಲಿ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಸೋಲಾರ ವಿದ್ಯುತ್ ಅಳವಡಿಕೆ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೯೪೨ (೪೨೯೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಪಾಲಿಕೆ, ಪುರಸಭೆ ವ್ಯಾಪ್ತಿಯ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಸೋಲಾರ್ ಅಳವಡಿಕೆಯ ಷರತ್ತನ್ನು ವಿಧಿಸಲಾಗಿತ್ತೇ; ಜೊತೆಗೆ ವಿಧಿಸಿರುವ ಷರತ್ತುಗಳು ಏನೇನು;

(ಆ) ಈ ನಿಟ್ಟಿನಲ್ಲಿ ವಿವಿಧ ಕೋರ್ಟ್‌ಗಳಲ್ಲಿ ಬಂದಿರುವ ತೀರ್ಮಾನಗಳೇನು; ಪ್ರಸಕ್ತ ಸೋಲಾರ್ ಬಳಕೆ ಹೆಚ್ಚಿಸಲು ಸರ್ಕಾರ ತೆಗೆದುಕೊಳ್ಳುತ್ತಿರುವ ಕ್ರಮಗಳೇನು? (ವಿವರ ನೀಡುವುದು)

## ಸೇತುವೆ ನಿರ್ಮಾಣ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೯೪೩ (೪೨೯೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ ಕುಪ್ಪಗಡ್ಡ ಹೋಬಳಿ ಲೋಕೋಪಯೋಗಿ ಇಲಾಖೆಯ ರಸ್ತೆ ಮಾರ್ಗವಾಗಿ ದಂಡವತಿ ನದಿಯ ಸೇತುವೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಹೊಸದಾಗಿ ಸೇತುವೆ ನಿರ್ಮಾಣ ಮಾಡುವುದು ಯಾವಾಗ;

(ಆ) ೨೦೧೦–೧೧ನೇ ಸಾಲಿನಲ್ಲಿ ಈ ಸೇತುವೆಯಿಂದ ವಾಹನ ಕೆಳಹಂತಕ್ಕೆ ಬಿದ್ದು ನಾಲ್ಕು ಜನರು ಸಾವಿಗೀಡಾಗಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಹಿಂದೆ ಲೋಕೋಪಯೋಗಿ ಇಲಾಖೆಯಿಂದ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತೇ ಅಥವಾ ಸರ್ಕಾರದಿಂದ ಅನುದಾನ ಮಂಜೂರು ಮಾಡಲಾಗಿದೆಯೇ; ಈ ಕಾಮಗಾರಿಯನ್ನು ಕೈಗೆತ್ತಿಗೊಳ್ಳಲಾಗುವುದು ಯಾವಾಗ?

## ಪಂಚಾಯತಿ ವ್ಯವಸ್ಥೆಯಲ್ಲಿ ಭಾಗ್ಯಜ್ಯೋತಿ ವಿದ್ಯುತ್ ಸೌಲಭ್ಯ ಕುರಿತು

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೪೪ (೪೨೭೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಂಚಾಯತ್ ವ್ಯವಸ್ಥೆಯಲ್ಲಿ ಈ ಮೊದಲು ಜಾರಿಯಲ್ಲಿದ್ದ ಭಾಗ್ಯಜ್ಯೋತಿ ವಿದ್ಯುತ್ ಸಂಪರ್ಕ ಸೌಲಭ್ಯವು ಈಗಲೂ ಜಾರಿಯಲ್ಲಿದೆಯೇ;

(ಆ) ಹಾಗಾದರೇ ಕಳೆದ ೭ ವರ್ಷಗಳಿಂದ ಭಾಗ್ಯಜ್ಯೋತಿ ಸೌಲಭ್ಯದ ಅಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡದಿರಲು ಕಾರಣವೇನು;

(ಇ) ಈ ಯೋಜನೆಯನ್ನು ಮೊಟಕುಗೊಳಿಸಲು ಕಾರಣವೇನು?

# ಮುಜರಾಯಿ ದೇವಸ್ಥಾನಗಳ ಆದಾಯ ಮತ್ತು ಖರ್ಚು–ವೆಚ್ಚ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

**ಮತ್ತು**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೪೫ (೪೪೦೮+೪೩೮೯) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬,೨೦೧೬–೧೭,೨೦೧೭–೧೮ನೇ ಸಾಲುಗಳಲ್ಲಿ ಮುಜರಾಯಿ ದೇವಸ್ಥಾನಗಳಿಂದ ದಕ್ಷಿಣೆ, ಹುಂಡಿ ರೂಪದಲ್ಲಿ ಗಳಿಸುತ್ತಿರುವ ಆದಾಯವೆಷ್ಟು; (ದೇವಸ್ಥಾನವಾರು ವಿವರ ನೀಡುವುದು)

(ಆ) ಮುಜರಾಯಿ ದೇವಸ್ಥಾನಗಳಲ್ಲಿ ಎಷ್ಟು ಮಂದಿ ಅರ್ಚಕರು ಮತ್ತು ಇತರೆ ಸಿಬ್ಬಂದಿ ವರ್ಗದವರು ಸೇವೆ ಸಲ್ಲಿಸುತ್ತಿದ್ದಾರೆ; ಅವರುಗಳು ಯಾವ ಯಾವ ವರ್ಗಕ್ಕೆ ಸೇರಿದವರಾಗಿದ್ದಾರೆ; ಅವರಿಗೆ ನೀಡುತ್ತಿರುವ ವೇತನ ಅಥವಾ ಗೌರವಧನ ಮತ್ತು ಇತರೆ ಭತ್ಯೆಗಳು ಎಷ್ಟೆಷ್ಟು; (ದೇವಸ್ಥಾನವಾರು ವಿವರ ನೀಡುವುದು)

(ಇ) ರಾಜ್ಯದ ವಿವಿಧ ದೇವಸ್ಥಾನಗಳಿಗೆ ತಸ್ತೀಕು ಮಂಜೂರಾತಿಗೆ ಸಹಾಯಕ ಕಮೀಷನರ್‌ರವರು ಆದೇಶ ಮಾಡುತ್ತಿದ್ದು, ಈ ಸಂಬಂಧ ದೇವಸ್ಥಾನಗಳಿಗೆ ಹಣ ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೀಗೆ ತಸ್ತೀಕು ಮಂಜೂರಾತಿಗೆ ಬಾಕಿಯಿರುವ ಪ್ರಕರಣಗಳೆಷ್ಟು;

(ಈ) ಮುಜರಾಯಿ ಮತ್ತು ಮುಜರಾಯಿಯೇತರ ದೇವಸ್ಥಾನಗಳ ಭಕ್ತಾದಿಗಳಿಗೆ ಸರ್ಕಾರ ಒದಗಿಸಿರುವ ಸೌಲಭ್ಯಗಳಾವುವು? (ದೇವಸ್ಥಾನವಾರು ವಿವರ ನೀಡುವುದು)

## ನಂದಿ ಇನ್‌ಫ್ರಾಸ್ಟ್ರಕ್ಚರ್ ಕಂಪನಿಯಿಂದ ರಸ್ತೆ ನಿರ್ಮಾಣ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೯೪೬ (೪೪೦೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೯೭ರ ಫ್ರೇಮ್‌ವರ್ಕ್ ಒಪ್ಪಂದದ ಪ್ರಕಾರ, ನಂದಿ ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಎಂಟರ್ ಪ್ರೈಸಸ್ ಗೆ ವಹಿಸಿದ್ದ ಕಾರ್ಯವೇನು; ಅದರಂತೆ ಅವರು ಎಷ್ಟು ಕಿ.ಮೀ ರಸ್ತೆ ಹಾಗೂ ಎಷ್ಟು ಟೌನ್‌ಶಿಪ್ ನಿರ್ಮಾಣ ಮಾಡಬೇಕಾಗಿತ್ತು;

(ಆ) ರಸ್ತೆ ಮತ್ತು ಟೌನ್‌ಶಿಪ್ ನಿರ್ವಹಣೆಗೆ ಪ್ರಾರಂಭದಲ್ಲಿ ನಿಗಧಿಪಡಿಸಿದ್ದ ಒಟ್ಟು ಜಮೀನು ಎಷ್ಟು; ಜಮೀನನ್ನು ಯಾವ ಯಾವ ಗ್ರಾಮಗಳಿಗೆ ಹೊಂದಿಕೊಂಡಂತೆ ನಿಗಧಿ ಮಾಡಲಾಗಿತ್ತು;(ಗ್ರಾಮವಾರು ವಿವರ ನೀಡುವುದು)

(ಇ) ಇದುವರೆಗೆ ನೈಸ್ ಸಂಸ್ಥೆಗೆ ನೀಡಲಾದ ಜಮೀನಿನ ವಿಸ್ತೀರ್ಣವೆಷ್ಟು; ಆ ಪೈಕಿ ಸರ್ಕಾರದ ಜಮೀನಿನ ವಿಸ್ತೀರ್ಣವೆಷ್ಟು; ರೈತರಿಗೆ ಸೇರಿದ ಜಮೀನಿನ ವಿಸ್ತೀರ್ಣವೆಷ್ಟು; (ಗ್ರಾಮವಾರು ವಿವರ ನೀಡುವುದು)

(ಈ) ರೈತರಿಂದ ಪಡೆದ ಜಮೀನಿಗೆ ನೈಸ್ ಸಂಸ್ಥೆಯು ಎಷ್ಟು ಪರಿಹಾರವನ್ನು ನೀಡಿದೆ; (ವಿವರಗಳೊಂದಿಗೆ)

(ಉ) ಇದುವರೆಗೆ ನೈಸ್ ಕಂಪನಿಯು ಎಷ್ಟು ಕಿ.ಮೀ ಉದ್ದದ ರಸ್ತೆಯನ್ನು ನಿರ್ಮಿಸಿದೆ; ಅದಕ್ಕೆ ಎಷ್ಟು ಹಣವನ್ನು ವ್ಯಯಿಸಿದೆ;

(ಊ) ನೈಸ್ ರಸ್ತೆಯಲ್ಲಿ ಓಡಾಡುವ ವಾಹನಗಳಿಗೆ ಎಷ್ಟೆಷ್ಟು ಶುಲ್ಕವನ್ನು ಸಂಗ್ರಹಿಸುತ್ತಿದೆ; (ವಾಹನವಾರು ವಿವರಗಳೊಂದಿಗೆ)

(ಋ) ಸಂಗ್ರಹಿಸಲ್ಪಟ್ಟ ಶುಲ್ಕದಲ್ಲಿ ಸಂಸ್ಥೆಯು ಸರ್ಕಾರಕ್ಕೆ ಪಾವತಿಸುತ್ತಿರುವ ಪಾಲಿನ ಮೊಬಲಗು ಎಷ್ಟು; ಅದನ್ನು ಯಾವ ಮಾನದಂಡದಲ್ಲಿ ನಿಗಧಿಪಡಿಸಲಾಗಿದೆ? (ವಿವರಗಳೊಂದಿಗೆ)

## ಜಾನುವಾರು ಮತ್ತು ಪಶುವೈದ್ಯ ಆಸ್ಪತ್ರೆಗಳು

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೯೪೭ (೪೪೦೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಜಾನುವಾರುಗಳ ಸಂಖ್ಯೆ ಎಷ್ಟು; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಆ) ಜಾನುವಾರುಗಳ ಸಂರಕ್ಷಣೆಗಾಗಿ ಒಟ್ಟು ಎಷ್ಟು ಪಶುವೈದ್ಯ ಆಸ್ಪತ್ರೆ ಮತ್ತು ಔಷಧಾಲಯಗಳನ್ನು ತೆರೆಯಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪಶುವೈದ್ಯ ಆಸ್ಪತ್ರೆ ತೆರೆಯಲು ಸರ್ಕಾರ ವಿಧಿಸುವ ಮಾನದಂಡಗಳೇನು? (ಪೂರ್ಣ ವಿವರ ನೀಡುವುದು)

## ಮುಜರಾಯಿ ದೇವಸ್ಥಾನಗಳ ವಿಭಾಗಾವಾರು ವಿಂಗಡಣೆ ಬಗ್ಗೆ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೯೪೮ (೪೨೯೪) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ದೇವಸ್ಥಾನಗಳು ಮುಜರಾಯಿ ಇಲಾಖೆಗೆ ಒಳಪಡುತ್ತವೆ; ಮುಜರಾಯಿ ಇಲಾಖೆಗೆ ಒಳಪಡದ ದೇವಸ್ಥಾನಗಳ ಸಂಖ್ಯೆ ಎಷ್ಟು; ಅವು ಯಾವುವು (ತಾಲ್ಲೂಕುವಾರು ವಿವರ ನೀಡುವುದು)

(ಆ) ಮುಜರಾಯಿ ದೇವಸ್ಥಾನಗಳನ್ನು ವಿಭಾಗವಾರು ವಿಂಗಡಿಸಲಾಗಿದೆಯೇ; ಹಾಗಿದ್ದಲ್ಲಿ, ಆ ವಿಭಾಗಗಳು ಯಾವುವು; ಆ ವಿಭಾಗಗಳ ವ್ಯಾಪ್ತಿಯಲ್ಲಿರುವ ಗ್ರಾಮಗಳು ಮತ್ತು ದೇವಸ್ಥಾನಗಳು ಯಾವುವು? (ದೇವಸ್ಥಾನವಾರು ವಿವರ ನೀಡುವುದು)

## ವಿದ್ಯುತ್ ಉತ್ಪಾದನೆ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೯೪ (೪೨೯೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳಿಂದ ಉತ್ಪಾದನೆ ಮಾಡುತ್ತಿರುವ ಒಟ್ಟು ವಿದ್ಯುತ್ ಪ್ರಮಾಣವೆಷ್ಟು; (ವಿವರ ನೀಡುವುದು)

(ಆ) ನವೀಕರಿಸಬಹುದಾದ ವಿವಿಧ ಇಂಧನ ಮೂಲಗಳಾದ ಪವನ ವಿದ್ಯುತ್ ಯೋಜನೆ, ಸೌರ ವಿದ್ಯುತ್ ಯೋಜನೆ, ಸಹ ವಿದ್ಯುತ್ ಯೋಜನೆ, ಜಲ ವಿದ್ಯುತ್ ಯೋಜನೆಗಳನ್ನು ರಾಜ್ಯದ ಯಾವ ಯಾವ ಭಾಗಗಳಲ್ಲಿ ಹೊಂದಲಾಗಿದೆ; ಆ ಯೋಜನೆಗಳಿಂದ ಉತ್ಪಾದನೆಯಾಗುತ್ತಿರುವ ಒಟ್ಟು ವಿದ್ಯುತ್ ಪ್ರಮಾಣವೆಷ್ಟು; (ಸ್ಥಳವಾರು, ಯೋಜನೆವಾರು, ವಿದ್ಯುತ್ ಪ್ರಮಾಣ ವಿವರ ನೀಡುವುದು)

(ಇ) ಈ ಯೋಜನೆಗಳಿಂದ ಉತ್ಪಾದನೆಯಾಗುತ್ತಿರುವ ವಿದ್ಯುಚ್ಛಕ್ತಿಯನ್ನು ಯಾವ ದರದಲ್ಲಿ ಯಾವ ಉದ್ಯಮಗಳಿಗೆ ಮಾರಾಟ ಮಾಡಲಾಗುತ್ತಿದೆ? (ವಿವರ ನೀಡುವುದು)

## ಧಾರ್ಮಿಕ ಕ್ಷೇತ್ರಗಳಲ್ಲಿ ಕಲಬೆರಕೆ ಪೂಜಾ ಸಾಮಗ್ರಿಗಳನ್ನು ಮಾರಾಟ ಮಾಡುತ್ತಿರುವ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೫೦ (೪೩೮೪) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಧಾರ್ಮಿಕ ಕ್ಷೇತ್ರದ ಆವರಣಗಳಲ್ಲಿ ಅಪಾಯಕಾರಿ ರಾಸಾಯನಿಕ ಮಿಶ್ರಣಗಳನ್ನು ಒಳಗೊಂಡ ಅರಿಶಿನ, ಕುಂಕುಮ, ಗಂಧ ಮುಂತಾದ ಪೂಜಾ ಸಾಮಗ್ರಿಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಉತ್ತಮ ಗುಣಮಟ್ಟದ ಪೂಜಾ ಸಾಮಗ್ರಿಗಳನ್ನು ದೇವಸ್ಥಾನದ ಆವರಣಗಳಲ್ಲಿ ದೊರೆಯುವಂತೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ಕೊಡಗು ಜಿಲ್ಲೆಯಲ್ಲಿನ ಎಲ್ಲಾ ಗ್ರಾಮಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೫೧ (೪೩೮೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ವಿದ್ಯುತ್ ಸಂಪರ್ಕವೇ ಇಲ್ಲದ ಗ್ರಾಮ, ಉಪಗ್ರಾಮ ಮತ್ತು ಜನವಸತಿ ಪ್ರದೇಶಗಳ ಸಂಖ್ಯೆ ಎಷ್ಟು;

(ಆ) ಸದರಿ ಸ್ಥಳಗಳಿಗೆ ಇದುವರೆವಿಗೂ ವಿದ್ಯುತ್ ಸಂಪರ್ಕ ಕಲ್ಪಿಸದೇ ಇರಲು ಕಾರಣಗಳೇನು:

(ಇ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗುವುದು;

(ಈ) ವಿದ್ಯುತ್ ಸಂಪರ್ಕವನ್ನು ಕಲ್ಪಿಸಲು ಸಾಧ್ಯವೇ ಇಲ್ಲದ ಪಕ್ಷದಲ್ಲಿ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಎಸ್.ಸಿ.ಪಿ/ಟಿ.ಎಸ್.ಪಿ. ಅಡಿಯಲ್ಲಿ ಅನುದಾನ ಬಿಡುಗಡೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೫೨ (೪೨೫೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೇಷ್ಮೆ ಇಲಾಖೆಯಿಂದ ಎಸ್.ಸಿ.ಪಿ/ಟಿ.ಎಸ್.ಪಿ. ಅಡಿಯಲ್ಲಿ ಎಸ್.ಸಿ/ಎಸ್.ಟಿ. ಗಳಿಗಿರುವ ಸೌಲಭ್ಯಗಳು ಯಾವುವು;

(ಆ) ೨೦೧೪ ರಿಂದ ವರ್ಷಾವಾರು ನಿಗಧಿಪಡಿಸಿದ ಹಣ ಎಷ್ಟು; ಖರ್ಚಾದ ಹಣ ಎಷ್ಟು; ಬಾಕಿ ಹಣ ಎಷ್ಟು;

(ಇ) ಈ ಯೋಜನೆಗಳ ಅಡಿಯಲ್ಲಿ ಪ್ರಯೋಜನ ಪಡೆದ ಫಲಾನುಭವಿಗಳ ವಿವರ ಮತ್ತು ಉದ್ದೇಶಗಳಿಗೆ ನೀಡಲಾದ ಸಹಾಯಧನದ ಸಂಪೂರ್ಣ ವಿವರ ನೀಡುವುದು?

## APMCಗಳಿಂದ ರಸ್ತೆ ನಿರ್ಮಿಸುವ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) –**

೩೯೫೩ (೪೨೬೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲುಬುರಗಿ ಜಿಲ್ಲೆಗೆ ಕಳೆದ ೩ ವರ್ಷಗಳಲ್ಲಿ APMC ಗಳಿಗೆ ರಸ್ತೆ ನಿರ್ಮಿಸಲು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) APMC ರಸ್ತೆಗಳಿಗೆ ಹಣ ಬಿಡುಗಡೆ ಮಾಡಲು ಇರುವ ಮಾನದಂಡಗಳೇನು;

(ಇ) ಕಲುಬುರಗಿ ಜಿಲ್ಲೆಗೆ ಈವರೆಗೆ ಎಲ್ಲಾ APMC ಗಳಿಗೆ ಯಾವ ಯಾವ ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ?

## ಚಾಮರಾಜೇಶ್ವರ ದೇವಾಲಯ ಜೀರ್ಣೋದ್ಧಾರ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೫೪ (೪೨೭೧) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರದ ಇತಿಹಾಸ ಪ್ರಸಿದ್ಧ ಚಾಮರಾಜೇಶ್ವರ ದೇವಾಲಯದ ದುರಸ್ಥಿ ಹಾಗೂ ಜೀರ್ಣೋದ್ಧಾರಕ್ಕೆ ಸರ್ಕಾರದಿಂದ ಬಿಡುಗಡೆ ಆಗಿರುವ ಹಣ ಎಷ್ಟು; ಯಾವ ಯಾವ ದುರಸ್ಥಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ;

(ಆ) ಚಾಮರಾಜೇಶ್ವರ ರಥದ ಪುನರ್ ನಿರ್ಮಾಣ ಕಾರ್ಯ ನಡೆದಿದೆಯೇ; ಈ ಕಾಮಗಾರಿಗೆ ಒದಗಿಸಿರುವ ಹಣ ಎಷ್ಟು;

(ಇ) ಚಾಮರಾಜ ಒಡೆಯರ್ ಜನನ ಮಂಟಪವನ್ನು ಪ್ರಾಚ್ಯ ವಸ್ತು ಇಲಾಖೆಯ ವಶಕ್ಕೆ ತೆಗೆದುಕೊಳ್ಳಲಾಗಿದೆಯೇ; ಅಲ್ಲಿರುವ ವರ್ಣ ಚಿತ್ರಗಳನ್ನು ಸಂರಕ್ಷಣೆ ಮಾಡಲಾಗಿದೆಯೇ?

## ನೀಲಗಾರ ಸಂಪ್ರಾದಾಯದ ಹಾಡುಗಾರರ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೫೫ (೪೨೬೨) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಲೆ ಮಹದೇಶ್ವರ ಬೆಟ್ಟದಲ್ಲಿ ಕಂಸಾಳೆ, ತಂಬೂರಿ ಬಾರಿಸಿಕೊಂಡು ಮಂಟೇಸ್ವಾಮಿ, ಮಹದೇಶ್ವರ, ಮೊದಲಾದ ಜಾನಪದ ಕಾವ್ಯಗಳನ್ನು ಹಾಡಿ ಭಕ್ತರು ಕೊಟ್ಟ ಕೋರಣ್ಯ ಸ್ವೀಕರಿಸುತ್ತಿದ್ದ ನೀಲಗಾರ ಸಂಪ್ರದಾಯದ ಹಾಡುಗಾರರ ಮೇಲೆ ನಿಷೇಧ ಹೇರಲಾಗಿದೆಯೇ;

(ಆ) ಇವರ ಪರಂಪರಾಗತ ವೃತ್ತಿಯೇ ಜಾನಪದ, ಮಹಾಕಾವ್ಯಗಳನ್ನು ಹಾಡಿ ಜನರು ಕೊಟ್ಟಷ್ಟು ಕೋರಣ್ಯವನ್ನು ಸ್ವೀಕರಿಸುವುದಾಗಿದ್ದು, ಇವರನ್ನು ಭಿಕ್ಷುಕರೆಂದು ಭಾವಿಸಿ, ಇವರ ಮೇಲೆ ನಿಷೇಧ ಹೇರಿದ್ದು, ಇದನ್ನು ತೆರವುಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಇ) ಮಲೆ ಮಹದೇಶ್ವರ ಬೆಟ್ಟದಲ್ಲಿ ಸೋಮಾರಿಗಳಾಗಿ ಜನರಿಗೆ ತೊಂದರೆ ನೀಡಿ ಭಿಕ್ಷಾಟನೆ ಮಾಡುವವರನ್ನು ನಿಷೇಧಿಸಿ ಈ ಸಂಪ್ರದಾಯದ ಹಾಡುಗಾರರ ಮೇಲೆ ಹೇರಿದ ನಿಷೇಧ ತೆರವುಗೊಳಿಸಿ ಇವರು ತಮ್ಮ ಪರಂಪರೆಯನ್ನು ಮುಂದುವರಿಸಿಕೊಂಡು ಹೋಗಲು ಅವಕಾಶ ನೀಡಲಾಗುವುದೇ?

## ಕೊಳ್ಳೆಗಾಲ ತಾಲ್ಲೂಕಿನ ವಡಕೆ ಹಳ್ಳ ಸೇತುವೆ ಕೊಚ್ಚಿ ಹೋಗಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೫೬ (೪೨೬೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಳ್ಳೆಗಾಲದ ಮಲೆಮಹದೇಶ್ವರ ಬೆಟ್ಟ ರಸ್ತೆಯಲ್ಲಿರುವ ವಡಕೆ ಹಳ್ಳ ಮುಳುಗು ಸೇತುವೆ ಈಚೆಗೆ ಬಿದ್ದ ಮಳೆಯಿಂದ ಕೊಚ್ಚಿ ಹೋಗಿರುವುದು, ನೂತನ ಸೇತುವೆ ಕಾಮಗಾರಿ ಆರಂಭವಾಗಿದ್ದ ಕಾರಣ ತಾತ್ಕಾಲಿಕವಾಗಿ ನಿರ್ಮಿಸಿದ್ದ ಮಾರ್ಗವೂ ಕೊಚ್ಚಿ ಹೋಗಿರುವುದು ಗಮನಕ್ಕೆ ಬಂದಿದೆಯೇ;

(ಆ) ಕೂಡಲೇ ವಾಹನ ಸಂಚಾರಕ್ಕೆ ತಾತ್ಕಾಲಿಕ ಮಾರ್ಗವನ್ನು ನಿರ್ಮಿಸಿಕೊಡುವುದರ ಮೂಲಕ ೧೫ ಕಿಮೀ ಬಳಸುವ ದಾರಿಯಲ್ಲಿ ಸಂಚರಿಸುವುದನ್ನು ತಪ್ಪಿಸುವುದರ ಜೊತೆಗೆ, ನೂತನ ಸೇತುವೆ ನಿರ್ಮಾಣದ ಕಾಮಗಾರಿಯನ್ನು ಬೇಗ ಪುನರಾರಂಭಿಸಿ ಆದಷ್ಟು ಬೇಗ ಪೂರ್ಣಗೊಳಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ;

(ಇ) ನೂತನ ಸೇತುವೆ ಕಾಮಗಾರಿಯ ಅಂದಾಜು ವೆಚ್ಚ ಎಷ್ಟು; ಈಚೆಗೆ ಬಿದ್ದ ಮಳೆಯ ಪ್ರಮಾಣವನ್ನು ನೋಡಿಕೊಂಡು ಭದ್ರವಾದ ಹಾಗೂ ಗುಣಮಟ್ಟದ ಸೇತುವೆ ನಿರ್ಮಿಸಲು ಕ್ರಮ ಜರುಗಿಸಲಾಗುವುದೇ?

## ಮುಜರಾಯಿ ದೇವಾಲಯಗಳಿಗೆ ಮೂಲಭೂತ ಸೌಕರ್ಯಗಳ ಕೊರತೆ ಬಗ್ಗೆ

**ಶ್ರೀ ಕೆ.ವಿ ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೫೭ (೪೩೮೬) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ ಒಟ್ಟು ದೇವಾಲಯಗಳು ಎಷ್ಟು; (ಎ–ದರ್ಜೆ,ಬಿ–ದರ್ಜೆ ಸಿ.ದರ್ಜೆ ವಿವರ ಪ್ರತ್ಯೇಕವಾಗಿ ಜಿಲ್ಲಾವಾರು ನೀಡುವುದು)

(ಆ) ಸದರಿ ದೇವಾಲಯಗಳಲ್ಲಿ ಎಷ್ಟು ದೇವಾಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ; (ಕುಡಿಯುವ ನೀರು, ವಿದ್ಯುತ್, ಶೌಚಾಲಯ ವ್ಯವಸ್ಥೆಗಳ ಪ್ರತ್ಯೇಕವಾದ ವಿವರ ನೀಡುವುದು)

(ಇ) ೨೦೧೨–೧೩ ರಿಂದ ಇಲ್ಲಿಯವರೆಗೆ ಎಷ್ಟು ದೇವಾಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ; (ಕುಡಿಯುವ ನೀರು, ವಿದ್ಯುತ್, ಶೌಚಾಲಯ ವ್ಯವಸ್ಥೆಗಳ ಪ್ರತ್ಯೇಕವಾದ ವಿವರ ನೀಡುವುದು)

ಈ) ಉಳಿದ ದೇವಾಲಯಗಳಿಗೆ ಯಾವ ಕಾಲ ಮಿತಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು;

(ಉ) ೨೦೧೨–೧೩ ರಿಂದ ಇಲ್ಲಿಯವರೆಗೆ ಸದರಿ ದೇವಾಲಯಗಳ ಮೂಲಭೂತ ಸೌಕರ್ಯಗಳಿಗಾಗಿ ಸರ್ಕಾರ ಬಿಡುಗಡೆ ಮಾಡಿದ ಹಾಗೂ ಖರ್ಚಾದ ಅನುದಾನವೆಷ್ಟು? (ವಿವರ ನೀಡುವುದು)

## ಮುಜರಾಯಿ ದೇವಾಲಯಗಳ ಆದಾಯ ಮತ್ತು ವ್ಯಯದ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೫೮ (೪೩೮೭) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೨–೧೩ ರಿಂದ ಇಲ್ಲಿಯವರೆಗೆ ರಾಜ್ಯದ ಮುಜರಾಯಿ ದೇವಾಲಯಗಳಿಂದ ಬಂದ ಆದಾಯವೆಷ್ಟು; (ವರ್ಷಾವಾರು ನೀಡುವುದು)

(ಆ) ಸದರಿ ಆದಾಯವನ್ನು ಯಾವ ಉದ್ದೇಶಗಳಿಗಾಗಿ ವೆಚ್ಚ ಮಾಡಲಾಗಿದೆ; (ವರ್ಷಾವಾರು ವಿವರ ನೀಡುವುದು)

(ಇ) ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ ದೇವಾಲಯಗಳಲ್ಲಿ ಎಷ್ಟು ದೇವಾಲಯಗಳು ಶಿಥಿಲಾವಸ್ಥೆಯಲ್ಲಿವೆ;

(ಈ) ೨೦೧೨-೧೩ ರಿಂದ ಇಲ್ಲಿಯವರೆಗೆ ಎಷ್ಟು ದೇವಾಲಯಗಳ ಜೀರ್ಣೋದ್ಧಾರ ಮಾಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಉ) ಉಳಿದ ದೇವಾಲಯಗಳನ್ನು ಯಾವ ಕಾಲ ಮಿತಿಯಲ್ಲಿ ಜೀರ್ಣೋದ್ಧಾರ ಮಾಡಲಾಗುವುದು?

## ಚಾರ್‌ದಾಮ್ ಯಾತ್ರೆ ಕೈಗೊಂಡವರಿಗೆ ಸಹಾಯಧನ ವಿತರಿಸುವ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೫ (೪೨೫೦) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬-೧೭ ಮತ್ತು ೨೦೧೭-೧೮ನೇ ಸಾಲಿನಲ್ಲಿ ಚಾರ್‌ದಾಮ್ ಯಾತ್ರೆಯನ್ನು ಕೈಗೊಂಡು, ಸಹಾಯ ಧನಕ್ಕಾಗಿ ರಾಜ್ಯ ಸರ್ಕಾರಕ್ಕೆ ಸಲ್ಲಿಸಿದ ಅರ್ಜಿಗಳೆಷ್ಟು; (ವರ್ಷಾವಾರು ವಿವರ ನೀಡುವುದು)

(ಆ) ಎಲ್ಲಾ ಯಾತ್ರಾರ್ಥಿಗಳಿಗೆ ಸಹಾಯಧನ ವಿತರಿಸಲಾಗಿದೆಯೆ; ವಿತರಿಸಲಾಗಿದ್ದಲ್ಲಿ, ಎಷ್ಟು ಯಾತ್ರಾರ್ಥಿಗಳಿಗೆ ಸಹಾಯಧನ ವಿತರಿಸಲಾಗಿದೆ; (ವರ್ಷಾವಾರು ವಿವರ ನೀಡುವುದು)

(ಇ) ಉಳಿದ ಯಾತ್ರಾರ್ಥಿಗಳಿಗೆ ಸಹಾಯಧನ ವಿತರಿಸಲು ತಡವಾಗಲು ಕಾರಣವೇನು:

(ಈ) ಯಾವ ಕಾಲಮಿತಿಯಲ್ಲಿ ಉಳಿದ ಯಾತ್ರಾರ್ಥಿಗಳಿಗೆ ಸಹಾಯಧನ ವಿತರಿಸಲಾಗುವುದು?

## ವಿದ್ಯುತ್ ತಂತಿಗಳ ಬದಲು ಕೇಬಲ್ ಲೈನ್ ಅಳವಡಿಸುವ ಬಗ್ಗೆ

**ಶ್ರೀ ಪ್ರಾಣೇಶ್ .ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೯೬೦ (೪೪೯೫) ಮಾನ್ಯ ಇಂಧನ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಚಿಕ್ಕಮಗಳೂರು ಜಿಲ್ಲೆಯ ಮಲೆನಾಡು ಭಾಗದಲ್ಲಿ ಅರಣ್ಯ ಹಾಗೂ ಗುಡ್ಡಗಾಡು ಪ್ರದೇಶವಿರುವ ಕಾರಣ, ವಿದ್ಯುತ್ ತಂತಿಗಳನ್ನು ಅಳವಡಿಸುವ ಬದಲು ಕೇಬಲ್ ಲೈನ್ ಅಳವಡಿಸುವ ವಿಚಾರವಾಗಿ ಸರ್ಕಾರ ಈವರೆಗೂ ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

## ಮತ್ಸ್ಯ ಕೃಷಿ ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೬೧ (೪೫೩೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಮತ್ಸ್ಯ ಕೃಷಿ ಆಶಾ ಕಿರಣ ಯೋಜನೆಯಡಿ ಸಹಾಯಧನ ನೀಡುತ್ತಿರುವುದು ನಿಜವೇ;

ಆ) ಹಾಗಿದ್ದರೆ, ಈ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು; ಮೀಸಲಿಟ್ಟ ಹಣ ಎಷ್ಟು; ಖರ್ಚಾದ ಹಣ ಎಷ್ಟು? (ವಿವರ ನೀಡುವುದು)

## ಕೃಷಿ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೬೨ (೪೨೭೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಕೃಷಿ ಸಂಬಂಧಿ ಕಾರ್ಯಕ್ರಮಗಳಿಗೆ/ಯೋಜನೆಗಳಿಗೆ ಅಯವ್ಯಯದಲ್ಲಿ ಅನುದಾನ ಮೀಸಲಿರಿಸಿರುವುದು ನಿಜವೇ;

(ಆ) ಹಾಗಿದ್ದರೆ, ಕೃಷಿ ಸಂಬಂಧಿ ಕಾರ್ಯಕ್ರಮಗಳು/ಯೋಜನೆಗಳು ಯಾವುವು; ಕೃಷಿ ಸಂಬಂಧಿ ವಿವಿಧ ಕಾರ್ಯಕ್ರಮಗಳಲ್ಲಿ/ಯೋಜನೆಗಳಲ್ಲಿ ಇದುವರೆವಿಗೆ ಖರ್ಚು ಮಾಡಿದ ಹಣ ಎಷ್ಟು; ೨೦೧೩–೧೪ ರಿಂದ ೨೦೧೭–೧೮ರವರೆಗಿನ ಸಂಪೂರ್ಣ ವಿವರವನ್ನು ಯೋಜನಾವಾರು ಫಲಾನುಭವಿಗಳ ಸಂಖ್ಯೆ ಸಹಿತ ವಿವರ ನೀಡುವುದು)

**ಹಾಲು ಉತ್ಪಾದಕರಿಗೆ ಪ್ರೋತ್ಸಾಹ ಹಣ ನೀಡುತ್ತಿರುವ ಬಗ್ಗೆ**

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೬೩ (೪೨೮೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈನುಗಾರಿಕೆಗೆ ಪ್ರೋತ್ಸಾಹಿಸುವ ಸಲುವಾಗಿ ಹಾಲು ಉತ್ಪಾದಕರಿಗೆ ಸರ್ಕಾರ ಪ್ರತಿ ಲೀಟರ್ ಹಾಲಿಗೆ ಪ್ರೋತ್ಸಾಹ ಹಣ ನೀಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ಫಲಾನುಭವಿಗಳ ಸಂಖ್ಯೆ ಎಷ್ಟು; ಇದುವರೆವಿಗೆ ಫಲಾನುಭವಿಗಳಿಗೆ ಪೂರ್ಣ ಹಣ ಯಾವ ತಿಂಗಳವರೆಗೆ ವಿತರಿಸಲಾಗಿದೆ; ಬಾಕಿಯಿರುವ ಹಣ ಎಷ್ಟು? (ವಿವರ ನೀಡುವುದು)

**ಕೃಷಿ ಸಾಲ ಮಿತಿ ಏರಿಸುವ ಬಗ್ಗೆ**

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೬೪ (೪೨೮೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶೂನ್ಯ ಬಡ್ಡಿದರದಲ್ಲಿ ಕೃಷಿ ಸಾಲದ ಮಿತಿಯನ್ನು ಒಂದು ಲಕ್ಷದಿಂದ ಮೂರು ಲಕ್ಷಕ್ಕೆ ಏರಿಸಿರುವುದು ನಿಜವೇ;

(ಆ) ಹಾಗಿದ್ದರೆ, ಇದುವರೆವಿಗೆ ಎಷ್ಟು ಸಾಲ ನೀಡಲಾಗಿದೆ; ಫಲಾನುಭವಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಕೃಷಿ ಸಾಲ ವಿತರಣೆ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೬೫ (೪೨೮೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರಿಗೆ ಸಹಕಾರ ಇಲಾಖೆಯಿಂದ ವಿವಿಧ ಶ್ರೇಣಿಯಲ್ಲಿ ಕೃಷಿ ಸಾಲ ವಿತರಣೆ ಮಾಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ೨೦೧೩–೧೪ ರಿಂದ ೨೦೧೭–೧೮ ರವರೆಗೆ ವಿತರಣೆ ಮಾಡಿದ ಸಾಲದ ಮೊತ್ತ ಎಷ್ಟು; ಸಾಲದ ಶ್ರೇಣಿಗಳ ವಿವರ ಮತ್ತು ಸಾಲ ನೀಡಲು ನಿಗದಿಪಡಿಸಿರುವ ಮಾನದಂಡಗಳೇನು;

(ಇ) ಶೂನ್ಯ ಬಡ್ಡಿ ದರದಲ್ಲಿ ಅತೀ ಸಣ್ಣ ರೈತರಿಗೆ, ಸಣ್ಣ ರೈತರಿಗೆ ಮತ್ತು ಮಧ್ಯಮ ರೈತರಿಗೆ ಹಾಗೂ ದೊಡ್ಡ ರೈತರಿಗೆ ವಿತರಣೆ ಮಾಡಿದ ಸಾಲದ ಮೊತ್ತ ಮತ್ತು ಫಲಾನುಭವಿಗಳ ಸಂಖ್ಯೆ ಎಷ್ಟು? (ವರ್ಷಾವಾರು ವಿವರ ಒದಗಿಸುವುದು)

## ಮುಜರಾಯಿ ಇಲಾಖೆ ದೇವಸ್ಥಾನದ ಅಭಿವೃದ್ಧಿ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೬೬ (೪೨೪೬) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶ್ರೀ ಕಾಳಿಕಾಂಬ ಶ್ರೀ ಕಾಲಕಂಠೇಶ್ವರ ಹಾಗೂ ಶ್ರೀ ಲಕ್ಷ್ಮೀರಂಗನಾಥಸ್ವಾಮಿ ದೇವಾಲಯ ಕಾಳಮ್ಮನವರ ಬೆಟ್ಟ, ಬಳುವನೇರಲು ಗ್ರಾಮ, ಹೊನ್ನವಳ್ಳಿ ಹೋಬಳಿ, ತಿಪಟೂರು, ತುಮಕೂರು ಜಿಲ್ಲೆಯ ಮುಜರಾಯಿ ಇಲಾಖೆಯಲ್ಲಿ ದೇವಸ್ಥಾನ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮವೇನು;

(ಆ) ಕಳೆದ ೫೦ ವರ್ಷಗಳಿಂದಲೂ ಸದರಿ ದೇವಸ್ಥಾನದಲ್ಲಿ ವಿಶ್ವಕರ್ಮ ಜನಾಂಗದವರು ಪೂಜೆ ಸಲ್ಲಿಸಿಕೊಂಡು ಬಂದಿದ್ದು, ಇದೀಗ ಅವರಿಗೆ ಪೂಜೆ ಸಲ್ಲಿಸಲು ಅವಕಾಶ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ವಿಶ್ವಕರ್ಮ ಸಮುದಾಯದವರಿಗೆ ವರ್ಷ ಪೂರ್ತಿ ನಿಗಧಿತ ದಿನಗಳಂದು ಪೂಜೆ ಸಲ್ಲಿಸುವ ವಿಚಾರವಾಗಿ ಸರ್ಕಾರ ಕೈಗೊಂಡ ಕ್ರಮವೇನು; ಇಲ್ಲವಾದರೆ ಏಕೆ? (ಮಾಹಿತಿ ಒದಗಿಸುವುದು)

## ರೈತರಿಗೆ ಕೃಷಿ ಪರಿಕರಗಳ ಸೌಲಭ್ಯದ ಬಗ್ಗೆ

**ಶ್ರೀ ಸಂಯುದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೬೭ (೪೨೫೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕೃಷಿನಿರತ ರೈತರಿಗೆ ಕಳೆದ ಮೂರು ವರ್ಷಗಳಲ್ಲಿ ಕೃಷಿ ಇಲಾಖೆಯಿಂದ ಒದಗಿಸಲಾಗುತ್ತಿರುವ ಕೃಷಿ ಪರಿಕರಗಳು, ಆಧುನಿಕ ಯಂತ್ರೋಪಕರಣಗಳ ಉಪಯೋಗ ಹಾಗೂ ಆಧುನಿಕ ಕೃಷಿ ಪದ್ಧತಿಗಳ ಬಗ್ಗೆ ಪ್ರಾತ್ಯಕ್ಷಿಕೆ ಮತ್ತು ಇನ್ನಿತರೆ ಸೌಲಭ್ಯಗಳೇನು; (ವರ್ಷಾವಾರು ಮಾಹಿತಿ ನೀಡುವುದು)

(ಆ) ಈ ಮೇಲ್ಕಂಡ ಸವಲತ್ತುಗಳನ್ನು ಪಡೆಯಲು ರೈತರು ಅನುಸರಿಸಬೇಕಾದ ನಿಯಮಗಳೇನು; (ಮಾಹಿತಿ ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಎಷ್ಟು ಜನ ರೈತರು ಈ ಸವಲತ್ತುಗಳನ್ನು ಪಡೆದಿರುತ್ತಾರೆ? (ಫಲಾನುಭವಿ ಕೃಷಿನಿರತ ರೈತರ ಹೆಸರು ಮತ್ತು ವಿಳಾಸ ಸಹಿತ ಜಿಲ್ಲಾವಾರು, ವರ್ಷಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಪಶು ಆಹಾರದ ಉತ್ಪಾದನಾ ಘಟಕಗಳಿಗೆ ನೀಡುತ್ತಿರುವ ಅನುದಾನದ ಬಗ್ಗೆ

**ಶ್ರೀ ಸಂಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೬೮ (೪೨೫೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆಯು ಕರ್ನಾಟಕ ಹಾಲು ಮಹಾಮಂಡಳಿ ವತಿಯಿಂದ ರಾಮನಗರ ಜಿಲ್ಲೆಯಲ್ಲಿ ಪಶು ಆಹಾರ ಉತ್ಪಾದನಾ ಘಟಕವನ್ನು ನಿರ್ಮಿಸಲು ಗುರುತಿಸಿರುವ ಜಾಗದ ವಿಸ್ತೀರ್ಣವೆಷ್ಟು; ಹಾಗೂ ಜಮೀನಿನ ಮಾಲೀಕರಿಗೆ ಪ್ರತಿ ಎಕರೆಗೆ ನೀಡಿರುವ ಪರಿಹಾರದ ಮೊತ್ತವೆಷ್ಟು; (ಮಾಹಿತಿ ನೀಡುವುದು)

(ಆ) ಈ ಪಶು ಆಹಾರ ಉತ್ಪಾದನಾ ಘಟಕದಿಂದ ಎಷ್ಟು ಸಾಮರ್ಥ್ಯದ ಪಶು ಆಹಾರವನ್ನು ಉತ್ಪಾದಿಸಬಹುದಾಗಿದೆ; (ವಿವರ ನೀಡುವುದು)

(ಇ) ಈ ಘಟಕಗಳಲ್ಲಿ ಪಶು ಆಹಾರ ಉತ್ಪಾದನೆ ಮತ್ತು ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಸರ್ಕಾರ ಬಿಡುಗಡೆ ಮಾಡಿ ಖರ್ಚು ಮಾಡಲಾದ ಹಣವೆಷ್ಟು; (ಇತ್ತೀಚಿನ ಪ್ರಗತಿಯ ವಿವರ ನೀಡುವುದು)

(ಈ) ಈ ಪಶು ಆಹಾರ ಉತ್ಪಾದನಾ ಘಟಕದಿಂದ ಸ್ಥಳೀಯವಾಗಿ ಎಷ್ಟು ಜನರಿಗೆ ಉದ್ಯೋಗಾವಕಾಶ ಕಲ್ಪಿಸಲು ಗುರಿ ಹೊಂದಲಾಗಿದೆ? (ಮಾಹಿತಿ ನೀಡುವುದು)

## ಸೋಲಾರ್ ವಿದ್ಯುತ್ ಉತ್ಪಾದನೆ ಬಗ್ಗೆ

**ಶ್ರೀ ಸಯ್ಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೬೯ (೪೨೫೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆಗೆ ಆಯ್ಕೆಗೊಂಡಿರುವ ಫಲಾನುಭವಿ ತಾಲ್ಲೂಕುಗಳಾವುವು; (ವಿವರ ನೀಡುವುದು)

(ಆ) ಈ ಯೋಜನೆಗೆ ರಾಮನಗರ ಜಿಲ್ಲೆಯ ಎಷ್ಟು ತಾಲ್ಲೂಕುಗಳು ಆಯ್ಕೆಗೊಂಡಿವೆ; ಸೋಲಾರ್ ವಿದ್ಯುತ್ ಉತ್ಪಾದನೆಗೆ ಸರ್ಕಾರ ನಿಗಧಿಪಡಿಸಿರುವ ಭೂಮಿಯ ವಿಸ್ತೀರ್ಣವೆಷ್ಟು; ಪ್ರತಿ ಯೂನಿಟ್‌ನಿಂದ ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದನೆ ಗುರಿ ಹೊಂದಲಾಗಿದೆ; (ಮಾಹಿತಿ ನೀಡುವುದು)

(ಇ) ಈ ಯೋಜನೆಯ ರೂಪುರೇಷೆಗಳೇನು; ಸಂಪೂರ್ಣ ಮಾಹಿತಿ ನೀಡುವುದು; ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು; (ವಿವರ ನೀಡುವುದು)

(ಈ) ಈ ಯೋಜನೆಯನ್ನು ಯಾವ ಯಾವ ತಾಲ್ಲೂಕು ಕೇಂದ್ರಗಳಲ್ಲಿ ಪ್ರಾರಂಭಿಸಲಾಗಿದೆ; ಸರ್ಕಾರವು ಇದುವರೆವಿಗೂ ಬಿಡುಗಡೆ ಮಾಡಿರುವ ಹಣವೆಷ್ಟು; ಖರ್ಚಾದ ಹಣವೆಷ್ಟು; ಕಾಮಗಾರಿಗಳ ಇತ್ತೀಚಿನ ಪ್ರಗತಿಯ ಸಂಪೂರ್ಣ ಮಾಹಿತಿಯನ್ನು ನೀಡುವುದು?

## ಪಶು ವೈದ್ಯಕೀಯ ಚಿಕಿತ್ಸಾ ಕೇಂದ್ರ ಪ್ರಾರಂಭಿಸುವ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೭೦ (೪೨೫೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಬೆಕ್ಕೇರಿ ಗ್ರಾಮದಲ್ಲಿ ಪಶು ವೈದ್ಯಕೀಯ ಚಿಕಿತ್ಸಾ ಕೇಂದ್ರ ಪ್ರಾರಂಭಿಸಲು ಕೈಗೊಂಡ ಕ್ರಮಗಳೇನು;

(ಆ) ಪಶು ವೈದ್ಯಕೀಯ ಚಿಕಿತ್ಸಾ ಕೇಂದ್ರ ಪ್ರಾರಂಭಿಸಲು ಸರ್ಕಾರವು ಕ್ರಮ ಕೈಗೊಂಡಿದ್ದಲ್ಲಿ ಪ್ರಗತಿ ಯಾವ ಹಂತದಲ್ಲಿದೆ? (ಮಾಹಿತಿ ನೀಡುವುದು)

## ಕಳಪೆ ಬೀಜಗಳಿಂದ ರೈತರಿಗೆ ಆದ ಹಾನಿಯ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೭೧ (೪೨೬೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಕಳೆದ ವರ್ಷ ಕೃಷಿ ಇಲಾಖೆಯಿಂದ ವಿತರಿಸಿದ ಬಿತ್ತನೆ ಬೀಜಗಳು ಕಳಪೆ ಗುಣಮಟ್ಟದ್ದಾಗಿದ್ದರಿಂದ ಬೆಳೆ ಹಾನಿಯಾಗಿ ರೈತರು ಆರ್ಥಿಕವಾಗಿ ಹಾನಿಗೊಳಗಾದ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕಳಪೆ ಮಟ್ಟದ ಬೀಜ ವಿತರಿಸಿದ ಕಂಪನಿಗಳಾವುವು; ಇಂತಹ ಕಂಪನಿಗಳ ವಿರುದ್ಧ ಸರ್ಕಾರವು ಕೈಗೊಂಡ ಕ್ರಮಗಳೇನು;

ಇ) ಇಂತಹ ಪರಿಸ್ಥಿತಿ ಪುನರಾವರ್ತನೆ ಆಗದಂತೆ ಸರ್ಕಾರವು ಕ್ರಮ ಕೈಗೊಂಡಿದೆಯೇ; (ವಿವರ ನೀಡುವುದು)

ಈ) ಇದರಿಂದ ಹಾನಿಗೊಳಗಾದ ರೈತರಿಗೆ ಸರ್ಕಾರದಿಂದಾಗಲಿ ಅಥವಾ ಇಂತಹ ಕಂಪನಿಗಳಿಂದಾಗಲಿ ಪರಿಹಾರ ನೀಡಲಾಗಿದೆಯೇ? (ಜಿಲ್ಲಾವಾರು ಮಾಹಿತಿ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ(ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಳಗಾವಿ ಕಾ.ಸೂ. 30–ಪ್ರತಿಗಳು–750